ಸಂಪುಟ: 05 ಸಂಚಿಕೆ: 195 ಪುಟಗಳು: 08 ಭಾನುವಾರ 28 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



ಏಕ್ವೇಣೀ ಜಪಕರ್ಣಪೂರ ನಗ್ನಾ ಖರಾಸ್ಥಿತಾ
ಲಂಬೋಷ್ಠೀ ಕಾರ್ಣಿಕಾ ಕರ್ಣಿ ತೈಲಾಭ್ಯಕ್ತ ಶರೀರಿಣೀ
ವಂ ಪಾದೋಲ್ಲಸಲ್ಲೋಹಲ್ತಾ ಕಂಟಕಭೂಷಾನಾ
ಭರ್ಧನ್ ಮೂರ್ಧಂ ಧ್ವಜಾ ಕೃಷ್ಣ ಕಾಳರಾತ್ರಿ ಭಯಂಕರಿ

## ಅತಿಥಿ ಉಪನ್ಯಾಸಕರ ನೇಮಕ: ತಜ್ಞರ ಜತೆ ಚರ್ಚೆ

• ಉದಯವಾಹಿನಿ, ಬೆಂಗಳೂರು

ಅತಿಥಿ ಉಪನ್ಯಾಸಕರಿಗೆ ಯುಜಿಸಿ ಅರ್ಹತೆ ಪಡೆಯಲು ಮೂರು ವರ್ಷಗಳ ಕಾಲಮಿತಿ ನಿಗದಿ ಮಾಡಿ, 2025–26ನೇ ಸಾಲಿಗೆ ಮುಂದುವರಿಸುವ ಕುರಿತು ಉನ್ನತ ಶಿಕ್ಷಣ ಇಲಾಖೆ ಅಧಿಕಾರಿಗಳು ಶನಿವಾರ ಕಾನೂನು ತಜ್ಞರ ಜತೆ ಚರ್ಚೆ ನಡೆಸಿದ್ದಾರೆ.

ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕರಾಗಿ ಕೆಲಸ ಮಾಡುವವರು ಸ್ನಾತಕೋತ್ತರ ಪದವಿಯ ಜತೆಗೆ ರಾಷ್ಟ್ರೀಯ ಅರ್ಹತಾ ಪರೀಕ್ಷೆ (ಎನ್ಇಟಿ) ಇಲ್ಲವೇ ಕರ್ನಾಟಕ ರಾಜ್ಯ ಅರ್ಹತಾ ಪರೀಕ್ಷೆ (ಕೆ–ಸೆಟ್) ತೇರ್ಗಡೆಯಾಗಿರಬೇಕು, ಪಿಎಚ್.ಡಿ ಪಡೆದಿರಬೇಕು ಎಂದು ಕೆಲ ವರ್ಷಗಳ ಹಿಂದೆಯೇ ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ನಿಯಮ ರೂಪಿಸಿತ್ತು. ಪ್ರಥಮ ದರ್ಜೆ ಕಾಲೇಜುಗಳಲ್ಲೂ ಇಂತಹ ಅರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರನ್ನೇ ನೇಮಿಸಿಕೊಳ್ಳಲು ಸೂಚಿಸಿತ್ತು. 'ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಡಿಮೆ ಗೌರವಧನ ಪಡೆದು ಹಲವು ವರ್ಷಗಳಿಂದ ಕೆಲಸ ಮಾಡುತ್ತಿರುವ ಯುಜಿಸಿ ಅರ್ಹತೆ ಪಡೆಯದ ಅತಿಥಿ ಉಪನ್ಯಾಸಕರನ್ನು ಮಾನವೀಯ ನೆಲೆಗಟ್ಟಿನಲ್ಲಿ ಮುಂದುವರಿಸುವ ಹಾಗೂ ಹೈಕೋರ್ಟ್ ತೀರ್ಪಿನ ಅನ್ವಯ ಕಾನೂನು ತೊಡಕು ಎದುರಾಗದಂತೆ ಪರಿಹಾರ ಕಂಡುಕೊಳ್ಳುವ ಕುರಿತು ಚರ್ಚೆ ನಡೆಸಲಾಗಿದೆ ಎಂದರು.

## ರಾಜ್ಯದ ಅತಿವೃಷ್ಟಿ ಪ್ರದೇಶಗಳ ವೀಕ್ಷಣೆಗೆ ಬಿಜೆಪಿ ತಂಡ

• ಉದಯವಾಹಿನಿ, ಬೆಂಗಳೂರು

ಅತಿವೃಷ್ಟಿ–ನೆರೆಯಿಂದ ಹಾನಿಗೆ ಒಳಗಾದ ಪ್ರದೇಶಗಳಿಗೆ ಭೇಟಿ ನೀಡಿ, ಸರ್ಕಾರವನ್ನು ಎಚ್ಚರಿಸಲು ಶನಿವಾರ ನಡೆದ ಬಿಜೆಪಿ ಪ್ರಮುಖರ ಸಮಿತಿ ಸಭೆ ನಿರ್ಧರಿಸಿದೆ. ಸಭೆಯ ನಂತರ ಈ ಕುರಿತು ಮಾಹಿತಿ ನೀಡಿದ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್, ಕರ್ನಾಟಕದ 16ಕ್ಕೂ ಹೆಚ್ಚು ಜಿಲ್ಲೆಗಳು ಅತಿವೃಷ್ಟಿಗೆ ಸಿಲುಕಿವೆ. ರೈತರ ನೆರವಿಗೆ ಸರ್ಕಾರ ಧಾವಿಸಿಲ್ಲ. ಪುಡಿಗಾಸನ್ನೂ ಬಿಡುಗಡೆ ಮಾಡಿಲ್ಲ. ಹಿಂದೆ ಬಿಜೆಪಿ ಅಧಿಕಾರದಲ್ಲಿ ಇದ್ದಾಗ ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯನ್ನು ನಂಬಿಕೊಳ್ಳದೆ. ರಾಜ್ಯ ಬಜೆಟ್‌ನಿಂದ ಹಣ ನೀಡಿ ರೈತರ ನೆರವಿಗೆ ಧಾವಿಸಿತ್ತು. ಈಗಿನ ಸರ್ಕಾರ ಜನರ ಕಷ್ಟಗಳನ್ನು ನಿರ್ಲಕ್ಷಿಸುತ್ತಿದೆ. ಈ ಕುರಿತು ವಾಸ್ತವ ಸ್ಥಿತಿಯ ಮಾಹಿತಿ ಪಡೆದು, ಸರ್ಕಾರಕ್ಕೆ ಮಾಹಿತಿ ನೀಡಲು ಬಿಜೆಪಿ ಪ್ರಮುಖ ನಾಯಕರ ನೇತೃತ್ವದಲ್ಲಿ ತಂಡಗಳನ್ನು ರಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು ಎಂದರು.

## ಪದವೀಧರರಿಗೆ ನಾಗರಿಕ ಜವಾಬ್ದಾರಿ ಮುಖ್ಯ: ಗೆಹ್ಲೋಟ್

• ಉದಯವಾಹಿನಿ, ಬೆಂಗಳೂರು

'ಪದವೀಧರರು ನಾಗರಿಕ ಜವಾಬ್ದಾರಿ ನಿಭಾಯಿಸಿದಾಗ ಅವರು ಪಡೆದ ಶಿಕ್ಷಣ ಸಮಾಜಮುಖಿಯಾಗುತ್ತದೆ' ಎಂದು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಹೇಳಿದರು. 'ವೃತ್ತಿಪರ ಶಿಕ್ಷಣಕ್ಕೆ ವಿಶ್ವವಿದ್ಯಾಲಯಗಳು ಒತ್ತು ನೀಡಬೇಕು. ಅಭಿವೃದ್ಧಿ ಹೊಂದಿದ ರಾಷ್ಟ್ರ ನಿರ್ಮಾಣಕ್ಕೆ ಕಲಿತ ವಿದ್ಯೆ ವಿನಿಯೋಗಿಸಬೇಕು. ಮಾನವೀಯತೆ ಹಾಗೂ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು' ಎಂದು ಸಲಹೆ ನೀಡಿದರು. ತಿರುವನಂತಪುರದ ಭಾರತೀಯ ವಿಜ್ಞಾನ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕ ಜರುಗು ನರಸಿಂಹಮೂರ್ತಿ ಮಾತನಾಡಿ, 'ವಿದ್ಯಾರ್ಥಿಗಳು ಉದಯೋನ್ಮುಖ ತಂತ್ರಜ್ಞಾನದ ಬಳಕೆಯತ್ತ ಚಿತ್ತ ಹರಿಸಬೇಕು. ಹಸಿರು ಶಕ್ತಿ, ತ್ಯಾಜ್ಯ ನಿರ್ವಹಣೆ, ಆರೋಗ್ಯ ರಕ್ಷಣೆ, ಸೈಬರ್ ಭದ್ರತೆ ಮತ್ತು ಕೃತಕ ಬುದ್ಧಿಮತ್ತೆಯಂತಹ ಸವಾಲುಗಳನ್ನು ಎದುರಿಸಲು ಸಿದ್ಧರಾಗಬೇಕು' ಎಂದರು.

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ಮೊದಲ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಚಿನ್ನದ ಪದಕ, 2,747 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು.

## ಕೈ ಕಮಿಷನ್ ದುಪ್ಪಟ್ಟು: ಸಿಎಂಗೆ ರಾಜ್ಯ ಗುತ್ತಿಗೆದಾರರ ಸಂಘ ಪತ್ರ

• ಉದಯವಾಹಿನಿ, ಬೆಂಗಳೂರು

'ಹಿಂದಿನ ಸರ್ಕಾರಕ್ಕಿಂತ ನಿಮ್ಮ ನೇತೃತ್ವದ ಸರ್ಕಾರದಲ್ಲಿ ಬಿಲ್ ಪಾವತಿಗೆ ಕಮಿಷನ್ ದುಪ್ಪಟ್ಟಾಗಿದೆ' ಎಂದು ಆರೋಪಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರಾಜ್ಯ ಗುತ್ತಿಗೆದಾರರ ಸಂಘ ಪತ್ರ ಬರೆದಿದೆ. 'ತಾವು ವಿರೋಧ ಪಕ್ಷದ ನಾಯಕರಾಗಿದ್ದಾಗ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಗುತ್ತಿಗೆದಾರರ ಬಾಕಿ ಹಣ ಬಿಡುಗಡೆಗೆ ಯಾವುದೇ ಕಮಿಷನ್ ತೆಗೆದುಕೊಳ್ಳುವುದಿಲ್ಲ ಎಂದು ತಿಳಿಸಿದ್ದೀರಿ. ಆದರೆ, ಹಿಂದಿನ ಸರ್ಕಾರಕ್ಕಿಂತ ಎಲ್ಲಾ ಇಲಾಖೆಗಳಲ್ಲೂ ಈಗ ಕಮಿಷನ್ ದುಪ್ಪಟ್ಟು ಆಗಿದೆ ಎಂದು ನಿಮ್ಮ ಗಮನಕ್ಕೆ ತರಲು ಸಂಘ ವಿಷಾದ ವ್ಯಕ್ತಪಡಿಸುತ್ತದೆ' ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

'ರಾಜ್ಯದಲ್ಲಿ ಹಿಂದಿದ್ದ ಬಿಜೆಪಿ ನೇತೃತ್ವದ ಸರ್ಕಾರಕ್ಕಿಂತ ಈಗಿನ ಕಾಂಗ್ರೆಸ್ ಸರ್ಕಾರದಲ್ಲಿ, ಅಧಿಕಾರಿಗಳು ಹೆಚ್ಚು ಕಮಿಷನ್ ಪಡೆಯುತ್ತಾರೆ' ಎಂದು ರಾಜ್ಯ ಗುತ್ತಿಗೆದಾರರ ಸಂಘ 2025ರ ಮಾರ್ಚ್‌ನಲ್ಲಿ ಆರೋಪಿಸಿತ್ತು. ಆಗ ಮುಖ್ಯಮಂತ್ರಿಯವರು ಗುತ್ತಿಗೆದಾರರೊಂದಿಗೆ ಸಭೆ ನಡೆಸಿ, ಏಪ್ರಿಲ್‌ನಲ್ಲಿ ಶೇ 50ರಷ್ಟು ಬಾಕಿ ಬಿಲ್ ಬಿಡುಗಡೆ ಮಾಡುವ ಭರವಸೆ ನೀಡಿದ್ದರು.

# ಭೀಮಾ ಅಬ್ಬರ ಜನ ತತ್ತರ

**ಉತ್ತರ ಜಲ ದಿಗ್ಬಂಧನ**



**ಕಲಬುರಗಿಯಲ್ಲಿ ವರುಣನ ಆರ್ಭಟ**

• ಉದಯವಾಹಿನಿ, ಬೆಂಗಳೂರು

ರಾಜ್ಯದ ನಾನಾ ಕಡೆ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಅನೇಕ ಕಡೆ ಹಾನಿ ಸಂಭವಿಸಿದ್ದು, ಬಾಗಲಕೋಟೆಯಲ್ಲಿ ಮನೆಯ ಮೇಲ್ಛಾವಣಿ ಕುಸಿದು ಬಾಲಕನೊಬ್ಬ ಸಾವನ್ನಪ್ಪಿರುವ ಘಟನೆ ಸಂಭವಿಸಿದೆ.

ಬಾಗಲಕೋಟೆ, ಬೀದರ್, ಕಲಬುರಗಿ, ಬೆಳಗಾವಿ, ವಿಜಯಪುರ, ಸೇರಿದಂತೆ ಕಲ್ಯಾಣ ಮತ್ತು ಕಿತ್ತೂರು ಕರ್ನಾಟಕ ಭಾಗದಲ್ಲಿ ಭಾರೀ ಮಳೆಯಿಂದಾಗಿ ಅಪಾರ ಪ್ರಮಾಣದ ಬೆಳೆ ನಷ್ಟವಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಕೆಲವು ಕಡೆ ಜಾನುವಾರುಗಳು ಕೊಚ್ಚಿಕೊಂಡು ಹೋಗಿವೆ. ಈ ನಡುವೆ ಮಳೆಯಿಂದಾಗಿ ಸಂಕಷ್ಟಕ್ಕೊಳಗಾಗಿರುವ ಜನರಿಗೆ ತಕ್ಷಣವೇ ಪರಿಹಾರ ಒದಗಿಸಬೇಕೆಂದು ಸರ್ಕಾರ ಸೂಚಿಸಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ತಹಶೀಲ್ದಾರ್ ಸೇರಿದಂತೆ ಇಡೀ ಜಿಲ್ಲಾಡಳಿತ ಸಮರೋಪಾದಿಯಲ್ಲಿ ಪರಿಹಾರ ಕಾರ್ಯದಲ್ಲಿ ತೊಡಗಿಸಿಕೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ರಬಕವಿಬನಹಟ್ಟಿ ತಾಲ್ಲೂಕಿನ ಮಹಾಲಿಂಗಪುರ ಪಟ್ಟಣದಲ್ಲಿ ನಿರಂತರ ಮಳೆಗೆ ಮನೆಯ ತಗಡಿನ ಮೇಲ್ಛಾವಣಿ ಹಾಗೂ ಗೋಡೆ ಕುಸಿದು ನಾಗಪ್ಪ ಲಾತೂರ್ ಮಗ ದರ್ಶನ್ ಲಾತೂರ್ (11) ಮೃತಪಟ್ಟಿದ್ದಾನೆ. ಬೆಳಗಿನ ಜಾವ 5 ಗಂಟೆಯ ಸುಮಾರಿಗೆ ಅವಘಡ ಸಭಂಭವಿಸಿದೆ. ಘಟನೆಯಲ್ಲಿ ಇನ್ನೊಬ್ಬ ಬಾಲಕ ಶ್ರೀಶೈಲ ಗಾಯಗೊಂಡಿದ್ದು, ಸ್ಥಳೀಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.ಕಲಬುರಗಿಯಲ್ಲಿ ಭಾರೀ ಮಳೆಯಿಂದ ಎಲ್ಲೆಡೆ ಪ್ರವಾಹ ಉಂಟಾಗಿದೆ. ಹಲವು ಸೇತುವೆಗಳು ಜಲಾವೃತಗೊಂಡಿವೆ. ಇದರಿಂದ ಗ್ರಾಮಗಳ ಸಂಪರ್ಕ ಕಡಿದುಕೊಂಡಿದ್ದು ಜನಜೀವನ ಅಸ್ತವ್ಯಸ್ತವಾಗಿದೆ.

**ಆವರಿಸಿದ ಭೀಮಾ ಪ್ರವಾಹ:** ತೊಗರಿ ನಾಡು ಕಲಬುರಗಿ ಅಕ್ಷರಶಃ ತತ್ತರಿಸುತ್ತಿದೆ. ಜಿಲ್ಲೆಯಲ್ಲಿ ಬಿಟ್ಟು ಬಿಡದೆ ಸುರಿಯುತ್ತಿರುವ ಧಾರಾಕಾರ ಮಳೆ ಅವಾಂತರ ಸೃಷ್ಟಿಸಿದ್ರೆ. ಇತ್ತ ಮಹಾರಾಷ್ಟ್ರದ ಜಲಾಶಯಗಳಿಂದ ನಿರಂತರವಾಗಿ ನೀರು ಹರಿಸುತ್ತಿರುವುದರಿಂದ ಭೀಮಾ ನದಿ ಅಪಾಯ ಮಟ್ಟ ಮೀರಿ ಹರಿಯುತ್ತಿದೆ. ಇದರ ಮಧ್ಯೆ, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಭೀಮಾ ನದಿಗೆ 3.40 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ:** ಕಲಬುರಗಿ ಸೇರಿದಂತೆ ನೆರೆಯ ಮಹಾರಾಷ್ಟ್ರದಲ್ಲಿ ವ್ಯಾಪಕವಾಗಿ ಮಳೆಯಾಗುತ್ತಿದ್ದು, ಜಿಲ್ಲೆಯ ಜನ ಜೀವನ ಅಸ್ತವ್ಯಸ್ತವಾಗಿದೆ. ಮಹಾರಾಷ್ಟ್ರದ ವೀರ್, ಸಿನಾ ಮತ್ತು ಉಜ್ಜನಿ ಜಲಾಶಯದಿಂದ 3.40 ಲಕ್ಷ ಕ್ಯೂಸೆಕ್ ನೀರು ಬಿಟ್ಟ ಪರಿಣಾಮ ಅಫಜಲಪುರ ಮತ್ತು ಜೇವರ್ಗಿ ತಾಲ್ಲೂಕಿನಲ್ಲಿ ಭೀಮಾ ನದಿ ಆರ್ಭಟ ಕ್ಷಣ ಕ್ಷಣಕ್ಕೂ ಹೆಚ್ಚಾಗುತ್ತಿದ್ದು,ಗಾಣಗಾಪುರದ ಬಳಿಯಿರೋ ಇಟಗಾ –ಗಾಣಗಾಪುರ ಮತ್ತು ಘತ್ತರಗಿ ಸೇತುವೆ ಮುಳುಗಡೆಯಾಗಿ ಪ್ರವಾಹ ಪರಿಸ್ಥಿತಿ ಎದುರಾಗಿದೆ. ಇತ್ತ ಮಣ್ಣೂರು ಗ್ರಾಮದ ಬಳಿ ಪ್ರವಾಹದಲ್ಲಿ ಸಿಲುಕಿದ್ದ ಜನರನ್ನು ಎಸ್‌ಡಿಆರ್‌ಎಫ್ ಸಿಬ್ಬಂದಿಗಳು ಬೋಟ್ ಮೂಲಕ ಕಾಳಜಿ ಕೇಂದ್ರಕ್ಕೆ ಶಿಫ್ಟ್ ಮಾಡಿದ್ದಾರೆ.

**ಕಾಳಜಿ ಕೇಂದ್ರಗಳ ಸ್ಥಾಪನೆ:** ಜಿಲ್ಲೆಯಲ್ಲಿ ಒಟ್ಟು ಈಗಾಗಲೇ 36 ಗ್ರಾಮಗಳು ಸಂಪೂರ್ಣ ಪ್ರವಾಹ ಪೀಡಿತವಾಗಿವೆ. ಇವುಗಳಲ್ಲಿ ಅಫಜಲ್‌ಪುರ ತಾಲ್ಲೂಕಿನ 17, ಜೇವರ್ಗಿ ತಾಲ್ಲೂಕಿನ 8 ಹಾಗೂ ಕಲಬುರಗಿ ಮತ್ತು ಚಿತ್ತಾಪುರ ತಾಲ್ಲೂಕಿನಲ್ಲಿ ತಲಾ 5 ಗ್ರಾಮಗಳು ಸೇರಿವೆ. ಜಿಲ್ಲೆಯಲ್ಲಿ 31 ಕಾಳಜಿ ಕೇಂದ್ರಗಳನ್ನು ಗುರುತಿಸಲಾಗಿದ್ದು, ಈಗಾಗಲೇ ಒಟ್ಟು 12 ಕಾಳಜಿ ಕೇಂದ್ರಗಳನ್ನು ತೆರೆಯಲಾಗಿದೆ. ಅಫಜಲ್‌ಪುರ ತಾಲ್ಲೂಕಿನ 3 ಜೇವರ್ಗಿ ತಾಲ್ಲೂಕಿನ 8 ಹಾಗೂ ಕಲಬುರಗಿ ತಾಲ್ಲೂಕಿನಲ್ಲಿ 1 ತೆರೆಯಲಾಗಿದೆ. ಒಟ್ಟು 1,436 ಜನರಿಗೆ ಈ ಕಾಳಜಿ ಕೇಂದ್ರಗಳಲ್ಲಿ ವಾಸಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು ಸಚಿವ ಪ್ರಿಯಾಂಕ್ ತಿಳಿಸಿದ್ದಾರೆ.

**ರಸ್ತೆ ಜಲಾವೃತ-ಸಂಚಾರ ಅಸ್ತವ್ಯಸ್ತ:** ಭಾರಿ ಮಳೆಗೆ ಸವದತ್ತಿ ತಾಲ್ಲೂಕಿನ ಹೊಸೂರ ಗ್ರಾಮದ ಬಳಿ ಹಳ್ಳ ತುಂಬಿ ರಸ್ತೆ ಮೇಲೆ ಹರಿಯುತ್ತಿದೆ. ಇದರಿಂದ ಬೈಲಹೊಂಗಲ–ಮುನವಳ್ಳಿ ಸಂಚಾರ ಬಂದ್ ಆಗಿದೆ. ಈ ರಸ್ತೆ ಬಂದ್ ಆಗಿರುವ ಪರಿಣಾಮ ಯಾವುದೇ ವಾಹನಗಳು ಓಡಾಡುತ್ತಿಲ್ಲ. ಹಾಗಾಗಿ, ಮುನವಳ್ಳಿ ಕಡೆ ಹೋಗುವ ಜನರು ಪರದಾಡುವಂತಾಗಿದೆ. ಮತ್ತೊಂದೆಡೆ ಶಿವಾಪುರ–ಯರಗಟ್ಟಿ ಹೋಗುವ ರಸ್ತೆಯೂ ಜಲಾವೃತ ಆಗಿದೆ. ಅದೇ ರೀತಿ ಜಿಲ್ಲೆಯ ವಿವಿಧೆಡೆಯೂ ಮಳೆ ಅವಾಂತರ ಸೃಷ್ಟಿಸಿದ್ದು, ಮಳೆರಾಯನಿಗೆ ಜನ ಹಿಡಿಶಾಪ ಹಾಕುತ್ತಿದ್ದಾರೆ. ಕಲಬುರಗಿ ಜಿಲ್ಲೆಯಲ್ಲೂ ಮಳೆರಾಯನ ಅಬ್ಬರ ಜೋರಾಗಿದೆ. ಮಹಾರಾಷ್ಟ್ರದ ಜಲಾಶಯಗಳಿಂದ ನೀರು ಬಿಡುಗಡೆ ಮಾಡಿರುವುದರಿಂದ ಭೀಮಾ ನದಿ ಅಪಾಯ ಮಟ್ಟ ಮೀರಿ ಹರಿಯುತ್ತಿದ್ದು, ಜಿಲ್ಲೆಯಲ್ಲಿ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ.


### ಮಣ್ಣಿನ ಮನೆಗಳಿಗೆ ಧಕ್ಕೆ

ಸುರಿದ ಮಳೆಗೆ ಜಿಲ್ಲೆಯಲ್ಲಿ 20ಕ್ಕೂ ಹೆಚ್ಚು ಮಣ್ಣಿನ ಮನೆ ಕುಸಿದಿವೆ. ಬಾದಾಮಿ ತಾಲ್ಲೂಕಿನ ನೀರಲಕೇರಿ ಗ್ರಾಮದಲ್ಲಿ ಈರಣ್ಣ ಉಳ್ಳಾಗಡ್ಡಿಯವರ ಮನೆ ಕುಸಿದಿದೆ. ಮನೆಗೆ ಹಾನಿಯಾಗುವ ಮುನ್ಸೂಚನೆಯಿಂದ ಇಡೀ ಕುಟುಂಬ ಬೇರೆಡೆ ತೆರಳಿದ ಕಾರಣ ಜೀವಹಾನಿ ಸಂಭವಿಸಿಲ್ಲ. ಬಾಗಲಕೋಟೆ ತಾಲ್ಲೂಕಿನ ಚಿಕ್ಕಶೆಲ್ಲಿಕೇರಿ, ದೇವನಾಳ, ಹಿರೇಶೆಲ್ಲಿಕೇರಿ ಸೇರಿದಂತೆ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಮನೆಗಳು ಕುಸಿದಿವೆ. ಕೆರೂರನ ಚಿನಗುಂಡಿ ಪ್ಲಾಟ್‌ನ ಸರಕಾರಿ ಪ್ರೌಢಶಾಲೆ ಕಾಂಪೌಂಡ್ ಕುಸಿದಿದೆ.



### ನವಿಲು ತೀರ್ಥ ಜಲಾಶಯ ಸಂಪೂರ್ಣ ಭರ್ತಿ

ಮಲಪ್ರಭಾ ನದಿಗೆ ನೀರಿನ ಹರಿವು ಹೆಚ್ಚಾಗಿದ್ದು, ಸವದತ್ತಿ ತಾಲ್ಲೂಕಿನ ಮುನವಳ್ಳಿ ಬಳಿ ಇರುವ 2079.50 ಅಡಿ ಸಾಮರ್ಥ್ಯದ ನವಿಲು ತೀರ್ಥ ಜಲಾಶಯ ಸಂಪೂರ್ಣ ಭರ್ತಿಯಾಗಿದೆ. ಜಲಾಶಯದ ಸುರಕ್ಷತೆ ದೃಷ್ಟಿಯಿಂದ ಜಲಾಶಯ ಅಧಿಕಾರಿಗಳು 5ಸಾವಿರ ಕ್ಯೂಸೆಕ್ ನೀರು ಹೊರಗೆ ಬಿಟ್ಟಿದ್ದಾರೆ. ರಾಮದುರ್ಗ, ಬಾದಾಮಿ ತಾಲ್ಲೂಕಿನ ನದಿ ಪಾತ್ರದ ಗ್ರಾಮಗಳಲ್ಲಿ ಪ್ರವಾಹದ ಭೀತಿ ಉಂಟಾಗಿದೆ. ಜನರು ಎಚ್ಚರಿಕೆವಹಿಸುವಂತೆ ಅಧಿಕಾರಿಗಳು ತಿಳಿಸಿದ್ದಾರೆ. ನಿರಂತರ ಮಳೆಗೆ ಗೋಕಾಕ ನಗರದ ರಸ್ತೆಗಳಿಗೆ ನೀರು ನುಗ್ಗಿದೆ. ಆರ್‌ಟಿಒ ಕಚೇರಿ ಬಳಿಯ ಮಾಲದಿನ್ನಿ ಕ್ರಾಸ್ ರಸ್ತೆ ಸಂಪೂರ್ಣ ಜಲಾವೃತಗೊಂಡಿದೆ.



### ಜಮೀನಿನಲ್ಲೇ ತುಂಬಿದ ಜಲ

ಕಳೆದ ಐದು ದಿನಗಳಿಂದ ಸುರಿಯುತ್ತಿರುವ ಮಳೆ ಕೃಷಿಗೆ ಆತಂಕ ತಂದೊಡ್ಡಿದೆ. ಈರುಳ್ಳಿ, ಸೂರ್ಯಕಾಂತಿ, ಸಜ್ಜೆ, ಮೆಕ್ಕೆಜೋಳ, ದ್ರಾಕ್ಷಿ ಸೇರಿದಂತೆ ಅಂದಾಜು 5 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿರುವ ಸಾಧ್ಯತೆಯಿದೆ. ಜಮೀನುಗಳಲ್ಲಿ ನೀರು ನುಗ್ಗಿದ ಕಾರಣ ಬೆಳೆ ಮುಳುಗಿದೆ. ಕೆಲವೆಡೆ ಬೆಳೆಗಳ ಬೇರಿನಲ್ಲಿ ನೀರು ಆವರಿಸಿದ್ದು, ಕೊಳೆತು ಹಾಳಾಗುವ ಸ್ಥಿತಿಯಿದೆ. ಮಳೆ ಸ್ಥಗಿತಗೊಂಡ ನಂತರ ಕಂದಾಯ ಇಲಾಖೆ ನೇತೃತ್ವದಲ್ಲಿಜಂಟಿ ಸಮೀಕ್ಷೆ ನಡೆಯಲಿದ್ದು, ಹಾನಿಯ ನಿಖರ ಪ್ರಮಾಣ ಗೊತ್ತಾಗಲಿದೆ.

1. ಕೆರೆ, ಹಳ್ಳಗಳು ಭರ್ತಿ, ಗೋಡೆ ಕುಸಿದು ಬಾಲಕ ಸಾವು, ಜಮೀನುಗಳಿಗೆ ನುಗ್ಗಿದ ನೀರು,
2. ಧುಮ್ಮಿಕ್ಕಿದ ಕಿರು ಜಲಪಾತಗಳು, ಜಿಲ್ಲೆಯ ಜನಜೀವನ ಸಂಪೂರ್ಣ ಅಸ್ತವ್ಯಸ್ತ
3. ಸೂರ್ಯ, ಚಂದ್ರನಿಗೂ ವಿಶ್ರಾಂತಿ, ಜಿಲ್ಲೆಯ ಎಲ್ಲೆಡೆ ವರುಣನದ್ದೇ ಕಾಂತಿ

## ಮದ್ದೂರು ಗಲಭೆ: ಬಿಜೆಪಿ ಸತ್ಯಶೋಧನಾ ವರದಿ ಬಹಿರಂಗ

• ಉದಯವಾಹಿನಿ, ಬೆಂಗಳೂರು

ಮದ್ದೂರಿನಲ್ಲಿ 34 ವರ್ಷಗಳಿಂದ ಗಣಪತಿ ಉತ್ಸವ ನಡೆಯುತ್ತಿದ್ದು, ಒಂದು ವರ್ಷವೂ ಘರ್ಷಣೆ ಆಗಿರಲಿಲ್ಲ; ಕಳೆದ ವರ್ಷ ಡಿಸೆಂಬರ್‌ನಲ್ಲಿ ಮಸೀದಿ ಅಕ್ರಮವಾಗಿ ನಿರ್ಮಾಣಗೊಂಡ ಬಳಿಕ ಗಲಾಟೆಗೆ ಕುಮ್ಮಕ್ಕು ಕೊಟ್ಟಿದ್ದಾರೆ ಎಂದು ಬಿಜೆಪಿ ರಾಜ್ಯ ಮುಖ್ಯ ವಕ್ತಾರ ಅಶ್ವತ್ಥ ನಾರಾಯಣ್ ಅವರು ಆರೋಪಿಸಿದ್ದಾರೆ.

**ಅಕ್ರಮ ಮಸೀದಿ ವಿರುದ್ಧ ಕ್ರಮ ಜರುಗಿಸಬೇಕು:** ಅಮಾನುಷವಾಗಿ ವರ್ತಿಸಿದ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಬೇಕು. ಗಾಯಾಳುಗಳಿಗೆ ಸರಕಾರ ಪರಿಹಾರ ಕೊಡಬೇಕೆಂದು ಒತ್ತಾಯಿಸಿದ್ದಾರೆ.

ಗಲಭೆ ಮಾಡುವ ಉದ್ದೇಶದಿಂದ ಬೀದಿ ದೀಪ ನಂದಿಸಿದ್ದಾರೆ. ಪೊಲೀಸರು ಗಣಪತಿ ಮೆರವಣಿಗೆಗೆ ಯಾವುದೇ ರೀತಿ ಪೂರ್ವತಯಾರಿ ಇಲ್ಲದೇ ಬೇಜವಾಬ್ದಾರಿಯಿಂದ ನಡೆದುಕೊಂಡಿದ್ದರು ಎಂದು ಟೀಕಿಸಿದರು. ಶಾಂತ ರೀತಿಯಲ್ಲಿ ತೆರಳುತ್ತಿದ್ದ ಮೆರವಣಿಗೆ ಮೇಲೆ ಪೊಲೀಸರು ಏಕಾಏಕಿ ಲಾಠಿಚಾರ್ಜ್ ಮಾಡಿದ್ದಾಗಿ ಆಕ್ಷೇಪಿಸಿದರು. ಜಿಲ್ಲಾಡಳಿತ– ಪೊಲೀಸ್ ಇಲಾಖೆಯ ವೈಫಲ್ಯವೇ ಇದಕ್ಕೆ ನೇರ ಕಾರಣ ಎಂದು ಸ್ಪಷ್ಟವಾಗಿ ಕಂಡುಬರುತ್ತದೆ ಎಂದು ನುಡಿದರು. ಮಂಡ್ಯ ಜಿಲ್ಲೆ ಮದ್ದೂರಿನ ರಾಮ್– ರಹೀಂ ನಗರದಲ್ಲಿ 34 ವರ್ಷಗಳಿಂದ ನಿರಂತರವಾಗಿ ಇಲ್ಲಿ ಗಣಪತಿ ಪ್ರತಿಷ್ಠೆ ಮಾಡಿ ವಿಸರ್ಜನೆ ನಡೆಯುತ್ತಿತ್ತು. ಸೆ.7ರಂದು ಇಲ್ಲಿನ ಹಿಂದೂ ಗಣಪತಿ ಉತ್ಸವದ ವಿಸರ್ಜನೆಗೆ ಹೊರಟಾಗ ಹೊಸದಾಗಿ ನಿರ್ಮಿಸಿದ ಮಸೀದಿ ಮುಂಭಾಗದಲ್ಲಿ ಮೆರವಣಿಗೆ ತೆರಳುವಾಗ ಮ್ಯೂಸಿಕ್, ಬ್ಯಾಂಡ್ ಸೆಟ್ ಬಾರಿಸದೇ ಇರಲು ಪೊಲೀಸರು ಕೋರಿದ್ದರು. ಅದರೆ ಕಾರ್ಯಕರ್ತರು ನಿಶ್ಯಬ್ದವಾಗಿ ತೆರಳುತ್ತಿದ್ದರು. 7.20ಕ್ಕೆ ಅಲ್ಲಿದ್ದ ಹೈಮಾಸ್ಟ್ ಬೀದಿದೀಪವನ್ನು ಆರಿಸಿದ್ದರು ಎಂದು ಆರೋಪಿಸಿದರು.



**ಸರ್ಕಾರದ ವಿರುದ್ಧ ಕಮಲ ಪಡೆಯ ಆರೋಪ**

ಏಕಾಏಕಿ ಮನೆಗಳ ಮೇಲಿನ ಮಸೀದಿ ಕಡೆಯಿಂದ ಕಲ್ಲು ತೂರಿದ್ದಾರೆ. ಬಿಗು ವಾತಾವರಣ ನಿರ್ಮಾಣವಾಗಿದ್ದು, ಗಣಪತಿ ಉತ್ಸವದಲ್ಲಿ ತೆರಳುವ ಕಾರ್ಯಕರ್ತರ ಮೇಲೆ ಪೊಲೀಸರು ಬಲವಾದ ಲಾಠಿ ಪ್ರಹಾರ ಮಾಡಿದ್ದರು ಎಂದು ವಿವರಿಸಿದರು.

ಗಣಪತಿ ವಿಗ್ರಹವನ್ನು ಪೊಲೀಸ್ ವಶಕ್ಕೆ ಪಡೆದಿದ್ದು, ಪೊಲೀಸರೇ ಗಣಪತಿ ವಿಸರ್ಜನೆ ಮಾಡಿದ್ದಾರೆ ಎಂದರು.

ಹಾದಿ ಬೀದಿಯಲ್ಲಿ ಹೋಗುವವರ ಮೇಲೂ ಲಾಠಿ ಚಾರ್ಜ್ ಮಾಡಿದ್ದು, ಮರುದಿನ ಕಾರ್ಯಕರ್ತರು ಮದ್ದೂರು ಬಂದ್ ಕರೆ ನೀಡಿದ್ದರು ಜಿಲ್ಲೆಯ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರು ಬೇಜವಾಬ್ದಾರಿ ಹೇಳಿಕೆ ಕೊಟ್ಟಿದ್ದರು.

ಈ ಎಲ್ಲ ಘಟನೆಗೆ ಬಿಜೆಪಿ ಕುಮ್ಮಕ್ಕೇ ಕಾರಣ. ಆರೆಸ್ಸೆಸ್, ಬಜರಂಗದಳ ಕಾರಣ ಎಂದು ಎಲ್ಲೋ ಕುಳಿತು ಹೇಳಿಕೆ ನೀಡಿದ್ದರು ಎಂದು ಟೀಕಿಸಿದರು. ಬಳಿಕ ಸಾಮೂಹಿಕ ಗಣಪತಿ ವಿಸರ್ಜನೆಗೆ ಮುಂದಾದರು. ಆ ಮಸೀದಿಯ ಭಾಗವಾದ ಮುಸ್ಲಿಂ ಮುಖಂಡ ಆದಿಲ್ ಎಂಬುವರು ಈ ಘಟನೆಗೆ ನೇರವಾಗಿ ಮುಸ್ಲಿಂ ಯುವಕರೇ ಕಾರಣ ಎಂದು ಹೇಳಿಕೆ ಕೊಟ್ಟಿದ್ದರು. ಬಳಿಕ ಚಲುವರಾಯಸ್ವಾಮಿ ಅವರೂ ಮುಸ್ಲಿಮರ ತಪ್ಪೆಂದು ಹೇಳಿಕೆ ಕೊಟ್ಟರು.

ಈ ರೀತಿ ಬೇಜವಾಬ್ದಾರಿಯಿಂದ ಸಚಿವರು ನಡೆದುಕೊಂಡಿದ್ದರು ಎಂದು ಆಕ್ಷೇಪಿಸಿದರು. ನಾನು, ನಿವೃತ್ತ ಐಪಿಎಸ್ ಅಧಿಕಾರಿ ಭಾಸ್ಕರ್ ರಾವ್, ವೆಂಕಟೇಶ್ ದೊಡ್ಡೇರಿ, ವಿಜಯಪ್ರಸಾದ್, ಡಾ.ಎನ್.ಎಸ್.ಇಂದ್ರೇಶ್, ಕು.ಮಂಜುಳಾ, ಮುಖಂಡ ಸ್ವಾಮಿಗೌಡ ಅವರಿದ್ದ ಸತ್ಯಶೋಧನಾ ಸಮಿತಿಯನ್ನು ರಾಜ್ಯಾಧ್ಯಕ್ಷರು ರಚಿಸಿದ್ದರು.

ನಾವು ಸ್ಥಳಕ್ಕೆ ಭೇಟಿ ಕೊಟ್ಟಿದ್ದೇವೆ ಎಂದರು. 3 ದಿನಗಳ ಮೊದಲು ಈದ್ ಮಿಲಾದ್ ಆಚರಿಸಿದ್ದರು. ಉದ್ದೇಶಪೂರ್ವಕವಾಗಿ ಗಣೇಶನ ಪ್ರತಿಷ್ಠೆ ಮಾಡಿದ ಶಾಮಿಯಾನದ ಮುಂದೆ ಮುಸ್ಲಿಂ ಯುವಕರು ಡ್ಯಾನ್ಸ್ ಮಾಡಿದ್ದಾರೆ. ಆದರೆ, ಹಿಂದೂ ಯುವಕರು ಘರ್ಷಣೆಗೆ ಅವಕಾಶವನ್ನು ಮಾಡಿರಲಿಲ್ಲ. ಶಾಂತ ರೀತಿಯಿಂದ ಸ್ಪಂದಿಸಿದ್ದರು ಎಂದರು.

# ಭೂಸ್ವಾಧೀನಕ್ಕೆ ಬಿಜೆಪಿ ಸರ್ಕಾರಕ್ಕೆ ಸಹಕಾರ ಕೊಟ್ಟವರು ಈಗ ನನ್ನನ್ನು ಪ್ರಶ್ನೆ ಮಾಡುತ್ತಿರುವುದೇಕೆ

■ ಬಿಜೆಪಿ ಸರ್ಕಾರ 900 ಎಕರೆ ಜಾಗವನ್ನು ಕೆಐಎಡಿಬಿಎಗೆ ನೀಡುವಾಗ ಸಹಕಾರ ಕೊಟ್ಟಿದ್ದೇಕೆ?

• ಉದಯವಾಹಿನಿ, ಬೆಂಗಳೂರು

ಬಿಡದಿಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ನಗರ ಯೋಜನೆಗೆ ವಿರೋಧ ಮಾಡುತ್ತಿರುವ ದೇವೇಗೌಡರು, ಕುಮಾರಸ್ವಾಮಿ, ಮಾಜಿ ಶಾಸಕ ಮಂಜುನಾಥ್ ಅವರು, ಬಿಜೆಪಿ ಸರ್ಕಾರ 900 ಎಕರೆ ಜಾಗವನ್ನು ಕೆಐಎಡಿಬಿಎಗೆ ನೀಡುವಾಗ ಸಹಕಾರ ಕೊಟ್ಟಿದ್ದೇಕೆ? ಈಗ ನನ್ನನ್ನು ಪ್ರಶ್ನೆ ಮಾಡುತ್ತಿರುವುದೇಕೆ?'' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಪ್ರಶ್ನಿಸಿದ್ದಾರೆ.

ರಾಮನಗರದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶನಿವಾರ ಪ್ರತಿಕ್ರಿಯೆ ನೀಡಿದರು. ಜಿಬಿಐಟಿ ವಿರುದ್ಧ ದೇವೇಗೌಡರು ಹೋರಾಟ ಮಾಡುವ ಬಗ್ಗೆ ಕೇಳಿದಾಗ, ''ದೇವೇಗೌಡರು ಹೋರಾಟ ಮಾಡುವುದಾದರೆ ಬಹಳ ಸಂತೋಷ. ಈ ಯೋಜನೆಗೆ ಅಧಿಸೂಚನೆ ಹೊರಡಿಸಿದ್ದೇ ಅವರ ಸುಪುತ್ರ. ಈ ಬಿಡದಿ ಟೌನ್ ಶಿಪ್ ಗೆ ಡಿಎಲ್ ಎಫ್ ಜೊತೆ ಒಪ್ಪಂದ ಮಾಡಿಕೊಂಡಿದ್ದೂ ಅವರೇ, ಹಣ ಕಟ್ಟಿಸಿಕೊಂಡಿದ್ದೂ ಅವರೇ. ಅವರ ಆಡಳಿತ ಅವಧಿಯಲ್ಲಿ ಈ ಭೂಮಿಯನ್ನು ಯಾಕೆ ಡಿನೋಟಿಫಿಕೇಷನ್ ಮಾಡಲಿಲ್ಲ? ಯಡಿಯೂರಪ್ಪ ಅವರು ಕೆಐಎಡಿಬಿಗೆ ಭೂಮಿ ಕೊಟ್ಟಾಗ ಆ ಭಾಗದ ಎಲ್ಲಾ ರೈತರು ಪರಿಹಾರ ಪಡೆದಿದ್ದಾರೆ. ಈಗ ಆ ಜಾಗ ಕೆಐಎಡಿಬಿ ಸ್ವತ್ತಾಗಿದೆ. ಇವರೆಲ್ಲ ಅಂದು ಪ್ರಶ್ನೆ ಮಾಡದೇ ಸಹಕಾರ ಕೊಟ್ಟಿದ್ದೇಕೆ? ಎಂದು ಕೇಳಿದರು.



**ಜೆಡಿಎಸ್‌ಗೆ ಡಿಕೆಶಿ ತಿರುಗೇಟು**

### ಅಧಿಕಾರ ಇದ್ದಾಗ ಅಶೋಕ್, ದೇವೇಗೌಡರು ಇದನ್ನು ಸರಿಪಡಿಸಲಿಲ್ಲವೇಕೆ?

ರಾಜಕೀಯವಾಗಿ ವಿರೋಧ ಮಾಡಲು ಆರ್.ಅಶೋಕ್, ದೇವೇಗೌಡರು ಆಗಮಿಸುತ್ತಿದ್ದಾರೆ ಎಂದು ಕೇಳಿದಾಗ, ''ಅಶೋಕ್ ಅವರಾದರೂ ಬರಲಿ, ದೇವೇಗೌಡರಾದರೂ ಬರಲಿ. ಅವರ ರಾಜಕೀಯ ಹೋರಾಟಕ್ಕೆ ನಾನು ಬೇಸರ ಮಾಡಿಕೊಳ್ಳುವುದಿಲ್ಲ. ಅವರಿಗೂ ವಾಸ್ತವಾಂಶ ಗೊತ್ತಿದೆ. ಅಶೋಕ್ ಅವರಿಗೆ ಪೆನ್ ಹಿಡಿಯುವ ಅಧಿಕಾರ ಇದ್ದಾಗ ಈ ಭೂಮಿಯನ್ನು ಏಕೆ ಬಿಡಿಸಲಿಲ್ಲ? ಎಂದು ಪ್ರಶ್ನಿಸಿದರು.

ಆ ಭೂಮಿಯನ್ನು ಯಥಾಸ್ಥಿತಿಯಲ್ಲಿ ಬಿಡಿ ಎಂಬ ಆಗ್ರಹದ ಬಗ್ಗೆ ಕೇಳಿದಾಗ, ''ಅವರ ಮಾತು ಕೇಳಲು ನಾನು ತಯಾರಿಲ್ಲ. ನಮ್ಮ ಸರ್ಕಾರ ಕಾನೂನು ಪ್ರಕಾರ ಕೆಲಸ ಮಾಡುತ್ತಿದೆ. ಯಡಿಯೂರಪ್ಪ ಅವರ ಕಾಲದಲ್ಲೂ ಇಲ್ಲಿನ ಭೂಮಿಗೆ 90 ಲಕ್ಷದಿಂದ 1 ಕೋಟಿಗೆ ಪರಿಹಾರ ನಿಗದಿ ಮಾಡಿದಾಗ, ಆ ಜಾಗವನ್ನು ಯಥಾಸ್ಥಿತಿಯಲ್ಲೇ ಬಿಡಿಸಬಹುದಿತ್ತಲ್ಲವೇ? ಯಾಕೆ ಬಿಡಿಸಲಿಲ್ಲ? ಆಗ ಮಂಜುನಾಥ್ ಅವರೇ ಶಾಸಕರಾಗಿದ್ದರಲ್ಲವೇ? ಈ ಯೋಜನೆಗೆ ರೈತರ ವಿರೋಧವಿಲ್ಲ, ರೈತರ ಸಂಪೂರ್ಣ ಸಹಕಾರವಿದೆ ಎಂದು ತಿಳಿಸಿದರು.

**ಬ್ರೋಕರ್‌ಗಳ ಮಾತುಗಳನ್ನು ಕೇಳುವುದಿಲ್ಲ:** ಈ ವಿಚಾರವಾಗಿ ಗಲಾಟೆಗಳಾಗುತ್ತಿವೆ ಎಂದು ಕೇಳಿದಾಗ, ಕಾನೂನಿದೆ, ಕಾನೂನು ಚೌಕಟ್ಟಿನಲ್ಲಿ ನಾವು ಮುಂದುವರಿಯುತ್ತೇವೆ. ನಾನು ರೈತರಿಗೆ ದೊಡ್ಡ ಆಫರ್ ಕೊಟ್ಟಿದ್ದೇನೆ. ಯಾರು ಈ ಪರಿಹಾರ ಬೇಡ ಎನ್ನುತ್ತಾರೋ ಅವರಿಗೆ ಕಾನೂನು ಪ್ರಕಾರ ಈ ಹಿಂದೆ ಹೊರಡಿಸಿದ್ದ ಅಧಿಸೂಚನೆಗೆ ಇರುವ ಮಾರ್ಗಸೂಚಿ ಮೌಲ್ಯ ಆಧಾರದ ಮೇಲೆ ನ್ಯಾಯಾಲಯಕ್ಕೆ ನಾವು ಹಣ ಠೇವಣಿಯನ್ನು ಮಾಡುತ್ತೇವೆ. ಅವರ ಕಾಲದಲ್ಲೇ ಸರಿ ಮಾಡಬಹುದಿತ್ತಲ್ಲವೇ? ಅವರು ಯಾರೋ ಬ್ರೋಕರ್ ಹೇಳುತ್ತಾರೆ ಎಂದು ನಾನು ಕೇಳುವುದಿಲ್ಲ ಎಂದರು.

ನೈಜ ರೈತರು ಯಾರು, ನಕಲಿ ರೈತರು ಯಾರು ಎಂಬುದೂ ಗೊತ್ತಿದೆ. ಏಜೆಂಟ್‌ಗಳು ಯಾರು ಎಂಬುದೂ ಗೊತ್ತಿದೆ. ಕೆಐಡಿಬಿಗೆ 900 ಎಕರೆ ಭೂಮಿ ಕೊಟ್ಟಾಗ ಯಾರು ಹಣ ಪಡೆದಿದ್ದಾರೆ ಎನ್ನುವ ಪಟ್ಟಿ ಬಿಡುಗಡೆ ಮಾಡಲೇ? ಎಂದು ಪ್ರಶ್ನಿಸಿದರು.

ಟೊಯೋಟಾ ಕಂಪೆನಿಯವರು ನನ್ನನ್ನು ಭೇಟಿ ಮಾಡಿ ವಾಸದ ಉದ್ದೇಶಕ್ಕೆ 300 ಎಕರೆ ಭೂಮಿ ಬೇಕು ಎಂದು ಕೇಳಿದರು. ಅದಕ್ಕೆ ನಾನು ಹೇಳಿದೆ, 300 ಎಕರೆ ತೆಗೆದುಕೊಳ್ಳುವುದು ಮುಖ್ಯವಲ್ಲ. ಜಪಾನ್ ಟೌನ್ ಶಿಪ್ ಮಾದರಿಯಲ್ಲೇ ನಿಮ್ಮ ಟೌನ್ ಶಿಪ್ ಮಾಡಬೇಕು ಎಂದು ನಿರ್ದೇಶನ ನೀಡಿದ್ದೇನೆ ಎಂದು ತಿಳಿಸಿದರು. ಟೊಯೋಟಾದವರು ಎಲ್ಲಿ ಭೂಮಿ ಕೇಳಿದ್ದಾರೆ. ಜಿಬಿಐಟಿಯಲ್ಲೇ ಕೊಡುತ್ತೀರಾ ಎಂದು ಕೇಳಿದಾಗ, ಅವರು ಜಿಬಿಐಟಿಯಲ್ಲೇ ಕೇಳುತ್ತಿದ್ದಾರೆ ಎಂದು ತಿಳಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹11,548/Gram24ct ₹10,585/Gram22ct ಬೆಳ್ಳಿ: ₹149.50/Gram

# ಸಮೀಕ್ಷೆ ಮುಂದೂಡಲು ಸಿ.ಟಿ.ರವಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಪೂರ್ವ ತಯಾರಿ ಹಾಗೂ ಸೂಕ್ತ ತರಬೇತಿ ಅಗತ್ಯ ಇರುವುದರಿಂದ ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆಯನ್ನು ಕೆಲ ದಿನಗಳ ಮಟ್ಟಿಗೆ ಮುಂದೂಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಒತ್ತಾಯಿಸಿದ್ದಾರೆ. ಈ ಸಂಬಂಧ ಸಿಎಂ ಸಿದ್ದರಾಮಯ್ಯನವರಿಗೆ ಸುದೀರ್ಘ ಪತ್ರ ಬರೆದಿರುವ ಸಿ.ಟಿ.ರವಿ, ರಾಜ್ಯಾದ್ಯಂತ ನಡೆಸುತ್ತಿರುವ ಸಮೀಕ್ಷೆ ಸಾಕಷ್ಟು ಗೊಂದಲದಿಂದ ಕೂಡಿದೆ. ಸಮೀಕ್ಷೆದಾರರಿಗೆ ಸೂಕ್ತವಾದ ತರಬೇತಿ, ಪೂರ್ವ ಸಿದ್ಧತೆ ಇಲ್ಲದೇ ಇರುವುದರಿಂದ ಗೊಂದಲಕ್ಕೆ ಒಳಗಾಗಿದ್ದಾರೆ. ಹೀಗಾಗಿ ಮುಂದೂಡಬೇಕೆಂದು ಮನವಿ ಮಾಡಿದ್ದಾರೆ. ಗಣತಿದಾರರು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಅನೇಕ ಕಡೆ ನೆಟ್ ವರ್ಕ್ ಸಿಗದೆ ಗೊಂದಲಕ್ಕೆ ಸಿಲುಕಿದ್ದಾರೆ. ಅಲ್ಲದೆ ಅವರು ಕೆಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಪರಿಹರಿಸುವ ಬದಲು ನೀವು ಅವರಿಗೆ ಬೆದರಿಕೆ ಹಾಕುತ್ತಿದ್ದೀರಿ. ಇದರಿಂದ ನಿಮ್ಮ ಕನಸಿನ ಕೂಸು ಬಡವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯು ಈಗಾಗಲೇ ಆರಂಭವಾಗಿದ್ದು, ಸಮೀಕ್ಷೆಯ ಸಂದರ್ಭದಲ್ಲಿ, ಈಗಾಗಲೇ ಹೆಚ್ಚುವರಿ ಜವಾಬ್ದಾರಿಗಳ ಹೊರೆಯಿಂದ ಬಳಲಿರುವ ಶಿಕ್ಷಕರು, ಇನ್ನಷ್ಟು ತೀವ್ರ ಸವಾಲುಗಳನ್ನು ಎದುರಿಸುತ್ತಿರುವುದು ಗಮನಕ್ಕೆ ಬಂದಿದೆ. ಕೆಲವೆಡೆ ಗಣತಿದಾರರಿಗೆ ಸ್ಥಳ ನಿಯುಕ್ತಿ ಸೇರಿದಂತೆ ಸಮೀಕ್ಷೆಯ ಮಾಹಿತಿ ಸಂಗ್ರಹಿಸಲು ನಿಗದಿಪಡಿಸಿರುವ ಅಪ್ಲಿಕೇಷನ್ ಸರಿಯಾಗಿ ಕಾರ್ಯ ನಿರ್ವಹಿಸದಿರುವುದು ಮತ್ತು ಗುಡ್ಡಗಾಡು ಪ್ರದೇಶದಲ್ಲಿ ನೆಟ್ವರ್ಕ್ ಸರಿಯಾಗಿ ಲಭ್ಯವಾಗದೆ ಇರುವುದರಿಂದ ಗಣತಿದಾರ ಶಿಕ್ಷಕರು ಸಮಸ್ಯೆಗೀಡಾಗಿದ್ದಾರೆ. ಸಮೀಕ್ಷೆಗೆ ಸರಿಯಾದ ಪೂರ್ವ ತಯಾರಿ, ಯೋಜನೆ ಮತ್ತು ತಾಂತ್ರಿಕ ವ್ಯವಸ್ಥೆ ರೂಪಿಸುವಲ್ಲಿ ವಿಫಲವಾಗಿರುವ ಶಂಕೆ ಮೂಡುತ್ತಿದೆ. ಪ್ರಾಯೋಗಿಕವಾಗಿ ಟ್ರಯಲ್ ನಡೆಸಿ, ಅದರ ಅನುಭವದ ಮೇಲೆ ಸಂಪೂರ್ಣ ಸಮೀಕ್ಷಾ ಕಾರ್ಯವನ್ನು ವಿಸ್ತರಿಸಬೇಕಾಗಿತ್ತು.



ಆದರೆ ಇಲ್ಲಿ ಇದ್ಯಾವುದನ್ನೂ ಮಾಡದೆ ಇರೋದು ಕಂಡುಬಂದಿದೆ. ಸಮೀಕ್ಷೆ ಸಂದರ್ಭದಲ್ಲಿ ಗಣತಿದಾರರು ಎದುರಿಸುತ್ತಿರುವ ಸವಾಲುಗಳು ತೀವ್ರ, ಗಂಭೀರವಾಗಿದ್ದು, ಈ ಸವಾಲುಗಳನ್ನು ಬಗೆಹರಿಸಿ ಎಂದು ಕೋರಿದ್ದಾರೆ. ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ಕಾರ್ಯನಿರ್ವಹಣೆಯ ಪ್ರಕ್ರಿಯೆಯಲ್ಲಿ ಹಲವಾರು ಗಂಭೀರ ಸವಾಲುಗಳು ಎದುರಾಗುತ್ತಿವೆ. ಈ ಸಮೀಕ್ಷೆಯನ್ನು ನಿರ್ವಹಿಸುತ್ತಿರುವ ಶಿಕ್ಷಕ ಗಣತಿದಾರರು ತಾಂತ್ರಿಕ, ಪ್ರಾಯೋಗಿಕ ತೊಂದರೆಗಳಿಂದಾಗಿ ಗೊಂದಲಕ್ಕೀಡಾಗಿದ್ದಾರೆ. ಸಮೀಕ್ಷೆಯ ಸಮರ್ಪಕ ಪೂರ್ವತಯಾರಿ ಹಾಗೂ ತಾಂತ್ರಿಕ ಸೌಲಭ್ಯಗಳ ಕೊರತೆಯಿಂದ, ನಿರೀಕ್ಷಿತ ರೀತಿಯಲ್ಲಿ ಕಾರ್ಯ ಸಾಗುತ್ತಿಲ್ಲ ಎಂದು ಹೇಳಿದ್ದಾರೆ. ಸಮೀಕ್ಷೆಯಲ್ಲಿ ಮನೆಗಳ ನಿಖರವಾದ ಸರಣಿ ಜೋಡಣೆ ಮಾಡಲಾಗದಿರುವುದು ಗಣತಿದಾರರಿಗೆ ಹೆಚ್ಚಿನ ತೊಂದರೆ ಉಂಟುಮಾಡುತ್ತಿದೆ.

ಕೆಲವೊಮ್ಮೆ ಒಂದೇ ಮನೆಯನ್ನು ಎರಡು ಬಾರಿ ದಾಖಲು ಮಾಡುವ ಪರಿಸ್ಥಿತಿಯೂ ಎದುರಾಗುತ್ತಿದೆ ಮತ್ತು ಕೆಲವು ಮನೆಗಳು ತಪ್ಪಿಹೋಗುತ್ತಿರುವುದು ಕಂಡುಬಂದಿದೆ.ಮನೆ ಗುರುತಿಸಲು ನೀಡಲಾಗಿರುವ ಯು.ಎಚ್.ಐ.ಡಿ ಸಂಖ್ಯೆಯ ಮೂಲಕ ಮಾಹಿತಿ ಹುಡುಕುವಲ್ಲಿ ತಾಂತ್ರಿಕ ದೋಷಗಳು ಕಂಡುಬರುತ್ತಿವೆ. ಇದು ಗಣತಿದಾರರ ಸಮಯ ಮತ್ತು ಶ್ರಮವನ್ನು ವ್ಯರ್ಥಗೊಳಿಸುತ್ತಿದೆ ಎಂದು ತಿಳಿಸಿದ್ದಾರೆ. ಸಮೀಕ್ಷೆಯನ್ನು ಸಂಪೂರ್ಣವಾಗಿ ಆನ್‌ಲೈನ್ ವ್ಯವಸ್ಥೆಗೆ ಅವಲಂಬಿಸಿರುವುದರಿಂದ, ಗ್ರಾಮೀಣ, ಗುಡ್ಡಗಾಡು ಪ್ರದೇಶಗಳಲ್ಲಿ ನೆಟ್ವರ್ಕ್ ಸೌಲಭ್ಯ ಕೊರತೆ ತೀವ್ರ ಸಮಸ್ಯೆಯಾಗಿದೆ. ಅನೇಕ ಸಂದರ್ಭಗಳಲ್ಲಿ ಸಮೀಕ್ಷೆಯ ಕೆಲಸ ಮಧ್ಯದಲ್ಲೇ ನಿಲ್ಲುತ್ತಿದೆ. ಗಣತಿದಾರರ ಸ್ಥಳದಿಂದ ದೂರದ ಪ್ರದೇಶಗಳಲ್ಲಿ ಸಮೀಕ್ಷೆ ಗಣತಿದಾರರ ಕೆಲಸವನ್ನು ಅವರ ಕಾರ್ಯಸ್ಥಳಕ್ಕಿಂತ ದೂರದ ಪ್ರದೇಶಗಳಲ್ಲಿ ಹಂಚಿರುವುದರಿಂದ ಸಂಚಾರದಲ್ಲಿ ಸಮಯ ಮತ್ತು ಶ್ರಮ ವ್ಯರ್ಥವಾಗುತ್ತಿದೆ., ಸಮೀಕ್ಷೆಗೆ ಸಂಬಂಧಿಸಿದ ಮನೆಗಳ ವಿಳಾಸ ಪಟ್ಟಿ ನೀಡದಿರುವುದು, ಹಾಗೂ ಸದಸ್ಯರನ್ನು ಸೇರಿಸುವುದು ಅಥವಾ ತೆಗೆದುಹಾಕುವ ಆಯ್ಕೆಯ ಕೊರತೆಯಿಂದ ಗೊಂದಲ ಹೆಚ್ಚಾಗಿದೆ.

ಒಂದೇ ದಿನ ಹಲವು ಗಂಟೆಗಳ ಕಾಲ ಮೊಬೈಲ್ ಬಳಸಿ ಮಾಹಿತಿಯನ್ನು ದಾಖಲಿಸುವುದರಿಂದ ಶಿಕ್ಷಕರು ಕಣ್ಣಿನ ತೊಂದರೆ ಹಾಗೂ ಮಾನಸಿಕ ಒತ್ತಡಕ್ಕೆ ಒಳಗಾಗುತ್ತಿದ್ದಾರೆ. ದೈಹಿಕ ನ್ಯೂನ್ಯತೆ ಹೊಂದಿರುವವರು, ಅನಾರೋಗ್ಯ ಪೀಡಿತರು ಹಾಗೂ ವಯೋವೃದ್ಧ ಶಿಕ್ಷಕರಿಗೆ ಈ ಕೆಲಸದಲ್ಲಿ ಪಾಲ್ಗೊಳ್ಳುವುದು ಕಷ್ಟಕರವಾಗಿದೆ. ಒಬ್ಬಂಟಿ ಮಹಿಳಾ ಶಿಕ್ಷಕರು ಸಮೀಕ್ಷಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಸಂದರ್ಭದಲ್ಲಿ ಸುರಕ್ಷತೆ ಹಾಗೂ ಸಾಮಾಜಿಕ ಮುಜುಗರದ ಸಮಸ್ಯೆಗಳು ಎದುರಾಗುತ್ತಿವೆ. ಕೆಲ ಶಿಕ್ಷಕರಿಗೆ ಮೊಬೈಲ್, ತಾಂತ್ರಿಕ ಉಪಕರಣಗಳ ಬಳಕೆಯಲ್ಲಿನ ಪರಿಣತಿ ಕೊರತೆಯಿಂದ ಸಮೀಕ್ಷಾ ಕಾರ್ಯ ಇನ್ನಷ್ಟು ಕಷ್ಟಕರವಾಗಿದೆ ಎಂದು ಗಮನ ಸೆಳೆದಿದ್ದಾರೆ.

## ಧರ್ಮಸ್ಥಳ ಪ್ರಕರಣದಲ್ಲಿ ವಾಸ್ತವಾಂಶ ತಿಳಿಸುವುದಷ್ಟೇ ಸರ್ಕಾರದ ಮುಖ್ಯ ಉದ್ದೇಶ : ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ಪ್ರಕರಣದಲ್ಲಿ ಜನರಿಗೆ ವಾಸ್ತವಾಂಶ ತಿಳಿಸುವುದಷ್ಟೇ ನಮ ಸರ್ಕಾರದ ಉದ್ದೇಶ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸ್ಪಷ್ಟವಾಗಿ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತನಿಖಾ ತಂಡದಿಂದ ಅಧಿಕೃತವಾಗಿ ನಮಗೆ ವರದಿ ಬರಲಿ ಎಂದರು. ಎಸ್ ಐಟಿ ರಚನೆಯಿಂದ ನನ್ನ ಮೇಲಿದ್ದ ಕಳಂಕ ಕಳೆಯುತ್ತಿದೆ ಎಂಬ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಈ ಪ್ರಕರಣದ ತನಿಖಾ ವರದಿ ಬರಲಿ. ಅನಂತರ ನಾನು ಮಾತನಾಡುತ್ತೇನೆ. ವೀರೇಂದ್ರ ಹೆಗ್ಗಡೆ ಅವರ ಹೇಳಿಕೆಯನ್ನು ಮಾಧ್ಯಮಗಳಲ್ಲಿ ನೋಡಿದ್ದೇನೆ.

ತನಿಖಾ ವರದಿ ಬರುವ ಮುನ್ನವೇ ಈ ಬಗ್ಗೆ ಪ್ರತಿಕ್ರಿಯಿಸುವುದರಲ್ಲಿ ಅರ್ಥವಿಲ್ಲ. ರಾಜಕೀಯವಾಗಿ ಯಾರು ಏನು ಬೇಕಾದರೂ ಮಾತನಾಡಬಹುದು. ಆದರೆ ನಾನು ಸರ್ಕಾರದ ಪ್ರತಿನಿಧಿಯಾಗಿರುವುದರಿಂದ ಬೇರೆಯವರಂತೆ ಮಾತನಾಡಲು ಬರುವುದಿಲ್ಲ. ಈ ವಿಚಾರವಾಗಿ ವರದಿ ಬಂದ ನಂತರ ಮುಖ್ಯಮಂತ್ರಿಗಳು ಅಥವಾ ಗೃಹ ಸಚಿವರು ಅಧಿಕೃತ ಹೇಳಿಕೆ ನೀಡಬೇಕು. ಆ ನಂತರ ನಾನು ಮಾತನಾಡುತ್ತೇನೆ ಎಂದು ಹೇಳಿದರು. ಸುಪ್ರೀಂ ಕೋರ್ಟಿನಲ್ಲಿ ಪಿಐಎಲ್ ವಜಾ ಆಗಿದ್ದರೂ ಸರ್ಕಾರದ ದಾರಿ ತಪ್ಪಿಸುವ ಕೆಲಸ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳುತ್ತೀರಾ ಎಂದು ಕೇಳಿದಾಗ, ಈಗ ಆ ವಿಚಾರ ಚರ್ಚೆ ಬೇಡ. ಸುಪ್ರೀಂ ಕೋರ್ಟಿನಲ್ಲಿ ಅರ್ಜಿ ಹಾಕಿದ್ದು, ಅದು ವಜಾಗೊಂಡಿದೆ. ಪಿಐಎಲ್ ಹಾಕಿದವರಿಗೆ ಸ್ಥಳೀಯವಾಗಿ ತನಿಖೆ ಮಾಡಲಿ ಎಂದು ಕೋರ್ಟ್ ಬೈದುಕಳುಹಿಸಿದ್ದು ಎಲ್ಲವೂ ಗೊತ್ತಿದೆ. ಸುಪ್ರೀಂ ಕೋರ್ಟಿನ ನಿರ್ದೇಶನದ ಬಗ್ಗೆ ಯಾರೂ ಹೇಳುವುದಿಲ್ಲ. ದೆಹಲಿಗೆ ಬುರುಡೆ ತೆಗೆದುಕೊಂಡು ಹೋಗಿದ್ದರು. ಅದರ ಬಗ್ಗೆಯೂ ನಮಗೆ ಮಾಹಿತಿ ಇದೆ. ಆದರೆ ತನಿಖಾ ತಂಡದಿಂದ ಅಧಿಕೃತವಾಗಿ ನಮಗೆ ವರದಿ ಬರಲಿ ಎಂದು ತಿಳಿಸಿದರು.

## ಭರತನಾಟ್ಯ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು

ಅಖಿಲ ಭಾರತೀಯ ಸಂಗೀತ ಮತ್ತು ನೃತ್ಯ ಒಕ್ಕೂಟದ ವತಿಯಿಂದ ಸೆಪ್ಟೆಂಬರ್ 28, ಭಾನುವಾರ ಸಂಜೆ 5-00ಕ್ಕೆ ಕಲಾ ಸುಸಂಸ್ಕೃತಿ ಅಕಾಡೆಮಿ ಟ್ರಸ್ಟಿನ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ. ನಿರ್ದೇಶನ ವಿದುಷಿ ಬಿ.ಯು. ಓಜಸ್ವಿನಿ. ಸ್ಥಳ ಶ್ರೀ ಕಾಳಿಕಾಂಬ ದೇವಸ್ಥಾನ, ಕೆಂಗೇರಿ ಉಪನಗರ, ಬೆಂಗಳೂರು.


ಉದಯವಾಹಿನಿ ಚಿತ್ರ

## ಬಾಲ್ಯ ವಿವಾಹದಿಂದ ಹೆಚ್ಚಿದ ತಾಯಿ-ಶಿಶು ಮರಣ: ರಮೇಶ್

• ಉದಯವಾಹಿನಿ, ಹೊಸಕೋಟೆ

ಬಾಲ್ಯ ವಿವಾಹದಿಂದ ಹೆಣ್ಣು ಮಕ್ಕಳಲ್ಲಿ ಗಂಭೀರ ಆರೋಗ್ಯ ಸಮಸ್ಯೆ ಉಂಟಾಗುತ್ತಿದ್ದು, ತಾಯಿ-ಶಿಶು ಮರಣ ಪ್ರಮಾಣವು ಹೆಚ್ಚಾಗಿದೆ ಎಂದು ಶಿಶು ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಾಧಿಕಾರಿ ರಮೇಶ್ ಹೇಳಿದರು. ಹೋಬಳಿಯ ಅತ್ತಿಬೆಲೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಶು ಅಭಿವೃದ್ಧಿ ಇಲಾಖೆ ಆಯೋಜಿಸಿದ್ದ ಪೋಷಣೆ ಅಭಿಯಾನ ಜಾಗೃತಿ ಜಾಥಾದಲ್ಲಿ ಮಾತನಾಡಿದರು. ಬಾಲ್ಯ ವಿವಾಹ ಕಾನೂನು ಬಾಹಿರ, ಶಿಕ್ಷಾರ್ಹ ಅಪರಾಧ ಎಂಬುದು ಎಲ್ಲರಿಗೂ ತಿಳಿದಿದ್ದರೂ ಅಪ್ರಾಪ್ತ ವಯಸ್ಸಿನಲ್ಲಿ ಹೆಣ್ಣು ಮಕ್ಕಳಿಗೆ ಮದುವೆ ಮಾಡಲಾಗುತ್ತಿದೆ. ಇದರಿಂದ ಹೆಣ್ಣು ಮಕ್ಕಳಲ್ಲಿ ಆರೋಗ್ಯ ಸಮಸ್ಯೆ ಉಂಟಾಗುತ್ತಿದೆ. ಚಿಕ್ಕ ವಯಸ್ಸಿನಲ್ಲೇ ಗರ್ಭ ಧರಿಸುವುದರಿಂದ ಅಪೌಷ್ಟಿಕತೆ ಉಂಟಾಗುತ್ತಿದೆ. ತಾಯಿ ಮತ್ತು ಮಗು ಅಪೌಷ್ಟಿಕತೆಯಿಂದ ಬಳಲುತ್ತಾರೆ. ಅಲ್ಲದೆ ಪ್ರಸವ ವೇಳೆ ಮೃತಪಡುತ್ತಿದ್ದಾರೆ. ಇದರಿಂದ ತಾಯಿ-ಶಿಶು ಮರಣ ಜಾಸ್ತಿಯಾಗಿದೆ ಎಂದು ತಿಳಿಸಿದರು. 0-6 ವರ್ಷದೊಳಗಿನ ಶಿಶುಗಳ ಮರಣ ಸಂಖ್ಯೆ ಕಡಿಮೆ ಮಾಡುವುದು, ಗರ್ಭಿಣಿ, ಬಾಣಂತಿಯರು ಪೌಷ್ಟಿಕ ಆಹಾರ ಸೇವಿಸುವಂತೆ ಅರಿವು, ಸಾಧಾರಣ ಮತ್ತು ಕಡಿಮೆ ತೂಕದ ಮಕ್ಕಳಿಗೆ ವಿಶೇಷವಾದ ಆಹಾರ ನೀಡಲು ಪೋಷಕರು ಕಾಳಜಿ ವಹಿಸಬೇಕು.

# ಕರ್ನಾಟಕಕ್ಕೆ ಹೊಸ ಸೂಪರ್‌ಫಾಸ್ಟ್ ರೈಲು; ಗುಡ್‌ನ್ಯೂಸ್ ಕೊಟ್ಟ ಸಂಸದ

■ ಎರಡೂ ನಗರಗಳ ಮಧ್ಯೆ ಶೀಘ್ರವೇ ಸೂಪರ್‌ಫಾಸ್ಟ್ ರೈಲು ಆರಂಭಿಸುವುದಾಗಿ ತಿಳಿಸಿದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

• ಉದಯವಾಹಿನಿ, ಬೆಂಗಳೂರು:

ಕರ್ನಾಟಕದ ಜನರಿಗೆ ಸಂಸದ ತೇಜಸ್ವಿ ಸೂರ್ಯ ಗುಡ್‌ನ್ಯೂಸ್ ಕೊಟ್ಟಿದ್ದಾರೆ. ವಾಣಿಜ್ಯ ರಾಜಧಾನಿ ಮುಂಬೈ ಹಾಗೂ ಸಿಲಿಕಾನ್ ಸಿಟಿ ಬೆಂಗಳೂರು ನಡುವೆ ಸೂಪರ್‌ಫಾಸ್ಟ್ ರೈಲು ಓಡಿಸಲು ರೈಲ್ವೆ ಸಚಿವರು ಒಪ್ಪಿಗೆ ಸೂಚಿಸಿದ್ದಾರೆ. ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರೊಂದಿಗಿನ ವಿಡಿಯೋವನ್ನು ಸಂಸದರು ಹಂಚಿಕೊಂಡಿದ್ದಾರೆ. ಅದರಲ್ಲಿ ಸಚಿವರು ಎರಡೂ ನಗರಗಳ ಮಧ್ಯೆ ಶೀಘ್ರವೇ ಸೂಪರ್‌ಫಾಸ್ಟ್ ರೈಲು ಆರಂಭಿಸುವುದಾಗಿ ತಿಳಿಸಿದ್ದಾರೆ. ಜತೆಗೆ ಬೆಂಗಳೂರು ಜನ ಹೇಗಿದ್ದೀರಾ? ಚನ್ನಾಗಿದ್ದೀರಾ? ಎಂದ ಸಚಿವರು ತೇಜಸ್ವಿ ಸೂರ್ಯ ಅವರ ಬೆಂಗಳೂರು ಜನರ ಪರ ಕಾರ್ಯವನ್ನು ಹೊಗಳಿಸಿದ್ದಾರೆ.


ಉದಯವಾಹಿನಿ ಚಿತ್ರ



**30 ವರ್ಷದಿಂದ 2 ನಗರಗಳ ಮಧ್ಯೆ 1 ಸೂಪರ್ ಫಾಸ್ಟ್ ರೈಲು ಸಂಚಾರ:** ಈ ಬಗ್ಗೆ ಟ್ವೀಟ್ ಮಾಡಿರುವ ಸಂಸದರು, ಬೆಂಗಳೂರು ಮತ್ತು ಮುಂಬೈ ಜನರಿಗೆ ನನ್ನಲ್ಲಿ ಒಂದು ಶುಭ ಸುದ್ದಿ ಇದೆ. ಕಳೆದ 30 ವರ್ಷಗಳಿಂದ, ನಮ್ಮ ಎರಡು ಮಹಾ ನಗರಗಳನ್ನು ಒಂದೇ ಒಂದು ಸೂಪರ್ ಫಾಸ್ಟ್ ರೈಲು - ಉದ್ಯಾನ್ ಎಕ್ಸ್‌ಪ್ರೆಸ್ ಮೂಲಕ ಸಂಪರ್ಕಿಸಲಾಗುತ್ತಿತ್ತು. ಆ ರೈಲು ಕೂಡ ತಲುಪಲು 24 ಗಂಟೆಗಳಿಗಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತಿತ್ತು. ಇದರಿಂದಾಗಿ ಹೆಚ್ಚಿನ ಜನರು ಅನಿವಾರ್ಯವಾಗಿ ಬಸ್ ಅಥವಾ ವಿಮಾನಗಳನ್ನು ಬಳಸಬೇಕಾಯಿತು.



> ಸಂಸದ ತೇಜಸ್ವಿ ಸೂರ್ಯ ಕರ್ನಾಟಕದ ಜನರಿಗೆ ಶುಭ ಸುದ್ದಿ ನೀಡಿದ್ದಾರೆ. ವಾಣಿಜ್ಯ ರಾಜಧಾನಿ ಮುಂಬೈ ಹಾಗೂ ಸಿಲಿಕಾನ್ ಸಿಟಿ ಬೆಂಗಳೂರು ನಡುವೆ ಸೂಪರ್‌ಫಾಸ್ಟ್ ರೈಲು ಓಡಿಸಲು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಒಪ್ಪಿಗೆ ಸೂಚಿಸಿದ್ದಾರೆ. ಪ್ರಸ್ತುತ ಒಂದೇ ರೈಲು 24 ಗಂಟೆಗಳಿಗಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತಿದ್ದು, ಈ ಹೊಸ ಸೂಪರ್‌ಫಾಸ್ಟ್ ರೈಲು ಸೇವೆ ಲಕ್ಷಾಂತರ ಜನರಿಗೆ ಅನುಕೂಲವಾಗಲಿದೆ.
> – ಅಶ್ವಿನಿ ವೈಷ್ಣವ್, ಕೇಂದ್ರ ರೈಲ್ವೆ ಸಚಿವ

ಪ್ರಯಾಣ ದುಬಾರಿ ಮತ್ತು ಅನಾನುಕೂಲಕರವಾಗಿತ್ತು. ಹೆಚ್ಚಿನ ರೈಲು ಸೇವೆಗಳನ್ನು ಪ್ರಾರಂಭಿಸಲು ಎರಡೂ ನಗರಗಳ ಜನರಿಂದ ನಿರಂತರ ಬೇಡಿಕೆ ಇತ್ತು. ಕಳೆದ ನಾಲ್ಕು ವರ್ಷಗಳಲ್ಲಿ ನಾನು ಸಂಸತ್ತಿನಲ್ಲಿ, ಪಿಎಸಿ ಸಭೆಗಳಲ್ಲಿ, ರೈಲ್ವೆ ಮಂಡಳಿ ಅಧ್ಯಕ್ಷರೊಂದಿಗೆ ಮತ್ತು ರೈಲ್ವೆ ಸಚಿವರೊಂದಿಗೆ ಈ ವಿಷಯವನ್ನು ಹಲವು ಬಾರಿ ಎತ್ತಿದ್ದೆ. ಈ ಸಕಾರವಾಗಿದೆ ಎಂದಿದ್ದಾರೆ. ಬೆಂಗಳೂರು, ಮುಂಬೈ ನಂತಹ ಪ್ರಮುಖ ಆರ್ಥಿಕ ಕೇಂದ್ರಗಳು ಬಹಳ ಹಿಂದಿನಿಂದಲೂ ಒಂದಕ್ಕಿಂತ ಹೆಚ್ಚು ನೇರ ಸೂಪರ್ ಫಾಸ್ಟ್ ರೈಲುಗಳನ್ನು ಹೊಂದಿಲ್ಲ ಎಂಬುದು ದಿಗ್ಭ್ರಮೆಗೊಳಿಸುವ ಸಂಗತಿ. ಅಂತಿಮವಾಗಿ, ಅವರು ರಾಷ್ಟ್ರಕ್ಕೆ ಅನೇಕ ಪ್ರಮುಖ ಭರವಸೆಗಳನ್ನು ನೀಡುತ್ತಿರುವಂತೆ, ನಮ್ಮ ಅತ್ಯಂತ ಕ್ರಿಯಾತ್ಮಕ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಬೆಂಗಳೂರು, ಮುಂಬೈ ರೈಲು ನಿಲ್ದಾಣಗಳಲ್ಲಿ ಲೇನ್ ಸಾಮರ್ಥ್ಯವನ್ನು ಹೆಚ್ಚಿಸುವ ಮೂಲಕ ಹೆಚ್ಚು ಸೂಪರ್ ಫಾಸ್ಟ್ ರೈಲುಗಳನ್ನು ಓಡಿಸಲು ನಿರ್ಧರಿಸಿದ್ದಾರೆ. ವಿ. ಸೋಮಣ್ಣ ಅವರ ಬೆಂಬಲಕ್ಕೆ ನಾನು ಧನ್ಯವಾದಗಳು ಎಂದಿದ್ದಾರೆ.

**ಲಕ್ಷಾಂತರ ಜನರಿಗೆ ಪ್ರಯೋಜನ:** ಮುಂಬರುವ ದಿನಗಳಲ್ಲಿ, ಎರಡೂ ನಗರಗಳ ನಡುವಿನ ರೈಲು ಪ್ರಯಾಣ ಹೆಚ್ಚಾಗಲಿದ್ದು, ಲಕ್ಷಾಂತರ ಜನರಿಗೆ ಪ್ರಯೋಜನವಾಗಲಿದೆ. ಇದನ್ನು ಸಾಧ್ಯವಾಗಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅಶ್ವಿನಿ ಅವರಿಗೆ ಧನ್ಯವಾದಗಳು ಎಂದು ತೇಜಸ್ವಿ ಸೂರ್ಯ ಟ್ವೀಟ್ ಮಾಡಿದ್ದಾರೆ.

# ಬಿಜೆಪಿಯ ಮಹತ್ವದ ಕೋರ್ ಕಮಿಟಿ ಸಭೆ

**ಬೆಂಗಳೂರು:** ಮುಂಬರುವ ಜಿಬಿಎ ಸ್ಥಳೀಯ ಸಂಸ್ಥೆಗಳ ಚುನಾವಣೆ ಸೇರಿದಂತೆ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಸುವ ಕುರಿತು ಕೈಗೊಳ್ಳಬೇಕಾದ ಕಾರ್ಯತಂತ್ರಗಳ ಬಗ್ಗೆ ಸಂಜೆ ಬಿಜೆಪಿಯ ಮಹತ್ವದ ಕೋರ್ ಕಮಿಟಿ ಸಭೆ ನಡೆಯಲಿದೆ. ಮಲ್ಲೇಶ್ವರದಲ್ಲಿರುವ ಬಿಜೆಪಿ ಕಚೇರಿಯಲ್ಲಿ ನಡೆಯಲಿರುವ ಕೋರ್ ಕಮಿಟಿ ಸಭೆಗೆ ರಾಜ್ಯ ಉಸ್ತುವಾರಿ ರಾಧಾ ಮೋಹನ್ ಅಗರ್‌ವಾಲ್, ಬಿಜೆಪಿ ರಾಷ್ಟ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಪ್ರತಿಪಕ್ಷದ ನಾಯಕ ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಪದಾಧಿಕಾರಿಗಳು ಭಾಗಿಯಾಗುವರು. ಮುಂಬರುವ ಜಿಬಿಎ ಚುನಾವಣೆಯಲ್ಲಿ ಪಕ್ಷವನ್ನು ಬಲಪಡಿಸಿ ಐದು ಪಾಲಿಕೆಗಳಲ್ಲೂ ಗೆಲ್ಲಲೇಬೇಕಾದ ರೂಪಿಸಲಿದೆ. ಕಳೆದ ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ, ಬೆಂಗಳೂರು ಸೆಂಟ್ರಲ್, ಬೆಂಗಳೂರು ಗ್ರಾಮಾಂತರ ಹಾಗೂ ಬೆಂಗಳೂರಿಗೆ ಹೊಂದುಕೊಂಡಿರುವ ಚಿಕ್ಕಬಳ್ಳಾಪುರ ಸೇರಿದಂತೆ ಐದು ಕ್ಷೇತ್ರಗಳನ್ನು ಬಿಜೆಪಿ ತನ್ನ ಬುಟ್ಟಿಗೆ ಹಾಕಿಕೊಂಡಿತ್ತು. ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ಮತದಾರರು ಬಿಜೆಪಿಗೆ ಒಲವು ತೋರಿರುವುದರಿಂದ ಮೊದಲ ಬಾರಿಗೆ ಬಿಬಿಎಂಪಿ ವಿಭಜನೆಗೊಂಡು ಐದು ಮಹಾನಗರ ಪಾಲಿಕೆಯಾಗಿ ಗ್ರೇಟರ್ ಬೆಂಗಳೂರು ಅಥಾರಟಿ ಎಂಬ ಹೆಸರಿನೊಂದಿಗೆ ಅಸ್ತಿತ್ವಕ್ಕೆ ಬಂದಿದೆ. ಐದಕ್ಕೆ 5 ಪಾಲಿಕೆಗಳನ್ನು ಗೆಲ್ಲಲೇಬೇಕೆಂದು ಪಣ ತೊಟ್ಟಿರುವ ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ನಗರದ ಜನತೆಗೆ ಮನವರಿಕೆ ಮಾಡಿಕೊಡಲಿದ್ದಾರೆ.

ಬೆಂಗಳೂರಿನಲ್ಲಿ ಹದಗೆಟ್ಟಿರುವ ರಸ್ತೆಗಳು, ಮುಚ್ಚದೇ ಇರುವ ಗುಂಡಿಗಳು, ಹೆಚ್ಚುತ್ತಿರುವ ಅಪಘಾತ, ಬೆಂಗಳೂರು ಬಿಟ್ಟು ಕೆಲವು ಬಹು ರಾಷ್ಟ್ರೀಯ ಕಂಪನಿಗಳು ಹೊರರಾಜ್ಯಕ್ಕೆ ಹೋಗಲು ಮುಂದಾಗಿರುವುದು, ಹದಗೆಟ್ಟಿರುವ ಕಾನೂನು ಸುವ್ಯವಸ್ಥೆ, ಹೆಚ್ಚುತ್ತಿರುವ ಅಪರಾಧ ಪ್ರಕರಣಗಳು ಹೀಗೆ ಸರ್ಕಾರದ ವೈಫಲ್ಯಗಳನ್ನು ಜನತೆಯ ಮುಂದಿಡಲಿದೆ. ಇನ್ನು ಕೋರ್ ಕಮಿಟಿ ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯ್ತಿ ಚುನಾವಣೆಗಳ ಬಗ್ಗೆಯೂ ಚರ್ಚೆ ನಡೆಯಲಿದೆ.

ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಚುನಾವಣೆಯನ್ನು ಡಿ. ನಂತರ ನಡೆಸಲು ಸರ್ಕಾರ ಉದ್ದೇಶಿಸಿದೆ.ಇದೇ ಸಂದರ್ಭದಲ್ಲಿ ಚುನಾವಣೆ ಎದುರಾದರೆ ಹೆಚ್ಚಿನ ಸ್ಥಾನ ಗಳಿಸಲು ಕೈಗೊಳ್ಳಬೇಕಾದ ಕಾರ್ಯತಂತ್ರಗಳ ಬಗ್ಗೆ ಪ್ರಮುಖರು ಚರ್ಚೆ ನಡೆಸಲಿದ್ದಾರೆ. ಸರ್ಕಾರ ಪ್ರತಿದಿನ ಒಂದಿಲ್ಲೊಂದು ವಿವಾದದಲ್ಲಿ ಸಿಲುಕುತ್ತಿದ್ದು, ಜಾತಿ ಜನಗಣತಿಯಿಂದ ಉಂಟಾಗಿರುವ ಗೊಂದಲ, ಹಿಂದೂ ಧರ್ಮದ ಉಪಜಾತಿಗಳ ಜೊತೆ ಕ್ರಿಶ್ಚಿಯನ್ ಧರ್ಮದ ಸೇರ್ಪಡೆ, ಸರ್ಕಾರದ ಮೇಲೆ ಕೇಳಿ ಬರುತ್ತಿರುವ ಹಗರಣಗಳು, ಅಭಿವೃದ್ಧಿ ಕುಂಠಿತ ಹೀಗೆ ಸಾಲು ಸಾಲು ವೈಫಲ್ಯಗಳ ಬಗ್ಗೆಯೂ ಚರ್ಚೆ ನಡೆಯಲಿದೆ ಎಂದು ಗೊತ್ತಾಗಲಿದೆ.

# ಗುಂಡಿಮುಕ್ತ ರಸ್ತೆಗಳನ್ನಾಗಿಸಲು ಕ್ರಮ: ರಾಜೇಂದ್ರ ಚೋಳನ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಯವರ ನಿರ್ದೇಶನದಂತೆ ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಗುಂಡಿಮುಕ್ತ ರಸ್ತೆಗಳನ್ನಾಗಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಕೇಂದ್ರ ನಗರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಅವರು ಹೇಳಿದರು. ಕೇಂದ್ರ ನಗರಪಾಲಿಕೆ ವ್ಯಾಪ್ತಿ ವಾರ್ಡ್ ವಾರು ರಸ್ತೆಗಳ ಪಟ್ಟಿ ಮಾಡಿಕೊಂಡು ಗುಂಡಿ ಬಿದ್ದ, ಹಾಳಾದ ರಸ್ತೆಗಳನ್ನು ಗುರುತಿಸಿ, ಡಾಂಬರೀಕರಣ, ಪ್ಯಾಚ್ ವರ್ಕ್, ಗುಂಡಿಗಳನ್ನು ಮುಚ್ಚುವ ಕುರಿತಂತೆ ನಿರಂತರವಾಗಿ ಸಭೆಗಳನ್ನು ನಡೆಸಿ, ಸ್ಥಳ ತಪಾಸಣೆ ಮಾಡಿ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ಇಂಜಿನೀಯರಿಂಗ್ ವಿಭಾಗದ ಅಧಿಕಾರಿಗಳಿಗೆ ಸೂಚನೆ ನೀಡಿದ್ದರೆ ಹಾಳಾದ ರಸ್ತೆಗಳ ದುರಸ್ಥಿಪಡಿಸುವ ಕಾಮಗಾರಿ ಚುರುಕಿನಿಂದ ಸಾಗಿದ್ದು, ಗುಂಡಿಮುಕ್ತ ರಸ್ತೆಯನ್ನಾಗಿಸಲು ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಅವರು ಹೇಳಿದರು. ಕಳೆದ 2 ದಿನಗಳಲ್ಲಿ ಸಿ.ವಿ. ರಾಮನ್ ನಗರ ವಿಭಾಗದ ಸುರಂಜನ್ ದಾಸ್ ರಸ್ತೆ, ಬಿಇಎಂಎಲ್ ಮುಖ್ಯ ರಸ್ತೆ, ಓಲ್ಡ್ ಮದ್ರಾಸ್, ರಿಚ್ಮಂಡ್ ರಸ್ತೆ, ಕಾಮರಾಜ್ ರಸ್ತೆ, ಹೊಸೂರು ರಸ್ತೆ, ಮಡಿವಾಳ, ವಿಕ್ಟೋರಿಯಾ ರಸ್ತೆ, ಜನರಲ್ ಕೆ.ಎಸ್. ತಿಮ್ಮಯ್ಯ ರಸ್ತೆ, ಎಂ.ಜಿ. ರಸ್ತೆ, ಚಿಕ್ಕಬಜಾರ ರಸ್ತೆ, ವಸಂತನಗರದ ಅರಮನೆ ರಸ್ತೆ, ಬಂಜಾರಾ ಭವನ ರಸ್ತೆ, ಕುಮಾರ ಪಾರ್ಕ್ ಪೂರ್ವ ರಸ್ತೆ, ಮೈಸೂರು ರಸ್ತೆ ಮೇಲು ಸೇತುವೆಯಲ್ಲಿ ಗುಂಡಿ ಮುಚ್ಚುವ, ಪ್ಯಾಚ್ ವರ್ಕ್, ಮೈಲ್ವೆ ರಸ್ತೆ ಡಾಂಬರೀಕರಣ ಕಾಮಗಾರಿ ಕಾರ್ಯ ಕೈಗೊಳ್ಳಲಾಗಿದ್ದು, ಸಾರ್ವಜನಿಕರಿಗೆ ಮೋಟಾರೆಬಲ್ ರಸ್ತೆಗಳನ್ನಾಗಿ ಮಾಡಿ, ವಾಹನಗಳ ಸುಗಮ ಸಂಚಾರಕ್ಕೆ ಕ್ರಮ ವಹಿಸಲಾಗಿದೆ ಎಂದು ಹೇಳಿದರು.

# ಮಾದಿಗ ಸಮುದಾಯಕ್ಕೆ ಆದ್ಯತೆ

• ಉದಯವಾಹಿನಿ, ದೇವನಹಳ್ಳಿ

ಆಶ್ರಯ ಯೋಜನೆಯಡಿ ನಿವೇಶನಗಳ ಹಂಚಿಕೆಯಲ್ಲಿ ಮಾದಿಗ ಸಮುದಾಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಆಗ್ರಹಿಸಿ ಹೋಬಳಿಯ ಕೋರಮಂಗಲ ಗ್ರಾಮಪಂಚಾಯಿತಿ ಎದುರು ದಲಿತ ಸಮುದಾಯದ ಮುಖಂಡರು ಶುಕ್ರವಾರ ಪ್ರತಿಭಟನೆ ನಡೆಸಿದರು. ಕೋರಮಂಗಲ ಗ್ರಾಮದಲ್ಲಿ 100ಕ್ಕೂ ಹೆಚ್ಚು ದಲಿತ ಸಮುದಾಯದ ಕುಟುಂಬಗಳಿವೆ.

ಒಂದೇ ಮನೆಯಲ್ಲಿ ಐದಾರು ಕುಟುಂಬಗಳು ವಾಸ ಮಾಡುತ್ತಿದೆ. ಸಮುದಾಯದ ಜನರು ಅನಕ್ಷರಸ್ಥರಾಗಿದ್ದು, ಕೂಲಿ ಮಾಡಿ ಜೀವನ ಸಾಗಿಸುತ್ತಿದ್ದೇವೆ. ಹೀಗಾಗಿ ಮಾದಿಗ ಸಮುದಾಯಕ್ಕೆ ಹೆಚ್ಚಿನ ನಿವೇಶನ ಹಂಚಿಕೆ ಮಾಡಬೇಕೆಂದು ಪ್ರತಿಭಟನಾಕಾರರು ಸರ್ಕಾರವನ್ನು ಆಗ್ರಹಿಸಿದರು. ಗ್ರಾಮದ ಸರ್ವೆ ನಂ 218 ರಲ್ಲಿ 8 ಎಕರೆ ಜಮೀನಿನಲ್ಲಿ ಆಶ್ರಯ ಯೋಜನೆಯಡಿ ನಿವೇಶನಗಳ ಹಂಚಿಕೆಯಲ್ಲಿ ಮಾದಿಗ ಸಮುದಾಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಒಟ್ಟು 218 ನಿವೇಶನಗಳು ಮಂಜೂರಾಗಿದ್ದು, ಜನಸಂಖ್ಯೆಯ ಆಧಾರದ ಮೇಲೆ ಸರ್ಕಾರ ನಿವೇಶನ ಹಂಚಿಕೆ ಮಾಡಬೇಕು ಎಂದು ಕೋರಮಂಗಲ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶಿವಾನಂದ್ ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

ಈಗಾಗಲೇ ಆಯ್ಕೆ ಮಾಡಿರುವ ಫಲಾನುಭವಿಗಳ ಪಟ್ಟಿಯಲ್ಲಿ ಮಾದಿಗ ಸಮುದಾಯವನ್ನು ಕಡೆಗಣಿಸಲಾಗಿದೆ. ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವ ಮಾದಿಗ ಸಮುದಾಯದಲ್ಲಿ ಅನೇಕ ಕುಟುಂಬಗಳು ನಿವೇಶನಗಳಿಲ್ಲದೇ ಅವಿಭಕ್ತ ಕುಟುಂಬದಲ್ಲಿ ವಾಸವಾಗಿದ್ದಾರೆ. ಮತ್ತೊಮ್ಮೆ ಆಯ್ಕೆ ಪಟ್ಟಿಯನ್ನು ಪರಿಶೀಲಿಸಿ ಹೆಚ್ಚಿನ ನಿವೇಶನಗಳನ್ನು ಮಾದಿಗ ಸಮುದಾಯಕ್ಕೆ ನೀಡಬೇಕೆಂದು ಮನವಿ ಮಾಡಿದರು. ಪ್ರತಿಭಟನಾಕಾರರ ಮನವಿ ಸ್ವೀಕರಿಸಿ ಮಾತನಾಡಿದ ಕೋರಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷ ಧನಂಜಯ್, ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ 100 ನಿವೇಶನ, ಅಂಗವಿಕಲರಿಗೆ ಮತ್ತು ಸಾಮಾನ್ಯ ವರ್ಗಕ್ಕೆ ಉಳಿದ ನಿವೇಶನ ಹಂಚಲು ಆಯ್ಕೆ ಮಾಡಲಾಗಿದೆ. ಈಗ ದಲಿತ ಸಮುದಾಯಕ್ಕೆ ಹೆಚ್ಚಿನ ನಿವೇಶನ ನೀಡಲು ಮೊದಲ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

# ಸರ್ಜಾಪುರ ಭೂ ಸ್ವಾಧೀನ ವಿರೋಧಿ ಹೋರಾಟಕ್ಕೆ ಚಿಣ್ಣರ ಬೆಂಬಲ

• ಉದಯವಾಹಿನಿ, ಆನೇಕಲ್

ತಾಲ್ಲೂಕಿನ ಸರ್ಜಾಪುರ ಹೋಬಳಿಯಲ್ಲಿ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆ ವಿರೋಧಿಸಿ ಜ್ಞಾನಜ್ಯೋತಿ ಪಬ್ಲಿಕ್ ಶಾಲೆ ವಿದ್ಯಾರ್ಥಿಗಳು ಮುತ್ತಾನಲ್ಲೂರು ಗ್ರಾಮದಲ್ಲಿ ಜಾಗೃತಿ ಜಾಥಾ ನಡೆಸಿ ರೈತರ ಹೋರಾಟಕ್ಕೆ ಬೆಂಬಲ ಘೋಷಿಸಿದರು. ತಾಲ್ಲೂಕಿನ ಮುತ್ತಾನಲ್ಲೂರು ಗ್ರಾಮದಲ್ಲಿ ಚಿಣ್ಣರು ಫಲಕ ಹಿಡಿದು ಗ್ರಾಮದ ಬೀದಿ ಬೀದಿಗಳಲ್ಲಿ ಭೂಸ್ವಾಧೀನ ವಿರೋಧ ವ್ಯಕ್ತಪಡಿಸಿದರು. ಹಸಿರೇ ಉಸಿರು, ರೈತರೇ ಭೂಮಿಯ ಒಡೆಯ, ರೈತರ ಹೋರಾಟಕ್ಕೆ ಜಯವಾಗಲಿ, ನಮ್ಮ ಭೂಮಿ ನಮ್ಮ ಹಕ್ಕು,

ರೈತರನ್ನು ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ, ರೈತರ ಭೂಮಿಯನ್ನು ಉಳಿಸಿ ರೈತರನ್ನು ರಕ್ಷಿಸಿ ಎಂದು ಘೋಷಣೆ ಕೂಗಿದರು. ಮುತ್ತಾನಲ್ಲೂರು ಹೋರಾಟದ ಸ್ಥಳದಲ್ಲಿ ರೈತರ ಪರವಾಗಿ ಚಿಣ್ಣರು ಮಾತನಾಡುವ ಮೂಲಕ ಗಮನ ಸೆಳೆದರು.

ಪರಿಸರ ಮಾಲಿನ್ಯ, ಜನಸಂಖ್ಯಾ ಸ್ಫೋಟ, ಆಹಾರ ಮತ್ತು ರೈತರ ಮಹತ್ವದ ಬಗ್ಗೆ ವಿದ್ಯಾರ್ಥಿಗಳು ಆಕರ್ಷಕವಾಗಿ ಮಾತನಾಡಿದರು. ಪ್ರಾತ್ಯಕ್ಷಿಕೆಯೊಂದಿಗೆ ವಿದ್ಯಾರ್ಥಿಗಳು ರೈತರಿಗೆ ಭೂಮಿಯ ಮಹತ್ವದ ಬಗ್ಗೆ ಮಾಹಿತಿ ನೀಡಿದರು. ಕೃಷಿ ಮತ್ತು ಕೃಷಿಕ ಈ ದೇಶದ ಆಸ್ತಿಯಾಗಿದ್ದಾರೆ. ಕೈಗಾರಿಕೆಗಳು ಹೆಚ್ಚಾಗುವುದರಿಂದ ಪರಿಸರದ ಮೇಲೆ ಪರಿಣಾಮ ಬೀರುತ್ತದೆ. ಕೈಗಾರಿಕೆಗಳು ಹೆಚ್ಚಾಗುವುದರಿಂದ ನಮ್ಮ ಭೂಮಿಯನ್ನು ಕಳೆದುಕೊಳ್ಳಬೇಕಾಗುತ್ತದೆ. ಹಾಗಾಗಿ ರೈತರ ಭೂಮಿಯನ್ನು ಉಳಿಸುವ ಜವಾಬ್ದಾರಿ ನಮ್ಮ ಮೇಲಿದೆ. ಕೈಗಾರಿಕೆಗಳನ್ನು ಸ್ಥಾಪಿಸುವುದರಿಂದ ಭೂ ಮಾಲಿನ್ಯ, ವಾಯು ಮಾಲಿನ್ಯ, ಜಲ ಮಾಲಿನ್ಯ ಹೆಚ್ಚಾಗುತ್ತದೆ. ಜಲ ಮಲಿನವಾಗುವುದರ ಜೊತೆಗೆ ಭೂಮಿಯು ಸಹ ಮಲಿನವಾಗುತ್ತದೆ ಇದರಿಂದಾಗಿ ನಮ್ಮ ಆಹಾರದ ಮೇಲೂ ಪ್ರಭಾವ ಬೀರುತ್ತದೆ ಎಂದು ವಿದ್ಯಾರ್ಥಿನಿ ಚಿರುಶ್ರೀ ತಿಳಿಸಿದರು. ರಾಜಕಾರಣಿಗಳದ್ದೇ ಸಾವಿರಾರು ಎಕರೆ ಭೂಮಿಯಿದೆ. ಅದನ್ನು ಬಿಟ್ಟು ರೈತರ ಭೂಮಿಯನ್ನು ಕಿತ್ತುಕೊಳ್ಳುತ್ತಿರುವುದು ಖಂಡನೀಯ. ಕೃಷಿಕ ಮಾತ್ರ ಅನ್ನ ಬೆಳೆಯುತ್ತಾರೆ. ಕೃಷಿಯನ್ನು ತೆಗೆದುಹಾಕಲು ಭೂಮಿ ಕಿತ್ತುಕೊಳ್ಳುತ್ತಿರುವುದು ಖಂಡನೀಯ ಎಂದು ವಿದ್ಯಾರ್ಥಿ ಶಿವನಾರಾಯಣ್ ಹೇಳಿದರು. ಸರ್ಜಾಪುರ ಹೋಬಳಿಯು ಕೃಷಿಗೆ ಪೂರಕವಾದ ಭೂಮಿ. ಕೈಗಾರಿಕೆಗಳು ಹೊರಸೂಸುವ ಅನಿಲಗಳಿಂದಾಗಿ ಮಾಲಿನ್ಯ ಹೆಚ್ಚಾಗುತ್ತದೆ.


ಉದಯವಾಹಿನಿ ಚಿತ್ರ

ಆನೇಕಲ್ ತಾಲ್ಲೂಕಿನಲ್ಲಿ ಈಗಾಗಲೇ ಐದು ಕೈಗಾರಿಕ ಪ್ರದೇಶಗಳಿರುವುದರಿಂದ ಮತ್ತೊಂದು ಕೈಗಾರಿಕೆಯ ಅವಶ್ಯಕತೆ ಇಲ್ಲ ಎಂದು ಜ್ಞಾನಜ್ಯೋತಿ ಪಬ್ಲಿಕ್ ಶಾಲೆಯ ಮುಖ್ಯಸ್ಥ ಅಜಯ್ ಹೇಳಿದರು.

# ಸಿಎಂ ನಗರ ಪ್ರದಕ್ಷಿಣೆ: ರಸ್ತೆಯಲ್ಲಿ ತ್ಯಾಜ್ಯ ಚೆಲ್ಲಿದ್ದಕ್ಕೆ ಗರಂ

## ರಸ್ತೆಯಲ್ಲಿ ನೀರು ನಿಲ್ಲದಂತೆ ನೀರು ಸರಾಗವಾಗಿ ಹರಿದು ಚರಂಡಿ ಸೇರುವ ಹಾಗೆ ವ್ಯವಸ್ಥೆ ಮಾಡಿ ಎಂದು ಸಿಎಂ ಅವರು ಜಿಬಿಎ ಅಧಿಕಾರಿಗಳಿಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಮಧ್ಯಾಹ್ನದಿಂದ ನಗರ ಪ್ರದಕ್ಷಿಣೆ ನಡೆಸುತ್ತಿದ್ದಾರೆ. ಬಳ್ಳಾರಿ ರಸ್ತೆಯ ವಿಂಡ್ಸರ್ ಮ್ಯಾನರ್ ವೃತ್ತ ಚರಂಡಿ ವ್ಯವಸ್ಥೆ ಸರಿ ಇಲ್ಲದ ಕಾರಣ ನೀರು ನಿಲ್ಲುತ್ತಿದೆ ಎಂದು ಅಧಿಕಾರಿಗಳು ಮುಖ್ಯಮಂತ್ರಿಯವರಿಗೆ ಮಾಹಿತಿ ನೀಡಿದರು. ರಸ್ತೆಯಲ್ಲಿ ನೀರು ನಿಲ್ಲದಂತೆ ನೀರು ಸರಾಗವಾಗಿ ಹರಿದು ಚರಂಡಿ ಸೇರುವ ಹಾಗೆ ವ್ಯವಸ್ಥೆ ಮಾಡಿ ಎಂದು ಮುಖ್ಯಮಂತ್ರಿಯವರು ಜಿಬಿಎ ಅಧಿಕಾರಿಗಳಿಗೆ ಸೂಚನೆ ನೀಡಿದರು. ವಿಂಡ್ಸರ್ ಮ್ಯಾನರ್ ವೃತ್ತದಲ್ಲಿನ ರಸ್ತೆ ಕಾರ್ಯ, ಮತ್ತೊಂದು ಬದಿ ರಾತ್ರಿ ಮುಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ರಸ್ತೆಯಲ್ಲಿ ಘನ ತ್ಯಾಜ್ಯ ಚೆಲ್ಲಿದ್ದಕ್ಕೆ ಗರಂ ಆದ ಸಿಎಂ:** ಮಾರ್ಗ ಮಧ್ಯದಲ್ಲಿ ರಿಂಗ್ ರಸ್ತೆಯ ಬದಿಯಲ್ಲಿ ಸಿಸಿ ಕ್ಯಾಮರಾ ಇಲ್ಲದಿರುವ ಜಾಗದಲ್ಲಿ ಹಳೆ ಕಟ್ಟಡ ತ್ಯಾಜ್ಯ ಸುರಿದಿರುವುದನ್ನು ಗಮನಿಸಿದ ಸಿಎಂ, ತಮ್ಮ ವಾಹನ ಚಾಲಕ ನವೀನ್‌ಗೆ ಕಾರು ನಿಲ್ಲಿಸುವಂತೆ ಸೂಚಿಸಿದರು. ಕಾರಿನಿಂದ ಇಳಿದ ಸಿಎಂ ಈ ಜಾಗದಲ್ಲಿ ತ್ಯಾಜ್ಯ ಸುರಿದಿರುವವರನ್ನು ಪತ್ತೆ ಹಚ್ಚಿ ಅವರ ವಾಹನ ಸೀಜ್ ಮಾಡಿ ಕೇಸು ದಾಖಲಿಸುವಂತೆ ಸೂಚಿಸಿದರು. ಬಳಿಕ, ಅಧಿಕಾರಿಗಳೇನು ರಸ್ತೆಯಲ್ಲಿ ಕಣ್ಣು ಮುಚ್ಚಿಕೊಂಡು ಓಡಾಡ್ತೀರಾ?. ರಸ್ತೆಗೆ ತ್ಯಾಜ್ಯ ಸುರಿದಿರುವುದನ್ನು ಗಮನಿಸೋಕೆ ಆಗೋದಿಲ್ಲವಾ ಎಂದು ಬಿಬಿಎಂಪಿ, ಬಿಡಿಎ ಮತ್ತು ಟ್ರಾಫಿಕ್ ಪೊಲೀಸರನ್ನು ಖಾರವಾಗಿ ಪ್ರಶ್ನಿಸಿ ಸೂಕ್ತ ಕ್ರಮಕ್ಕೆ ಸೂಚಿಸಿದರು.


ಉದಯವಾಹಿನಿ ಚಿತ್ರ

ರಸ್ತೆಯಲ್ಲಿ ನೀರು ನಿಲ್ಲದಂತೆ ಮಾಡಿ

**ಎಷ್ಟು ವರ್ಷದ ಹಳೆ ಕಸ ಇದು: ಕಣ್ಣಿಲ್ವಾ ನಿಮಗೆ-ಸಿಎಂ:** ಹೆಣ್ಣೂರು ಫ್ಲೈಓವರ್ ಕೆಳಗೆ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿದಿದ್ದು, ಅದರೊಳಗೆ ತಲೆ ಎತ್ತರಕ್ಕೆ ಗಿಡಗಳು ಬೆಳೆದು ನಿಂತಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಗರಂ ಆದರು. ಇದು ತುಂಬಾ ಹಳೆ ತ್ಯಾಜ್ಯ. ಇಷ್ಟು ವರ್ಷ ಎಷ್ಟು ಜನ ಅಧಿಕಾರಿಗಳು ಇಲ್ಲಿ ಓಡಾಡಿರ್ತೀರಿ. ಯಾರಿಗೂ ಕಣ್ಣಿಗೇ ಬಿದ್ದಿಲ್ವಾ ಎಂದು ಪ್ರಶ್ನಿಸಿ 24 ಗಂಟೆಗಳ ಒಳಗೆ ತ್ಯಾಜ್ಯ ತೆರವುಗೊಳಿಸುವಂತೆ ಖಡಕ್ ಸೂಚನೆ ನೀಡಿದರು.

### ವೈಟ್ ಟಾಪಿಂಗ್ ಗುತ್ತಿಗೆದಾರರು, ಎಂಜಿನಿಯರ್‌ಗಳ ವಿರುದ್ಧ ಕ್ರಮಕ್ಕೆ ಸೂಚನೆ

**ಹೆಣ್ಣೂರಿನ ಬಾಗಲೂರು ರಸ್ತೆಯಲ್ಲಿ ವೈಟ್ ಟಾಪಿಂಗ್ ಮಾಡಲು ಆರಿಸಿಕೊಂಡ ರಸ್ತೆಗಳಲ್ಲಿ ಗುಂಡಿಗಳು ಬಿದ್ದಿರುವುದರ ಹೊಣೆಯನ್ನು ಗುತ್ತಿಗೆದಾರರೇ ಹೊರಬೇಕಿದೆ. ಒಮ್ಮೆ ವೈಟ್ ಟಾಪಿಂಗ್ ಗೆ ರಸ್ತೆಯನ್ನು ಒಪ್ಪಿಸಿದ ಮೇಲೆ ಆ ರಸ್ತೆಗಳ ನಿರ್ವಹಣೆಗೆ ಹಣ ಕೊಡಲು ಬರುವುದಿಲ್ಲ. ವೈಟ್ ಟಾಪಿಂಗ್ ಮುಗಿಯುವಾಗ 2-3 ವರ್ಷ ಆಗುತ್ತದೆ. ಅಲ್ಲಿಯವರೆಗೂ ಗುತ್ತಿಗೆದಾರರೇ ರಸ್ತೆಗಳ ನಿರ್ವಹಣೆ ಮಾಡಬೇಕು. ಆದರೆ ಹೇಳೋರು ಕೇಳೋರು ಇಲ್ಲದಂತೆ ಗುತ್ತಿಗೆದಾರರು ವರ್ತಿಸುತ್ತಾರೆ ಎಂದು ಜಿಬಿಎ ಅಧಿಕಾರಿಗಳು ತಿಳಿಸಿದರು. ಸಮರ್ಪಕ ನಿರ್ವಹಣೆ ಮಾಡದ ವೈಟ್ ಟಾಪಿಂಗ್ ಗುತ್ತಿಗೆದಾರರು ಮತ್ತು ಇಂಜಿನಿಯರ್‌ಗಳ ವಿರುದ್ಧ ಕ್ರಮಕ್ಕೆ ಮುಖ್ಯಮಂತ್ರಿ ಸೂಚನೆ ನೀಡಿದರು.**

**ಘನ ತ್ಯಾಜ್ಯ ಸಂಗ್ರಹಣಾ ಕೇಂದ್ರದಿಂದ ಹೊರಗೆ ಬಂದ ತ್ಯಾಜ್ಯ:** ಬಿ ಸ್ಟೈಲ್‌ನ ತಾಂತ್ರಿಕ ನಿರ್ದೇಶಕನಿಗೆ ನೋಟಿಸ್ ನೀಡಲು ಸೂಚನೆ ವಾರ್ಡ್ ನಂಬರ್ 23 ರ ಘನ ತ್ಯಾಜ್ಯ ಸಂಗ್ರಹಣಾ ಕೇಂದ್ರದ ಒಳಗೆ ಇರಬೇಕಾದ ತ್ಯಾಜ್ಯ ಸಂಗ್ರಹಣಾ ಕೇಂದ್ರದ ಹೊರಗೆ ಬಂದು ರಾಶಿ ಬಿದ್ದಿರುವುದನ್ನು ಗಮನಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಿಟ್ಟಾದರು. ಸಂಗ್ರಹಣಾ ಕೇಂದ್ರದ ಒಳಗೆ ಸಾಕಷ್ಟು ಜಾಗ ಖಾಲಿ ಇರುವುದನ್ನು ಗಮನಿಸಿದ ಅವರು, ಬಿ ಸ್ಟೈಲ್ ನ ತಾಂತ್ರಿಕ ನಿರ್ದೇಶಕ ಪ್ರಹ್ಲಾದ್ ಅವರಿಗೆ ನೋಟಿಸ್ ನೀಡಲು ಸೂಚನೆ ನೀಡಿದರು. ಬಳಿಕ ಅಲ್ಲಿಂದ ಕೆಲವೇ ದೂರದಲ್ಲಿ ರಸ್ತೆಯಲ್ಲಿ ಜೆಲ್ಲಿ ಕಲ್ಲುಗಳು ಬಿದ್ದಿರುವುದನ್ನು ಗಮನಿಸಿ ಇದಕ್ಕೆ ಕಾರಣರಾದ ಮುಖ್ಯ ಇಂಜಿನಿಯರ್ ರಾಘವೇಂದ್ರ ಪ್ರಸಾದ್ ಅವರಿಗೂ ನೋಟಿಸ್ ನೀಡಿ ಎಂದು ಸೂಚಿಸಿದರು.

**ವೈಟ್ ಟಾಪಿಂಗ್ ರಸ್ತೆ ಹಾಳು: ದುರಸ್ತಿಗೆ ಸಿಎಂ ಸೂಚನೆ:** ಮೆಟ್ರೊ ಕಾಮಗಾರಿ ಆಗುವಾಗ ಅವರು (ಮೆಟ್ರೊ) ಸರ್ವೀಸ್ ರಸ್ತೆಗಳ ನಿರ್ಲಕ್ಷ್ಯ ಮಾಡಿರುವುದು, ರಸ್ತೆ ಬದಿ ನೀರು ನಿಲ್ಲುವಂತೆ ಮಾಡಿರುವುದು, ನೀರು ಸರಾಗವಾಗಿ ಹರಿಯಲು ಇರುವ ವ್ಯವಸ್ಥೆಯನ್ನೂ ಮುಚ್ಚಿಸಿರುವ ಬಗ್ಗೆ, ವೈಟ್ ಟಾಪಿಂಗ್ ರಸ್ತೆ ಹಾಳು ಮಾಡಿರುವ ಬಗ್ಗೆ ಅಧಿಕಾರಿಗಳು ಮುಖ್ಯಮಂತ್ರಿ ಅವರ ಗಮನಕ್ಕೆ ತಂದರು. ಎಲ್ಲವನ್ನೂ ಗಮನಿಸಿದ ಸಿಎಂ ತಕ್ಷಣ ದುರಸ್ತಿಗೆ ಹಾಗೂ ಸರ್ವೀಸ್ ರಸ್ತೆಗಳ ನಿರ್ವಹಣೆಗೆ ಸೂಚನೆ ನೀಡಿದರು.

# ದಲಿತ ಪರ ಎನ್ನುತ್ತಲೇ ಸಮುದಾಯಕ್ಕೆ ದ್ರೋಹ ಬಗೆಯುತ್ತಿರುವ ರಾಜ್ಯ

## ಗ್ಯಾರಂಟಿಗೆ ಪರಿಶಿಷ್ಟರ ಹಣ ಬಳಕೆ: ಸರ್ಕಾರ ವಿರುದ್ಧ ದಲಿತ ಮುಖಂಡರ ಅಸಮಾಧಾನ

• ಉದಯವಾಹಿನಿ, ರಾಮನಗರ

ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್‌ಸಿಎಸ್‌ಪಿ) ಮತ್ತು ಬುಡಕಟ್ಟು ಉಪ ಯೋಜನೆ (ಟಿಎಸ್‌ಪಿ) ಕಾಯ್ದೆಯಡಿ ಪರಿಶಿಷ್ಟರ ಕಲ್ಯಾಣಕ್ಕಾಗಿ ಇಟ್ಟಿರುವ ಅನುದಾನವನ್ನು, ಗ್ಯಾರಂಟಿ ಯೋಜನೆಗಳಿಗೆ ಬಳಸುತ್ತಿರುವುದಕ್ಕೆ ದಲಿತ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಈ ಕುರಿತು ನಗರದ ಸ್ಫೂರ್ತಿ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಹನುಮಯ್ಯ, 'ನಾನೂ ಸಹ ದಲಿತ ಎನ್ನುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಪರಿಶಿಷ್ಟರ ಕಲ್ಯಾಣಕ್ಕಾಗಿ ಕಾಯ್ದೆ ಜಾರಿಗೆ ತಂದರು. ಆದರೆ, ಅವರೇ ಆ ಕಾಯ್ದೆಯ ಆಶಯಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಾ ದಲಿತರಿಗೆ ದ್ರೋಹ ಬಗೆಯುತ್ತಿದ್ದಾರೆ' ಎಂದರು.

'ಕಾಯ್ದೆ ಜಾರಿಗೆ ಬಂದಾಗಿನಿಂದಲೂ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸಲಾಗುತ್ತಿದೆ. ಇದಕ್ಕೆ ಬಿಜೆಪಿ ಮತ್ತು ಜೆಡಿಎಸ್ ಸಹ ಹೊರತಲ್ಲ. ಅದಕ್ಕೆ ಕಾಯ್ದೆಯಲ್ಲಿ ಅವಕಾಶವಿದ್ದ ಸೆಕ್ಷನ್ 7 ಡಿ ಅನ್ನು ಇದೇ ಸಿದ್ದರಾಮಯ್ಯ ಅವರು ರದ್ದುಪಡಿಸಿದರೂ, ಸೆಕ್ಷನ್ 7 'ಸಿ' ಮೂಲಕ ಅನುದಾನವನ್ನು ಗ್ಯಾರಂಟಿಗೆ ಹರಿಸುತ್ತಿದ್ದಾರೆ. ಕೂಡಲೇ ಆ ಸೆಕ್ಷನ್ ರದ್ದುಪಡಿಸಬೇಕು ಎಂದು ಆಗ್ರಹಿಸಿದರು.



ಉದಯವಾಹಿನಿ ಚಿತ್ರ

**ಅನ್ಯಾಯದ ವಿರುದ್ಧ ಹೋರಾಟ**

**ರಾಜ್ಯ ಸರ್ಕಾರ ಮೂರು ವರ್ಷಗಳಿಂದ ಗ್ಯಾರಂಟಿ ಯೋಜನೆಗಳಿಗಾಗಿಯೇ ಬಜೆಟ್‌ನಲ್ಲಿ 52 ಸಾವಿರ ಕೋಟಿ ಮೀಸಲಿಡುತ್ತಿದೆ. ಆದರೂ ಪರಿಶಿಷ್ಟರ ಹಣ ಯಾಕೆ ಬಳಸುತ್ತಿದೆ ವರ್ಷದಿಂದ ವರ್ಷಕ್ಕೆ ಗ್ಯಾರಂಟಿ ಫಲಾನುಭವಿಗಳ ಸಂಖ್ಯೆಯಲ್ಲಿ ಇಳಿಮುಖವಾದರೂ ಪರಿಶಿಷ್ಟರ ಹಣ ಬಳಕೆ ಮಾತ್ರ ಏರುತ್ತಿರುವುದು ಸೋಜಿಗ. ಈ ಕುರಿತು ಸಮುದಾಯದ ಜನಪ್ರತಿನಿಧಿಗಳು ಪ್ರಶ್ನಿಸಿ ನಮ್ಮ ಹಣ ಗ್ಯಾರಂಟಿ ಪಾಲಾಗುವುದನ್ನು ತಡೆಯಬೇಕು. ಸಮುದಾಯಕ್ಕೆ ಆಗುತ್ತಿರುವ ಅನ್ಯಾಯದ ಕುರಿತು ಮುಂದೆ ಕರಪತ್ರ ಮುದ್ರಿಸಿ ಹಂಚಿ ಜನಜಾಗೃತಿ ಮೂಡಿಸುವ ಮೂಲಕ ಹೋರಾಟ ಆರಂಭಿಸಲಾಗುವುದು ಎಂದು ಮುಖಂಡ ಶಿವಲಿಂಗಯ್ಯ ಎಚ್ಚರಿಕೆ ನೀಡಿದರು.**

ಪರಿಶಿಷ್ಟರ ಕಲ್ಯಾಣಕ್ಕೆ ಬಳಸಬೇಕಿದ್ದ ಸಾವಿರಾರು ಕೋಟಿ ಹಣವನ್ನು ಪ್ರತಿ ವರ್ಷ ಅನ್ಯ ಉದ್ದೇಶಕ್ಕೆ ಬಳಸಿದರೆ, ಕಾಯ್ದೆಯ ಪ್ರಯೋಜನವಾಗದರೂ ಏನು? ವರ್ಷದಿಂದ ವರ್ಷಕ್ಕೆ ಗ್ಯಾರಂಟಿಗೆ ನಮ್ಮ ಹಣ ಬಳಕೆ ಪ್ರಮಾಣ ಏರುತ್ತಲೇ ಇದೆ. ಈ ಕುರಿತು ಸಮುದಾಯದ

> ಗ್ಯಾರಂಟಿ ಯೋಜನೆಗಳಿಗೆ ಎಲ್ಲಾ ಜಾತಿ ಮತ್ತು ಧರ್ಮದವರೂ ಫಲಾನುಭವಿಗಳಾಗಿದ್ದಾರೆ. ಆದರೆ ದಲಿತರ ಹಣವಷ್ಟೇ ಯಾಕೆ ಗ್ಯಾರಂಟಿಗೆ ಬಳಸಲಾಗುತ್ತಿದೆ? ಬೇರೆ ಸಮುದಾಯಗಳ ಹಣವನ್ನು ಗ್ಯಾರಂಟಿಗೆ ಬಳಸುವ ತಾಕತ್ತು ಸರ್ಕಾರಕ್ಕೆ ಇದೆಯೇ?
> - ಲೋಕೇಶ್ ಮೌರ್ಯ
> ಸದಸ್ಯ, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ

ಸಚಿವರು ಹಾಗೂ ಶಾಸಕರು ತುಟಿ ಬಿಚ್ಚದಿರುವುದು ದಲಿತರಿಗೆ ಬಗೆಯುವ ದ್ರೋಹವಾಗಿದೆ ಎಂದರು. ಜಿಲ್ಲಾ ಜಾಗೃತಿ, ಉಸ್ತುವಾರಿ ಸಮಿತಿ ಸದಸ್ಯ ಡಾ. ಲೋಕೇಶ್ ಮೌರ್ಯ ಮಾತನಾಡಿ, ಪರಿಶಿಷ್ಟರ ಹಣ ಗ್ಯಾರಂಟಿ ಯೋಜನೆಗಳಿಗೆ ಹರಿಯುತ್ತಿರುವುದರಿಂದಾಗಿ ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಬಹುತೇಕ ಇಲಾಖೆಗಳಲ್ಲಿ ಪರಿಶಿಷ್ಟರ ಯೋಜನೆಗಳು ಜಾರಿಯಾಗುತ್ತಿಲ್ಲ. ಟ್ಯಾಕ್ಸಿ ವಿತರಣೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಸೇರಿದಂತೆ ಹಲವು ಯೋಜನೆಗಳು ನನೆಗುದಿಗೆ ಬಿದ್ದಿವೆ ಎಂದು ಹೇಳಿದರು. ಮುಖಂಡರಾದ ಕೃಷ್ಣಯ್ಯ, ಶಿವಬಸವಯ್ಯ, ಶಿವಶಂಕರ್, ರಾಜಶೇಖರ್, ಇತರರು ಇದ್ದರು.

# ಶಾಸಕ ಶ್ರೀನಿವಾಸ್ ವಿರುದ್ಧ ರೈತರ ಪ್ರತಿಭಟನೆ

• ಉದಯವಾಹಿನಿ, ಮಾಗಡಿ


ಉದಯವಾಹಿನಿ ಚಿತ್ರ

**ಸೋಲೂರು ಮಾಗಡಿಯಲ್ಲೇ ಉಳಿಯಲಿ**

ಸೋಲೂರು ಹೋಬಳಿಯು ನೆಲಮಂಗಲ ತಾಲ್ಲೂಕಿಗೆ ಸೇರಬೇಕು ಎಂಬ ಹೇಳಿಕೆ ಮೂಲಕ ನೆಲಮಂಗಲ ಶಾಸಕ ಎನ್. ಶ್ರೀನಿವಾಸ್ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಪ್ರಗತಿಪರ ರೈತ ಹೋರಾಟಗಾರ ಕನ್ನಡ ಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಕಲ್ಯಾಗೇಟ್‌ನಲ್ಲಿ ವಿವಿಧ ಕನ್ನಡಪರ ಸಂಘಟನೆ, ತಾಲ್ಲೂಕು ವಕೀಲರ ಸಂಘದಿಂದ ನಡೆದ ಸೋಲೂರು ಹೋಬಳಿ ತಾಲ್ಲೂಕಿನಲ್ಲೇ ಉಳಿಯಬೇಕು ಎಂಬ ಪ್ರತಿಭಟನೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ನೆಲಮಂಗಲ ಶಾಸಕ ಎನ್. ಶ್ರೀನಿವಾಸ್ ಅವರು ಸೋಲೂರು ಹೋಬಳಿ ನೆಲಮಂಗಲಕ್ಕೆ ಸೇರಿದೆ ಎಂಬ ಗೊಂದಲದ ಹೇಳಿಕೆ ನೀಡಿದ್ದಾರೆ.

ನಾವು ಕೂಡ ನಮ್ಮ ಹೋಬಳಿಯನ್ನು ಉಳಿಸಿಕೊಳ್ಳಲು ದೊಡ್ಡಮಟ್ಟದಲ್ಲಿ ಹೋರಾಡುತ್ತೇವೆ. ಸೋಲೂರನ್ನು ಮಾಗಡಿಯಿಂದ ಬಿಟ್ಟುಕೊಡುವ ಪ್ರಶ್ನೆಯೇ ಇಲ್ಲ. ಮೊದಲ ಬಾರಿಗೆ ಶಾಸಕರಾಗಿರುವ ಶ್ರೀನಿವಾಸ್, ಮಾಗಡಿಯನ್ನು ಒಡೆಯುವ ಕೆಲಸ ಮಾಡುತ್ತಿದ್ದಾರೆ. ಮಂಚನಬೆಲೆ ಗ್ರಾಮದ ಅವರು ಈ ರೀತಿ ಮಾಡುತ್ತಿರುವುದು ಸರಿಯಲ್ಲ ಎಂದರು. ಈ ವಿಚಾರದಲ್ಲಿ ಮೌನ ತಾಳಿರುವ ಶಾಸಕ ಬಾಲಕೃಷ್ಣ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಬೇಕು. ಸರ್ಕಾರದ ಭಾಗವಾಗಿರುವ ಶಾಸಕ ಬಾಕೃಷ್ಣ ಅವರು ಈ ವಿಚಾರದಲ್ಲಿ ಗಟ್ಟಿಯಾಗಿ ಧ್ವನಿ ಎತ್ತಬೇಕು ಎಂದು ಆಗ್ರಹಿಸಿದರು. ಸೋಲೂರು ಹೋಬಳಿಯನ್ನು ನೆಲಮಂಗಲಕ್ಕೆ ಸೇರಿಸಬೇಕು ಎಂಬುದು ದೊಡ್ಡ ತಪ್ಪು. ಅಲ್ಲದೆ, ಶಾಸಕ ಶ್ರೀನಿವಾಸ್, ಮಂಚನಬೆಲೆ ಜಲಾಶಯಕ್ಕೆ ವಿಷ ಕೊಡುವ ಕೆಲಸವನ್ನೂ ಮಾಡುತ್ತಿದ್ದಾರೆ. ವಿರೋಧದ ನಡುವೆಯೂ ವೃಷಭಾವತಿ ಕಲುಷಿತ ನೀರನ್ನು ಶುದ್ದೀಕರಿಸಿ, ನೆಲಮಂಗಲ ಕೆರೆಗಳಿಗೆ ತುಂಬಿಸುತ್ತಿದ್ದಾರೆ. ನೆಲಮಂಗಲ ಕೆರೆಗಳು ತುಂಬಿದರೆ ಅರ್ಕಾವತಿ ಮೂಲಕ ತಿಪ್ಪಗೊಂಡನಹಳ್ಳಿ ಜಲಾಶಯಕ್ಕೆ ಕಲುಷಿತ ನೀರು ಸೇರುತ್ತದೆ. ಆ ನಂತರ ಮಂಚನಬೆಲೆ ಜಲಾಶಯಕ್ಕೂ ಇದೇ ನೀರು ಸೇರಲಿದೆ ಎಂದರು.

ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಸುರೇಶ್ ಮಾತನಾಡಿ, ಸೋಲೂರು ಹೋಬಳಿ ಮಾಗಡಿ ತಾಲ್ಲೂಕಿನಲ್ಲಿ ಉಳಿಯಬೇಕಾದರೆ ಸೋಲೂರು ಹೋಬಳಿಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಕ್ಕೆ ಆಕ್ಷೇಪಣೆ ಅರ್ಜಿ ಸಲ್ಲಿಸಬೇಕು ಎಂದು ಹೇಳಿದರು.

ಕಲ್ಯಾಗೇಟ್ ವಿನಾಯಕ ದೇವಸ್ಥಾನದಿಂದ ತಾಲ್ಲೂಕು ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ಮಾಡಲಾಯಿತು. ನಂತರ ತಹಶೀಲ್ದಾರ್ ಪ್ರಭಾಕರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

# ಮಹದೇಶ್ವರ ಬೆಟ್ಟ: 6 ವರ್ಷ ಬಳಿಕ ಮಾದಪ್ಪನ ತೆಪ್ಪೋತ್ಸವ

• ಉದಯವಾಹಿನಿ, ಮಹದೇಶ್ವರ ಬೆಟ್ಟ

6 ವರ್ಷಗಳ ಬಳಿಯ ನಡೆಯುತ್ತಿರುವ ಮಲೆ ಮಾದೇಶ್ವರ ಸ್ವಾಮಿಯ ತೆಪ್ಪೋತ್ಸವಕ್ಕೆ ಪ್ರಾಧಿಕಾರದ ವತಿಯಿಂದ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ. ದಕ್ಷಿಣ ಕಾಶಿ ಎಂದೇ ಪ್ರಖ್ಯಾತಿ ಪಡೆದಿರುವ ಪವಿತ್ರ ಧಾರ್ಮಿಕ ಯಾತ್ರಾ ಸ್ಥಳವಾದ ಮಾದಪ್ಪನ ಸನ್ನಿಧಿಯಲ್ಲಿ ನಡೆಯುವ ತೆಪ್ಪೋತ್ಸವ ಲಕ್ಷಾಂತರ ಭಕ್ತರನ್ನು ಆಕರ್ಷಿಸುತ್ತಿದೆ. ದಸರಾ, ಕಡೇ ಕಾರ್ತಿಕ ಸೋಮವಾರ, ದೀಪಾವಳಿ ಜಾತ್ರಾ, ಮಹೋತ್ಸವ ಸೇರಿದಂತೆ ವರ್ಷದಲ್ಲಿ ನಾಲ್ಕು ಬಾರಿ ತೆಪ್ಪೋತ್ಸವ ನಡೆಯವುದು ಸಂಪ್ರದಾಯ. ಕ್ಷೇತ್ರದ ದೊಡ್ಡಕೆರೆಯಲ್ಲಿ ನಡೆಯುವ ತೆಪ್ಪೋತ್ಸವದಲ್ಲಿ ವಿದ್ಯುತ್ ದೀಪಾಲಂಕಾರ ಕಣ್ಮನ ಸೆಳೆಯುತ್ತದೆ.

ತೆಪ್ಪೋತ್ಸವ ನಡೆಯುವಾಗ ಸಿಡಿ ಮದ್ದುಗಳ ಪ್ರದರ್ಶನವೂ ಜನಾಕರ್ಷಣೆಯಾಗಿದ್ದು, ಸಾವಿರಾರು ಭಕ್ತರು ಹಾಜರಿದ್ದು ಕಣ್ತುಂಬಿಕೊಳ್ಳುತ್ತಾರೆ. ಪ್ರತಿವರ್ಷ ನಡೆಯುತಿದ್ದ ತೆಪ್ಪೋತ್ಸವ ಕಾರ್ಯಕ್ರಮ ಕಲ್ಯಾಣಿ ಅಭಿವೃದ್ಧಿ ಕಾಮಗಾರಿಯ ಪರಿಣಾಮ ಕಳೆದ 6 ವರ್ಷಗಳಿಂದ ನಡೆದಿರಲಿಲ್ಲ. ಇದೀಗ ದಸರಾ ಹಬ್ಬದ ಹೊತ್ತಿಗೆ ಕಾಮಗಾರಿಗಳು ಪೂರ್ಣಗೊಂಡು ತೆಪ್ಪೋತ್ಸವಕ್ಕೆ ಸಿದ್ಧತೆಗಳು ನಡೆಯುತ್ತಿರುವುದು ಭಕ್ತರ ಮೊಗದಲ್ಲಿ ಮಂದಹಾಸ ಮೂಡಿಸಿದೆ.

ಕ್ಷೇತ್ರದಲ್ಲಿ ನಡೆಯುವ ತೆಪ್ಪೋತ್ಸವ ವೀಕ್ಷಿಸಲು ಭಕ್ತರು ಕಾತರದಿಂದ ಕಾಯುತ್ತಿದ್ದಾರೆ. ಹರಕೆ ತೀರಿಸಲು ಬರುವ ಭಕ್ತರು 7 ದಿನ, 15 ದಿನ, 30 ದಿನ ದೇವಾಲಯದ ಇಕ್ಕೆಲಗಳಲ್ಲಿ


ಉದಯವಾಹಿನಿ ಚಿತ್ರ

ತಂಗಿ ಹರಕೆ, ಕಾಣಿಕೆ ತೀರಿಸಿ ತೆಪ್ಪೋತ್ಸವದಲ್ಲಿ ಭಾಗಿಯಾಗಿ ದೇವರ ದರ್ಶನ ಪಡೆದರೆ ಹರಕೆ ಸಂಪನ್ನವಾಗುತ್ತದೆ ಎಂಬ ನಂಬಿಕೆ ಭಕ್ತರಲ್ಲಿದೆ.

ಅದರಂತೆ ಪ್ರತಿವರ್ಷ ತೆಪ್ಪೋತ್ಸವ ಹತ್ತಿರವಾಗುವ ಸಮಯಕ್ಕೆ ಬರುವ ಭಕ್ತರು ಹರಕೆ ಸಲ್ಲಿಸಿ ತೆಪ್ಪೋತ್ಸವ ವೀಕ್ಷಿಸಿ ದೇವರ ದರ್ಶನ ಪಡೆದು ಸ್ವಗ್ರಾಮಗಳಿಗೆ ತೆರಳುತ್ತಾರೆ.

**ತೆಪ್ಪೋತ್ಸವ ವಿಧಿವಿಧಾನಗಳು:** ದೇವಾಲಯದ ಒಳ ಭಾಗದಲ್ಲಿರುವ ಶಿವ ಪಾರ್ವತಿಯ ಉತ್ಸವ ಮೂರ್ತಿಗಳಿಗೆ ಅಲಂಕಾರ ಮಾಡಿ ಕುದುರೆ ವಾಹನೋತ್ಸವದಲ್ಲಿ ಮೆರವಣಿಗೆ ತಂದು ದೇವಾಲಯದ ಸುತ್ತಲೂ ಪ್ರದಕ್ಷಿಣೆ ಹಾಕಲಾಗುತ್ತದೆ. ಬಳಿಕ ಉತ್ಸವ ಮೂರ್ತಿಗಳನ್ನು ದೊಡ್ಡಕೆರೆಯ ಬಳಿ ತಂದು ಪೂಜೆ ಪುನಸ್ಕಾರಗಳನ್ನು ಮಾಡಿ ತೆಪ್ಪದೊಳಗೆ ಕೂರಿಸಿ ಕಲ್ಯಾಣಿಯೊಳಗೆ ಮೂರು ಪ್ರದಕ್ಷಿಣೆ ಹಾಕಲಾಗುತ್ತದೆ. ಈ ಮೂಲಕ ತೆಪ್ಪೋತ್ಸವ ಸಂಪನ್ನಗೊಳ್ಳಲಿದೆ.

# ಆಧುನಿಕ ಕೃಷಿ ಪದ್ಧತಿಯಿಂದ ಪ್ರಗತಿ

• ಉದಯವಾಹಿನಿ, ಮೈಸೂರು



**ಕಬ್ಬು ಕಟಾವು ಯಂತ್ರಕ್ಕೆ ಸುಮಾರು 1 ಕೋಟಿ ದರವಿದ್ದು, ರಾಜ್ಯ ಸರ್ಕಾರ ರೈತರಿಗೆ ಶೇ 50ರಷ್ಟು ಸಬ್ಸಿಡಿ ನೀಡುತ್ತಿದೆ. ಪರಿಶಿಷ್ಟ ಜಾತಿ, ಪಂಗಡಕ್ಕೆ ತಲಾ 50 ಲಕ್ಷ, ಹಿಂದುಳಿದ ವರ್ಗಕ್ಕೆ 40 ಲಕ್ಷ ಸಹಾಯ ಧನ ನೀಡಿ ಉತ್ತೇಜನ ನೀಡುತ್ತಿದೆ. ಯಂತ್ರೋಪಕರಣಕ್ಕಾಗಿಯೇ 1 ಸಾವಿರ ಕೋಟಿ ಮೀಸಲಿರಿಸಿದ್ದು, ಸುಮಾರು 334 ಫಲಾನುಭವಿಗಳು ಇದರ ಸೌಲಭ್ಯ ಪಡೆದುಕೊಂಡಿದ್ದಾರೆ. ನಾಟಿ, ಕಟಾವು ಇನ್ನಿತರ ಕೆಲಸಕ್ಕೆ ಯಂತ್ರೋಪಕರಣಗಳನ್ನು ಬಳಸಿ ಎಂದರು. ಗ್ರಾಮೀಣ ಭಾಗಗಳಲ್ಲಿ ಕೃಷಿ ಮಾಹಿತಿ ತಿಳಿಸಲು ಕೃಷಿ ಪರಿಸರ ಪ್ರವಾಸೋದ್ಯಮ ಕೈಪಿಡಿ ಬಿಡುಗಡೆಗೊಳಿಸಲಾಯಿತು.**

ಆಧುನಿಕ ಕೃಷಿ ಪದ್ಧತಿ ಅಳವಡಿಕೆ, ತಂತ್ರಜ್ಞಾನ, ಯಂತ್ರೋಪಕರಣಗಳ ಬಳಕೆಗೆ ಕೃಷಿಕರು ಮುಂದಾಗಬೇಕು. ಆಗ ಉತ್ತಮ ಇಳವರಿ, ಆರ್ಥಿಕ ಅಭಿವೃದ್ಧಿ ಸಾಧ್ಯ' ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ರೈತರಿಗೆ ಸಲಹೆ ನೀಡಿದರು. ದಸರಾ ಪ್ರಯುಕ್ತ ಇಲ್ಲಿನ ಜೆ.ಕೆ.ಮೈದಾನದ ಸಭಾಂಗಣದಲ್ಲಿ ಭತ್ತ ಕುಟ್ಟುವ ಹಾಗೂ ತೆಂಗಿನ ಹೊಂಬಾಳೆ ಅರಳಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಕೃಷಿ ಕಾರ್ಮಿಕರ ಅಲಭ್ಯತೆ ಸಮಸ್ಯೆಗೂ ಇದರಿಂದ ಪರಿಹಾರ ದೊರೆಯಲಿದೆ. ರೈತರಿಗೆ ಅವಶ್ಯ ಸೌಲಭ್ಯ, ಮಾರ್ಗದರ್ಶನವನ್ನು ಸರ್ಕಾರದಿಂದ ಒದಗಿಸಲಾಗುತ್ತಿದೆ. ಕೃಷಿಗೆ ಸಂಬಂಧಿಸಿದ ತೋಟಗಾರಿಕೆ, ಮೀನುಗಾರಿಕೆ, ಹೈನುಗಾರಿಕೆ, ರೇಷ್ಮೆ ಕೃಷಿಯ ಮಾಹಿತಿಯನ್ನೂ ದಸರಾ ವಸ್ತು ಪ್ರದರ್ಶನದಲ್ಲಿ ತೋರಲಾಗಿದ್ದು ಬಳಸಿಕೊಳ್ಳಬೇಕು' ಎಂದು ಮನವಿ ಮಾಡಿದರು. ರೈತರಲ್ಲಿ ಕೆಲವರು ತಾವು ಸಂಗ್ರಹಿಸಿರುವ ಹಳೆ ತಳಿಯ ಬೀಜಗಳನ್ನೇ ಬೆಳೆ ಬೆಳೆಯಲು ಮುಂದಾಗುತ್ತಾರೆ. ಆದರೆ, ಸಂಗ್ರಹಿಸಲ್ಪಟ್ಟ ತಳಿಗಳಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆ ಇರುವುದರಿಂದ, ರೋಗ ನಿರೋಧಕ ಶಕ್ತಿ ಹೆಚ್ಚಿರುವ, ಆಧುನಿಕ ಪದ್ಧತಿಯಿಂದ ಸಂಸ್ಕರಿಸಲ್ಪಟ್ಟ ತಳಿಗಳ ಬೇಸಾಯ ಆರ್ಥಿಕವಾಗಿ ಸಹಕಾರಿ. ಕೃಷಿ ವಿಶ್ವವಿದ್ಯಾಲಯಗಳ ಸಹಕಾರ ಪಡೆಯಬಹುದು' ಎಂದು ಸಲಹೆ ನೀಡಿದರು.

# ಕಾಮಗಾರಿ ಕುಂಠಿತಕ್ಕೆ ಮಾಜಿ ಶಾಸಕ ಕಾರಣ ಸುಧಾಕರ್ ಆಕ್ರೋಶ

• ಉದಯವಾಹಿನಿ, ಚಿಂತಾಮಣಿ:

ವಿಧಾನಸಭಾ ಕ್ಷೇತ್ರವನ್ನು ಅಭಿವೃದ್ಧಿಯಲ್ಲಿ ಹತ್ತು ವರ್ಷ ಸರ್ವನಾಶ ಮಾಡಿದವರು ಮಾಜಿ ಶಾಸಕ ಎಂ.ಕೃಷ್ಣಾರೆಡ್ಡಿ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಹಾಗೂ ಉನ್ನತ ಶಿಕ್ಷಣ ಸಚಿವ ಎಂ.ಸಿ ಸುಧಾಕರ್ ಆರೋಪಿಸಿದರು. ತಾಲ್ಲೂಕಿನ ಮೈಲಾಂಡಹಳ್ಳಿ, ಚಿಕ್ಕಪುರ, ದೊಡ್ಡಗಂಜೂರು, ಜಿ.ಕೋಡಿಹಳ್ಳಿ ಗ್ರಾಮದಲ್ಲಿ ರಸ್ತೆ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ಹಾಗೂ ಪೂರ್ಣಗೊಂಡಿರುವ ಯೋಜನೆಗಳ ಉದ್ಘಾಟನೆ ನೆರವೇರಿಸಿ ಕುರುಬೂರಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೈಗಾರಿಕಾ ಅಭಿವೃದ್ಧಿ ಪ್ರದೇಶದ ಪರಿಹಾರದಲ್ಲಿ ಅಧಿಕಾರಿಗಳು ಸಚಿವರ ಹೆಸರಿನಲ್ಲಿ ಹಣ ವಸೂಲಿ ಮಾಡುತ್ತಿದ್ದಾರೆ. ಸಚಿವರು ಸ್ವಾರ್ಥವಿಲ್ಲದೆ ಏನೂ ಮಾಡುವುದಿಲ್ಲ ಎಂದು ಮಾಜಿ ಶಾಸಕ ಎಂ.ಕೃಷ್ಣಾರೆಡ್ಡಿ ನನ್ನ ಮೇಲೆ ಮಾಡಿರುವ ಆರೋಪ ಸಂಪೂರ್ಣ ಸುಳ್ಳು. ಡಿಬಿಟಿ ಮೂಲಕ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ಪಾವತಿ ಮಾಡಬೇಕು ಎಂದು ಕೈಗಾರಿಕೆ ಸಚಿವ ಎಂ.ಬಿ.ಪಾಟೀಲರಿಗೆ ಪತ್ರ ಬರೆದು ಮನವಿ ಮಾಡಿದ್ದೇನೆ ಎಂದರು. ಬಹಿರಂಗ ಸಭೆಯಲ್ಲಿ ನೇರವಾಗಿ ರೈತರಿಗೆ


ಉದಯವಾಹಿನಿ ಚಿತ್ರ

ಪರಿಹಾರದ ಚೆಕ್ ವಿತರಿಸಲಾಗಿದೆ. ಪ್ರತಿಯೊಂದು ಹಂತದಲ್ಲೂ ಅಧಿಕಾರಿಗಳಿಗೆ ಯಾರು ಒಂದು ರೂಪಾಯಿಯೂ ಸಹ ಲಂಚ ಕೊಡಬೇಡಿ ಎಂದು ರೈತರಿಗೆ ಕಟ್ಟುನಿಟ್ಟಾಗಿ ಹೇಳಿದ್ದೇನೆ' ಎಂದು ಹೇಳಿದರು. 10 ವರ್ಷ ಏನೂ ಮಾಡಲಾಗದ ಮಾಜಿ ಶಾಸಕರು ಕಳೆದ 2 ವರ್ಷಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಹಿಸಲಾರದೆ ವಿನಾಕಾರಣ ಆರೋಪ ಮಾಡುತ್ತಿದ್ದಾರೆ. ಮಸ್ತೇನಹಳ್ಳಿ ಕೈಗಾರಿಕಾ ಪ್ರಾಂಗಣದ ಪರಿಹಾರ ವಿತರಣೆಯಲ್ಲಿ ಏಜೆಂಟರನ್ನು ಸೃಷ್ಟಿ ಮಾಡಿದವರು ಎಂ.ಕೃಷ್ಣಾರೆಡ್ಡಿ. ಪರಿಹಾರವಾಗಿ ಒಂದು ಚೆಕ್‌ನ್ನು ಸಹ ಸಾರ್ವಜನಿಕವಾಗಿ ವಿತರಿಸಲಾಗಲಿಲ್ಲ. ಮಸ್ತೇನಹಳ್ಳಿ ಕೈಗಾರಿಕಾ ಪ್ರದೇಶಕ್ಕೆ 10 ವರ್ಷ ವಿದ್ಯುತ್ ಸಂಪರ್ಕ ಕೊಡಿಸಲಾಗಲಿಲ್ಲ. ಕೈಗಾರಿಕಾ ಪ್ರಾಂಗಣ ಕುಂಠಿತಗೊಳ್ಳಲು ಮಾಜಿ ಶಾಸಕರೇ ಕಾರಣ' ಎಂದು ಮಾಜಿ ಶಾಸಕರ ವಿರುದ್ಧ ವಾಗ್ದಾಳಿ ನಡೆಸಿದರು. ತಾಲ್ಲೂಕಿನ ಪ್ರತಿಯೊಂದು ರಸ್ತೆಯ ಮಾಹಿತಿ ನನ್ನ ತಲೆಯಲ್ಲಿದೆ. ಹಂತ ಹಂತವಾಗಿ ಉತ್ತಮ ಗುಣಮಟ್ಟದ ರಸ್ತೆಗಳನ್ನಾಗಿ ಅಭಿವೃದ್ಧಿ ಪಡಿಸಲಾಗುವುದು. ಕ್ಷೇತ್ರದಲ್ಲಿ ಎಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್, ಪ್ರಥಮ ದರ್ಜೆ ಕಾಲೇಜುಗಳ ಕಾಮಗಾರಿ ನಡೆಯುತ್ತಿದೆ. ಯಾರು ಬೇಕಾದರೂ ಕಾಮಗಾರಿ ಪರಿಶೀಲಿಸಬಹುದು. ಮಾಜಿ ಶಾಸಕರ 10 ವರ್ಷಗಳ ಅವಧಿಯಲ್ಲಿ ಒಂದಾದರೂ ಕಾಮಗಾರಿ ತೋರಿಸಲಿ ಎಂದು ಹರಿಹಾಯ್ದರು.

ಸಂಸದ ಡಾ.ಕೆ ಸುಧಾಕರ್ ಮೂರು ಬಾರಿ ಶಾಸಕರಾಗಿ, ಒಮ್ಮೆ ಆರೋಗ್ಯ ಸಚಿವರಾಗಿದ್ದರೂ ಜಿಲ್ಲಾ ಆಸ್ಪತ್ರೆಗೆ ಎಂ.ಆರ್.ಐ ತರಲು ಕೈಲಾಗಲಿಲ್ಲ. ಅವರ ಅವಧಿಯಲ್ಲಿ ಒಂದು ಎಕರೆ ಕೈಗಾರಿಕಾ ಪ್ರಾಂಗಣವಾಗಲಿಲ್ಲ. ಕೋವಿಡ್ ಕಾಲದಲ್ಲಿ ಕೋಟ್ಯಂತರ ರೂ ಲೂಟಿ ಮಾಡಿದ್ದನ್ನು ರಾಜ್ಯದ ಜನರು ಮರೆತಿಲ್ಲ. ಅವರ ಬೇಜವಾಬ್ದಾರಿ ಕಾರ್ಯವೈಖರಿಯಿಂದ ಚಾಮರಾಜನಗರದಲ್ಲಿ ಅಮಾಯಕರು ಪ್ರಾಣ ಕಳೆದುಕೊಂಡರು. ರಾಜ್ಯ ಸಚಿವ ಸಂಪುಟದಲ್ಲಿ ಅತ್ಯಂತ ಭ್ರಷ್ಟ ಸಚಿವ ಎಂದು ಪಟ್ಟ ಕಟ್ಟಿಸಿಕೊಂಡಿದ್ದವರು ನನ್ನ ಬಗ್ಗೆ ಮಾತನಾಡುವುದಕ್ಕೆ ನೈತಿಕತೆ ಇದೆಯೇ ಎಂದು ಪ್ರಶ್ನಿಸಿದರು.

# ಮಂಡ್ಯ ಜಿಲ್ಲೆಯಲ್ಲಿ ಅತಿಯಾದ ರಸಗೊಬ್ಬರ ಬಳಕೆ

• ಉದಯವಾಹಿನಿ, ಶ್ರೀರಂಗಪಟ್ಟಣ

ಜಿಲ್ಲೆಯ ರೈತರು ಅಗತ್ಯಕ್ಕಿಂತ ಹೆಚ್ಚು ರಸಗೊಬ್ಬರ ಬಳಸುತ್ತಿರುವುದರಿಂದ ಕೃಷಿ ಭೂಮಿ ಫಲವತ್ತತೆ ಕಳೆದುಕೊಂಡು ಕೃಷಿ ಉತ್ಪನ್ನಗಳ ಇಳುವರಿ ಕೂಡ ಕುಸಿಯುತ್ತಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ವಿ.ಎಸ್. ಅಶೋಕ್ ಹೇಳಿದರು.

ಪಟ್ಟಣದಲ್ಲಿ ನಡೆಯುತ್ತಿರುವ ದಸರಾ ಉತ್ಸವದ ಪ್ರಧಾನ ವೇದಿಕೆಯಲ್ಲಿ ನಡೆದ ರೈತ ದಸರಾದಲ್ಲಿ ಜಿಲ್ಲೆಯ ಪ್ರಗತಿ ಪರ ರೈತರನ್ನು ಅಭಿನಂದಿಸಿ ಅವರು ಮಾತನಾಡಿದರು.

ರೈತರು ಯೂರಿಯಾ ರಸಗೊಬ್ಬರವನ್ನು ಅತಿಯಾಗಿ ಬಳಸುತ್ತಿದ್ದಾರೆ. ಜಿಲ್ಲೆಯಲ್ಲಿ 5 ಲಕ್ಷ ಹೆಕ್ಟೇರ್‌ಗಿಂತ ಹೆಚ್ಚು ಪ್ರದೇಶದಲ್ಲಿ ಕೃಷಿ ಚಟುವಟಿಕೆ ನಡೆಯುತ್ತಿದ್ದು, 1.70 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ಬಳಕೆಯಾಗಿದೆ. ಇದರಿಂದ ಮಣ್ಣಿನ ಸತ್ವ ಹಾಳಾಗುತ್ತಿದೆ. ಕೃಷಿ ಉತ್ಪನ್ನಗಳ ಗುಣಮಟ್ಟವೂ ಕಡಿಮೆಯಾಗುತ್ತಿದೆ.

ಕಳೆದ 15 ವರ್ಷಗಳ ಈಚೆಗೆ ಶೇ. 10ರಷ್ಟು ಕೃಷಿ ಉತ್ಪನ್ನ ಕುಸಿದಿದೆ. ರೈತರು ಕೊಟ್ಟಿಗೆ ಗೊಬ್ಬರವನ್ನು ಹೆಚ್ಚು ಬಳಸಬೇಕು.


ಉದಯವಾಹಿನಿ ಚಿತ್ರ

ಪ್ರಸಕ್ತ ವರ್ಷದಿಂದ ರಾಷ್ಟ್ರೀಯ ನೈಸರ್ಗಿಕ ಕೃಷಿ ಯೋಜನೆ ಜಾರಿಯಾಗಿದ್ದು, ಮಣ್ಣಿನ ಫಲವತ್ತತೆ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ' ಎಂದು ತಿಳಿಸಿದರು.

ನೇಸರ ಅಗ್ನಿ ಸಂಸ್ಥೆ ಸಂಸ್ಥಾಪಕಿ ರೇಷ್ಮಾರಾಣಿ ಮಾತನಾಡಿ 'ರೈತರು ಗ್ಯಾಪ್ (ಗ್ಲೋಬಲ್ ಅಗ್ರಿಕಲ್ಚರಲ್ ಪ್ರಾಕ್ಟಿಸಸ್) ಸಂಸ್ಥೆಯಲ್ಲಿ ತಮ್ಮ ಕೃಷಿ ಉತ್ಪನ್ನಗಳನ್ನು ಪ್ರಾಮಾಣೀಕರಿಸಿದರೆ ಉತ್ತಮ ಬೆಲೆ ಸಿಗದಲಿದೆ ಎಂದರು.

ರೈತರು ಕೃಷಿಯ ಜತೆಗೆ ಪಶುಪಾಲನೆ ಕೈಗೊಳ್ಳುವುದರಿಂದ ನಿರಂತರ ಆದಾಯ ಪಡೆಯಬಹುದು ಎಂದು ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಎಚ್.ಎಸ್. ಮಧುಸೂದನ್ ಹೇಳಿದರು.

**ಸಾವಯವ ಕೃಷಿ ಪದ್ಧತಿ ಅನುಸರಿಸಿ**

**ಬೆಲ್ಲದ ನಾಡು ರೈತ ಉತ್ಪಾದಕ ಸಂಸ್ಥೆಯ ಅಧ್ಯಕ್ಷ ಕಾರಸವಾಡಿ ಮಹದೇವು ಮಾತನಾಡಿ 'ಬಸರಾಳು ರೈತ ಉತ್ಪಾದಕ ಕಂಪೆನಿ ರೂ.6 ಕೋಟಿಗೂ ಹೆಚ್ಚು ವಹಿವಾಟು ನಡೆಸುತ್ತಿದೆ. ಸಾವಯವ ಪದ್ಧತಿಯಲ್ಲಿ ಬೆಳೆದ ಆಹಾರ ಮತ್ತು ವಾಣಿಜ್ಯ ಕೃಷಿ ಉತ್ಪನ್ನಗಳಿಗೆ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆ ಮತ್ತು ಬೆಲೆ ಸಿಗುತ್ತಿದೆ. ಕೃಷಿ ಉತ್ಪನ್ನಗಳನ್ನು ಮೌಲ್ಯವರ್ಧನೆ ಮಾಡಿ ರೈತರೇ ಮಾರಾಟ ಮಾಡಿದರೆ ಪ್ರೋತ್ಸಾಹ ಧನ ಕೂಡ ಸಿಗಲಿದೆ. ಹಾಗಾಗಿ ರೈತರು ನೈಸರ್ಗಿಕ ಮತ್ತು ಸಾವಯವ ಕೃಷಿ ಪದ್ಧತಿ ಅನುಸರಿಸಬೇಕು' ಎಂದು ಸಲಹೆ ನೀಡಿದರು.**

# ಹುಲಿ ಸಂರಕ್ಷಿತ ಪ್ರದೇಶ ಮಾಡದಿರಿ: ಗ್ರಾಮಸ್ಥರ ಒತ್ತಾಯ

• ಉದಯವಹಿನಿ,ಹನೂರು

ತಾಲ್ಲೂಕಿನ ಮಲೆ ಮಹದೇಶ್ವರ ವನ್ಯಧಾಮವನ್ನು ಹುಲಿ ಸಂರಕ್ಷಿತ ಅರಣ್ಯ ಪ್ರದೇಶವೆಂದು ಘೋಷಣೆ ಮಾಡಬಾರದು ಎಂದು ಪೊನ್ನಾಚಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಪೊನ್ನಾಚಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಸ್ತೂರು, ಮರೂರು ಗ್ರಾಮಸ್ಥರೆಲ್ಲರೂ ಸೇರಿ ಪಂಚಾಯಿತಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಅರಣ್ಯಾ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಪೊನ್ನಾಚಿ ಗ್ರಾಮದ ಮುಖಂಡ ಶಿವಣ್ಣ ಮಾತನಾಡಿ, ಹುಲಿ ಸಂರಕ್ಷಿತ ಅರಣ್ಯ ಪ್ರದೇಶವೆಂದು ಘೋಷಣೆಯಾದರೆ ನಮ್ಮ ಜನರ ಜೀವನ ಅತ್ಯಂತ ದುಸ್ತರವಾಗಲಿದೆ. ನಮ್ಮ ಸಾಂಪ್ರದಾಯಿಕ ಆಚರಣೆ, ವಿಚಾರಗಳೆಲ್ಲವೂ ಮರೆಯಾಗಲಿವೆ. ಜೊತೆಗೆ ಸಮಯದ ಕಟ್ಟುಪಾಡಿನಿಂದ ಹೊರ ಬರಬೇಕಾಗುತ್ತದೆ' ಎಂದರು.

ಅರಣ್ಯದಂಚಿನ ಕುಗ್ರಾಮದಲ್ಲಿ ವಾಸ ಮಾಡುತ್ತಿರುವ ನಾವು ಜಾನುವಾರುಗಳನ್ನು ನಂಬಿ ಬದುಕುತ್ತಿದ್ದೇವೆ. ಘೋಷಣೆಯಾದಲ್ಲಿ ಅರಣ್ಯದೊಳಗೆ ಹಸುವಿನ ಹೆಜ್ಜೆ ಇಡಲು ಬಿಡುವುದಿಲ್ಲ, ನಮ್ಮ ಗ್ರಾಮಗಳಿಗೆ ಪ್ರಸ್ತುತ ಕೆಲಸದ ನಿಮಿತ್ತ ನಾವು ಹೋಗಬಹುದು, ಬರಬಹುದು. ಆದರೆ ಹುಲಿ ಸಂರಕ್ಷಿತ ಅರಣ್ಯ ಪ್ರದೇಶವಾದಲ್ಲಿ ನಮ್ಮ ಕೆಲಸ ಕಾರ್ಯಗಳಿಗೆ ಕೂಡ ಸಂಚಾರ ಮಾಡಲಾಗದ ಪರಿಸ್ಥಿತಿ ನಿರ್ಮಾಣವಾಗುತ್ತದೆ' ಎಂದು ಅಲವತ್ತುಕೊಂಡರು.


ಉದಯವಾಹಿನಿ ಚಿತ್ರ

ಮುಖ್ಯವಾಗಿ ಜನರ ಭಾವನೆಗಳಿಗೆ ಧಕ್ಕೆ ಉಂಟಾಗಲಿದೆ, ಕಾಡಂಚಿನ ಪ್ರದೇಶಗಳಲ್ಲಿ ಉಪ ದೇವಾಲಯಗಳು ಇದ್ದು ಅಲ್ಲಿಗೆ ನಿರ್ಬಂಧ ಹಾಕುತ್ತಾರೆ. ಆಗ ಏನೂ ಮಾಡಲಾಗದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಹಾಗಾಗಿ ಹುಲಿ ಸಂರಕ್ಷಿತ ಪ್ರದೇಶವೆಂದು ಘೋಷಣೆ ಮಾಡಬಾರದು ಎಂದು ಮನವಿ ಮಾಡಿದರು. ಸರ್ಕಾರದ ಮಟ್ಟಕ್ಕೆ ಅಧಿಕಾರಿಗಳು ಸ್ಥಳೀಯವಾಗಿ ವರದಿ ಪಡೆದು ಕುಗ್ರಾಮಗಳಲ್ಲಿ ಜನರ ಅಭಿಪ್ರಾಯ ಪಡೆದು ಅನಂತರ ಸರ್ಕಾರದ ಮಟ್ಟಕ್ಕೆ ವರದಿ ನೀಡಬೇಕು.

ಅದ್ಯಾವ ಕೆಲಸವೂ ಆಗದೆ ಅಧಿಕಾರಿಗಳು ನೇರವಾಗಿ ವರದಿ ನೀಡಿರುವುದು ಅತ್ಯಂತ ಖಂಡನೀಯ. ಸ್ಥಳೀಯ ಜನರ ಅಭಿಪ್ರಾಯ ಸಂಗ್ರಹಿಸಬೇಕು, ಈ ಹುಲಿ ಸಂರಕ್ಷಿತ ಅರಣ್ಯ ಪ್ರದೇಶ ಯೋಜನೆಗೆ ನಮ್ಮೆಲ್ಲರ ವಿರೋಧ ಇದೆ ಎಂದರು. ಪ್ರತಿಭಟನೆ ವೇಳೆ ಮಲೆ ಮಹದೇಶ್ವರ ಬೆಟ್ಟದ ಪೊಲೀಸ್ ಠಾಣೆಯಿಂದ ಭದ್ರತೆ ಒದಗಿಸಲಾಗಿತ್ತು.

# ಬಂಗ್ಲೆಗುಡ್ಡೆಯಲ್ಲಿ ಆದಿಶೇಷನ ಡ್ರೈವಿಂಗ್ ಲೈಸೆನ್ಸ್ ಪತ್ತೆ

## ಎಲ್ಲಿದ್ರು ಮನೆಗೆ ವಾಪಸ್ ಬಾ ಎಂದು ಅತ್ತ ಆದಿಶೇಷ ಅವರ ತಾಯಿ

• ಉದಯವಾಹಿನಿ, ತುಮಕೂರು

ಹಬ್ಬ ಇದೆ ಕಣೋ ಹೋಗ್ಬೇಡ ಇರು ಅಂದೆ. ಬರ್ತೀನಿರಮ್ಮ ಎಂದು ಹನ್ನೆರಡು ವರ್ಷದ ಹಿಂದೆ ಹೋದೋನು ಬರ್ಲೇ ಇಲ್ಲ. ಎಲ್ಲಿದನೋ ಹೇಗಿದಾನೋ ಇದು ಬಂಗ್ಲೆಗುಡ್ಡೆ ಕಾಡಿನಲ್ಲಿ ಸಿಕ್ಕ ಡ್ರೈವಿಂಗ್ ಲೈಸೆನ್ಸ್ ವಾರಸುದಾರ ಆದಿಶೇಷನ ನೆನೆದು ಹೆತ್ತ ತಾಯಿ ಬಿಕ್ಕಿ ಬಿಕ್ಕಿ ಅತ್ತಿದ್ದಾರೆ. ಧರ್ಮಸ್ಥಳ ಬಳಿಯ ಬಂಗ್ಲೆಗುಡ್ಡೆ ಕಾಡಿನಲ್ಲಿ ಸೆ.17 ಮತ್ತು 18ರಂದು ನಡೆಸಿದ ಶೋಧ ಕಾರ್ಯಾಚರಣೆ ನಡೆಸಲಾಗಿತ್ತು. ಆಸಂದರ್ಭದಲ್ಲಿ 7 ಅಸ್ಥಿಪಂಜರ ಪತ್ತೆಯಾಗಿತ್ತು. ಅವುಗಳ ಪೈಕಿ ಒಂದು ಅಸ್ಥಿಪಂಜರ ಯಾರೆಂದು ಪತ್ತೆಯಾಗಿದ್ದು, ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನ ದಾಸರಕಲ್ಲಹಳ್ಳಿಯವರು ಎನ್ನಲಾಗಿದೆ. ಆದಿಶೇಷ ನಾರಾಯಣ (27)ಭೋಜಪ್ಪ ಮತ್ತು ಚೆನ್ನಮ್ಮ ದಂಪತಿಯ ಮೂರನೇ ಪುತ್ರ. ಉತ್ಖನನದ ವೇಳೆ ಅಸ್ಥಿಪಂಜರ ಸಿಕ್ಕ ಜಾಗದಲ್ಲಿ ದೊರೆತ ಡ್ರೈವಿಂಗ್ ಲೈಸೆನ್ಸ್ ಸಿಕ್ಕಿತ್ತು. ಅದರಲ್ಲಿ ಅವರ ಮನೆಯವರ ವಿಳಾಸವೂ ಇತ್ತು. ಅದರ ಆಧಾರದ ಮೇಲೆ ಮನೆಯವರನ್ನು ಹುಡುಕಿ, ಆದಿಶೇಷನ


ಉದಯವಾಹಿನಿ ಚಿತ್ರ

ಸಹೋದರಿ ಪದ್ಮಾ ಅವರಿಗೆ ಮಾಹಿತಿ ನೀಡಲಾಗಿತ್ತು. ಅವರು, ಎಸ್‌ಐಟಿ ಅಧಿಕಾರಿಗಳನ್ನು ಭೇಟಿ ಮಾಡಿದರು. ಆ ಬೆನ್ನಲ್ಲೇ ಆದಿಶೇಷ ಅವರ ತಾಯಿ ಮಾತನಾಡಿದ್ದು, 12 ವರ್ಷಗಳಿಂದ ಮಗ ನಾಪತ್ತೆಯಾಗಿದ್ದಾನೆ.

**ಹಬ್ಬ ಇದೆ ಹೋಗ್ಬೇಡ ಅಂದ್ರು, ಹೋದೋನು ಬರ್ಲೆ ಇಲ್ಲ:**

**ಆದಿಶೇಷ ಅಕ್ಕ ಹೇಳಿದ್ದೇನು?**

**2013ರಲ್ಲಿ ನನ್ನ ತಮ್ಮ ಕಾಣೆಯಾಗಿದ್ದು ಸಿಗಲೇ ಇಲ್ಲ. ಎಸ್‌ಐಟಿ ಅವರು ಬಟ್ಟೆ ಮೂಳೆ, ತೋರಿಸಿದ್ರು, ಅದೆಲ್ಲ ಗೊತ್ತಾಗಿಲ್ಲ ಯಾರದ್ದು ಅಂತ. ಆದ್ರೆ ಡಿಎಲ್ ಮಾತ್ರ ನನ್ನ ತಮ್ಮನದು. ಈ ಬಗ್ಗೆ ದೂರು ಕೊಡಿ ಎಂದರು. ನಿಮ್ಮ ತಮ್ಮನ ಹುಡುಕಾಟಕ್ಕೆ ಪ್ರಯತ್ನ ಮಾಡ್ತೀವಿ. ಸಿಗಲಿಲ್ಲ ಅಂದ್ರೆ ಮೂಳೆ ಬಟ್ಟೆಯ ಡಿಎನ್‌ಎ ಟೆಸ್ಟ್ ಮಾಡಿ ಅದನ್ನ ನಿಮಗೆ ಕೊಡುತ್ತೇವೆ ಎಂದು ಹೇಳಿದರು. ಗುಬ್ಬಿ ಪೊಲೀಸ್ ಠಾಣೆಗೆ ದೂರು ಕೊಟ್ಟಿದ್ದೆವು. ಮುಂಚೆನೆ ದೂರು ಕೊಟ್ಟದ್ವಿ. ಆದ್ರೆ ಪೊಲೀಸರು ದೂರು ತಗೊಂಡಿರಲಿಲ್ಲ. ಈಗ ಎಸ್‌ಐಟಿ ಹೇಳ್ತಿದೆ ಅಂತ ದೂರು ಕೊಡೋಕೆ ಹೇಳಿದ್ರು ಎಂದು ಆದಿಶೇಷ ನಾರಾಯಣ ಅವರ ಸಹೋದರಿ ಪದ್ಮ ಭಾವುಕರಾದ್ರು.**

ಹಬ್ಬಕ್ಕೆ ಒಂದುವಾರ ಇದ್ದಂಗೆ ಹೋದ. ಹೋಗಬೇಡ ಎಂದ್ರು ಹೋದ. ಬಂದ್ಮೇಲೆ ಜೋರಾಗಿ ಹಬ್ಬ ಮಾಡೋಣ ಅಂದ ಆದ್ರೆ ಬರ್ಲೇ ಇಲ್ಲ. ಎಲ್ಲಾದ್ರು ಇರಲಿ ಅವನು ಬಂದ್ರೆ ಸಾಕು. ಅವರ ತಂದೆ ಸಹ ಇಲ್ಲ. ಮಗ ಬಂದಿದ್ದ ಅಂತ ಊರಿನವರು ಹೇಳ್ತಾರೆ ಆದ್ರೆ ನಂಗೆ ಮಾತ್ರ ಒಮ್ಮೆಯೂ ಕಾಣಸಲಿಲ್ಲ. ನಮ್ಮ ಸಂಬಂಧಿಕರಲ್ಲಿನ ಒಂದು ಹುಡುಗ ಹೇಳಿದ್ದ ಸಿಕ್ಕಿದ್ದ ಅಂತ. ಇನ್ನೊಮ್ಮೆ ಸಿಕ್ದಾಗ ಹೇಳ್ತಿನಿ ಅಂದಿದ್ದ. ಆದ್ರೆ ಅವನಿಗೂ ಕಾಯಿಲೆ ಬಂದು ಸತ್ತೋದ. ಎಲ್ಲಾ ಕಡೆ ನಾವು ಹುಡುಕ್ತಾನೆ ಇದ್ದೀವಿ ಸಿಗ್ತಾನೆ ಇಲ್ಲ. ದೇವರತ್ರ ಕೇಳಿದ್ರು ಸಿಕ್ಕಿಲ್ಲ. ಒಂದು ಎರಡು ಲಕ್ಷ ದೇವರಿಗೆ ಖರ್ಚು ಮಾಡಿದ್ವಿ. ಮಗ ಸಿಕ್ತಾನೆ ಅನ್ನೋ ನಂಬಿಕೆ ಇದೆ ಎಂದು ಕಣ್ಣೀರು ಹಾಕಿದರು.

## ಮಿನಿ ನ್ಯೂಸ್

### ಸಮೀಕ್ಷೆ ಮಾಡದವರಿಗೆ ನೋಟಿಸ್ ನೀಡಿ: ಡಿಸಿ ಪಿ.ಎನ್. ರವೀಂದ್ರ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯವು ನಿರೀಕ್ಷಿತ ಪ್ರಗತಿ ಸಾಧಿಸಿಲ್ಲ. ಸಮೀಕ್ಷಾ ಕಾರ್ಯ ಚುರುಕುಗೊಳಿಸಬೇಕು. ನಿತ್ಯದ ಗುರಿ ಸಾಧಿಸಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಸೂಚಿಸಿದರು. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ಪ್ರಗತಿ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ಜೊತೆ ವಿಡಿಯೊ ಸಂವಾದ ನಡೆಸಿದರು. ಸಮೀಕ್ಷಾ ಕಾರ್ಯಕ್ಕೆ ನಿಯೋಜನೆ ಆಗಿರುವ ಗಣತಿದಾರರು ಇಲ್ಲಿಯವರೆಗೆ ಸಮೀಕ್ಷಾ ಕಾರ್ಯವನ್ನು ಮಾಡದೆ ಇದ್ದರೆ ಅಂತಹವರ ಮಾಹಿತಿಯನ್ನು ಆನ್‌ಲೈನ್ ಮೂಲಕವೇ ಪಡೆದು ನೋಟಿಸ್ ಜಾರಿಮಾಡಬೇಕು. ಶಿಸ್ತುಕ್ರಮಕ್ಕೆ ಒಳಪಡಿಸಬೇಕು ಎಂದು ಸೂಚಿಸಿದರು. ಸಮೀಕ್ಷಾ ಕಾರ್ಯಕ್ಕೆ ನಿಯೋಜನೆ ಆಗಿರುವ ಯಾವುದೇ ಅಧಿಕಾರಿಗಳು, ಸಮೀಕ್ಷಕರು ಅಥವಾ ಸಿಬ್ಬಂದಿ ಅಸಹಕಾರ ತೋರಿದರೆ ಅಂತಹವರ ಮೇಲೆ ನಿರ್ದಾಕ್ಷಿಣ್ಯವಾಗಿ ಶಿಸ್ತುಕ್ರಮಕ್ಕೆ ಒಳಪಡಿಸಬೇಕು. ಸಮೀಕ್ಷಾ ಕಾರ್ಯಕ್ಕೆ ಈವರೆಗೆ ಇದ್ದ ಎಲ್ಲಾ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲಾಗಿದೆ. ಮುಂದೆ ಎದುರಾಗುವ ತಾಂತ್ರಿಕ ಅಡಚಣೆಗಳನ್ನು ಕಾಲೋಚಿತವಾಗಿ ಬಗೆಹರಿಸಲು ತಾಂತ್ರಿಕ ತಂಡಕ್ಕೆ ಸೂಚಿಸಲಾಗಿದೆ ಎಂದರು.

ಕ್ಷೇತ್ರ ಮಟ್ಟದಲ್ಲಿ ಯಾವುದೇ ರೀತಿಯ ತಾಂತ್ರಿಕ ಅಡಚಣೆಗಳು ಉಂಟಾದರೆ ತುರ್ತಾಗಿ ಮೇಲ್ವಿಚಾರಕರಿಗೆ ಸಮೀಕ್ಷಕರು ತಿಳಿಸಿದರೆ ತಾಂತ್ರಿಕ ಸಿಬ್ಬಂದಿ ಕೂಡಲೆ ಬಗೆಹರಿಸುವ ವ್ಯವಸ್ಥೆ ಮಾಡುವರು. ಯಾವುದೇ ನೆಪ ಹೇಳದೆ ತಮಗೆ ನಿಯೋಜಿತವಾಗಿರುವ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿ ನಿತ್ಯದ ಗುರಿ ಸಾಧಿಸಬೇಕು ಎಂದರು. ಸಮೀಕ್ಷಾ ಕಾರ್ಯವನ್ನು ಅ. ರೊಳಗಾಗಿ ಪೂರ್ಣಗೊಳಿಸುವಂತೆ ಮುಖ್ಯಮಂತ್ರಿ ಅವರು ವಿಡಿಯೊ ಸಂವಾದ ಸಭೆಯಲ್ಲಿ ಕಟ್ಟುನಿಟ್ಟಾಗಿ ಸೂಚಿಸಿದ್ದಾರೆ. ಜಿಲ್ಲೆಯಲ್ಲಿ ಸಮೀಕ್ಷಾ ಕಾರ್ಯದ ಪ್ರಗತಿ ಈ ವರೆಗೆ ಆಶಾದಾಯಕವಾಗಿಲ್ಲ. ನಗರ ಪ್ರದೇಶ ವ್ಯಾಪ್ತಿಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ಗ್ರಾಮಾಂತರ ಪ್ರದೇಶದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ದಿನನಿತ್ಯ ಸಮೀಕ್ಷಾ ಕಾರ್ಯದ ಮೇಲೆ ನಿಗಾ ಇಡಬೇಕು ಎಂದು ಹೇಳಿದರು.

### ಬೆಂಗಳೂರಿಗೆ ಇಬ್ಬರು ಪೊಲೀಸ್ ಕಮಿಷನರ್ ನೇಮಕಕ್ಕೆ ಚಿಂತನೆ: ಸಚಿವ

• ಉದಯವಾಹಿನಿ, ತುಮಕೂರು

ಬೆಂಗಳೂರು ನಗರಕ್ಕೆ ಇಬ್ಬರು ಪೊಲೀಸ್ ಕಮಿಷನರ್ ನೇಮಕ ಮಾಡುವ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ತಿಳಿಸಿದರು. ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿ, ಬಿಬಿಎಂಪಿಯನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮಾಡಲಾಗಿದೆ. ಪ್ರಾಧಿಕಾರದ ವ್ಯಾಪ್ತಿಯಲ್ಲಿ ಐದು ಮಹಾನಗರ ಪಾಲಿಕೆಗಳನ್ನು ರಚಿಸಲಾಗಿದೆ. ಅದರ ಭಾಗವಾಗಿ ಇಬ್ಬರು ಪೊಲೀಸ್ ಕಮಿಷನರ್ ನೇಮಕ ಮಾಡಬೇಕು ಎಂಬ ಬೇಡಿಕೆ ಇದೆ ಎಂದರು.

ಹೊಸದಾಗಿ ಕಮಿಷನರ್ ಹುದ್ದೆ ಸೃಷ್ಟಿ, ಅದರ ಸಾಧಕ, ಬಾಧಕ, ಬೇಕಾಗುವ ಸಿಬ್ಬಂದಿ, ಖರ್ಚು ವೆಚ್ಚಗಳ ಬಗ್ಗೆ ಅಧ್ಯಯನ ಮಾಡಲಾಗುತ್ತಿದೆ. ಶೀಘ್ರವೇ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು. ಪೊಲೀಸ್ ಅಧಿಕಾರಿ ಹಾಗೂ ಕಾನ್‌ಸ್ಟೇಬಲ್‌ಗಳ ನೇಮಕಾತಿ ಸಮಯದಲ್ಲಿ ಗರಿಷ್ಠ ವಯೋಮಿತಿ ಹೆಚ್ಚಳ ಮಾಡುವ ಬಗ್ಗೆ ಚರ್ಚೆ ನಡೆದಿದೆ. ಸಬ್‌ಇನ್‌ಸ್ಪೆಕ್ಟರ್, ಕಾನ್‌ಸ್ಟೇಬಲ್‌ಗಳಿಗೆ ಗರಿಷ್ಠ ವಯೋಮಿತಿ ನಿಗದಿಪಡಿಸುವ ಕುರಿತು ಸದ್ಯದಲ್ಲೇ ನಿರ್ಧಾರ ತೆಗೆದುಕೊಳ್ಳಲಾಗುವುದು. ಇದಕ್ಕೆ ಸಂಬಂಧಿಸಿದ ಪ್ರಸ್ತಾವಕ್ಕೆ ಅನುಮತಿ ನೀಡಿದ್ದು, ಸಚಿವ ಸಂಪುಟದಲ್ಲಿ ಚರ್ಚಿಸಿ ಅಂತಿಮ ನಿರ್ಧಾರ ಮಾಡಲಾಗುವುದು ಎಂದು ತಿಳಿಸಿದರು.

### ಸಮೀಕ್ಷೆ ಕಾರ್ಯ ಚುರುಕಿಗೆ ಸೂಚನೆ

• ಉದಯವಾಹಿನಿ, ಬಂಗಾರಪೇಟೆ

ಜಿಲ್ಲೆಯಾದ್ಯಂತ ಸಮೀಕ್ಷೆ ಆರಂಭವಾಗಿದ್ದು, ಆರಂಭದಲ್ಲಿ ಕೆಲವು ತಾಂತ್ರಿಕ ಸಮಸ್ಯೆಗಳಿಂದ ಸಮೀಕ್ಷೆ ನಿಧಾನವಾಗಿತ್ತು. ಈಗ ಎಲ್ಲಾ ತಾಂತ್ರಿಕ ಸಮಸ್ಯೆಗಳು ಬಗೆಹರಿದಿದ್ದು, ಇಂದಿನಿಂದ ಸಮೀಕ್ಷೆ ಕಾರ್ಯ ಚುರುಕುಗೊಳಿಸಲು ನೋಡಲ್ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದರು.

ತಾಲ್ಲೂಕಿನ ನೇರಳೆಕೆರೆ ಗ್ರಾಮದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪರಿಶೀಲಿಸಿ ಮಾತನಾಡಿದ ಅವರು, ಸಮೀಕ್ಷೆ ಸಮಾಜದ ಅಭಿವೃದ್ಧಿ, ಪ್ರಗತಿಯನ್ನು ಅಳೆಯಲು ಮಾನದಂಡ. ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆಯಿಂದ ಬೇರೆ ಇಲಾಖೆಯ ಅಧಿಕಾರಿಗಳನ್ನು ಸಮೀಕ್ಷೆಗೆ ನೇಮಿಸಲಾಗಿದೆ. ಜಿಲ್ಲೆಯಲ್ಲಿ ಶನಿವಾರದಿಂದ ಶೇ 100ರಷ್ಟು ಸಮೀಕ್ಷೆ ನಡೆಯಲಿದೆ ಎಂದರು. ಜಿಲ್ಲೆಯಲ್ಲಿ 3,471 ಬ್ಲಾಕ್‌ಗಳಿದ್ದು, ನಿತ್ಯ 34 ಸಾವಿರ ಮನೆಗಳ ಸಮೀಕ್ಷೆ ಮಾಡುವ ಗುರಿಯನ್ನು ಹೊಂದಿದ್ದೇವೆ. ಕಳೆದ ನಾಲ್ಕು ದಿನದಿಂದ ಸಮೀಕ್ಷೆ ಕುಂಠಿತಗೊಂಡಿದ್ದು, ಅದನ್ನು ಸರಿದೂಗಿಸಲು ಪ್ರತಿಯೊಬ್ಬ ಗಣತಿದಾರರು ಕನಿಷ್ಠ 10 ಮನೆಗಳನ್ನು ಸಮೀಕ್ಷೆ ಮಾಡಬೇಕು ಎಂದು ಸೂಚಿಸಿದರು. ಅ.7ಕ್ಕೆ ಸಮೀಕ್ಷೆ ಪೂರ್ಣಗೊಳ್ಳಬೇಕಿದೆ. ಹಾಗಾಗಿ ಸಮೀಕ್ಷೆದಾರರು ಶೀಘ್ರ ಸಮೀಕ್ಷೆ ಮುಗಿಸಬೇಕು. ತಹಶೀಲ್ದಾರ್, ಬಿಇಒ ಹಾಗೂ ಇತರೆ ಅಧಿಕಾರಿಗಳು ಸಮೀಕ್ಷೆ ಕಾರ್ಯವನ್ನು ಪರಿಶೀಲನೆ ನಡೆಸಬೇಕು. 11,230 ಮನೆಗಳ ಸಮೀಕ್ಷೆಯಾಗಿದೆ ಎಂದರು.

### ಜನತೆ ಸಿಡಿದೇಳುವ ಸಮಯ ಹತ್ತಿರದಲ್ಲಿದೆ ಕೆ.ಎಸ್.ಮಂಜುನಾಥ್ ಗೌಡ

• ಉದಯವಾಹಿನಿ, ಮಾಲೂರು

ನೀನು ಮಾಡುತ್ತಿರುವ ಭ್ರಷ್ಟಾಚಾರಕ್ಕೆ ಬೇಸತ್ತು ನಿನ್ನ ಜೊತೆಯಲ್ಲಿರುವವರು ದೂರ ಸರಿಯುತ್ತಿದ್ದಾರೆ. ಇನ್ನೂ ತಾಲ್ಲೂಕಿನ ಜನ ನಿನ್ನ ವಿರುದ್ಧ ಸಿಡಿದೇಳುವ ಸಮಯ ಹತ್ತಿರದಲ್ಲಿದೆ ಎಂದು ಶಾಸಕ ಕೆ.ವೈ.ನಂಜೇಗೌಡ ವಿರುದ್ಧ ಮಾಜಿ ಶಾಸಕ ಕೆ.ಎಸ್.ಮಂಜುನಾಥ್ ಗೌಡ ಗುಡುಗಿದರು. ನಗರದಲ್ಲಿ ಬಿಜೆಪಿ ತಾಲ್ಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಪತ್ರಿಕಾಗೋಷ್ಠಿ ಹಾಗೂ ಮುಖಂಡರ ಸಭೆಯಲ್ಲಿ ಮಾತನಾಡಿದರು.

2001ರಲ್ಲಿ ಹೊಸಕೋಟೆಯಲ್ಲಿ ರೈಸ್ ಪುಲ್ಲಿಂಗ್ ದಂಧೆಯಲ್ಲಿ ಭಾಗಿಯಾಗಿದ್ದ ಐವರು ನಾವು ಆಟವಾಡುವ ಸ್ಥಳದಲ್ಲಿ ಇದ್ದ ಕಾರಣ ಅಲ್ಲಿರುವವರ ಮೇಲೆ ದೂರು ದಾಖಲಿಸಿದರು. ಅದರಲ್ಲಿ ನನ್ನ ಮೇಲೂ ಕೇಸ್ ದಾಖಲಾಗಿತ್ತು. ಅದು ಕುಲಾಸೆಯಾಗಿ ನಿರ್ದೋಶಿಯಾಗಿ ಹೊರ ಬಂದೆ. ಇನ್ನೂ ನಮ್ಮ ಗ್ರಾಮದಲ್ಲಿ ಗೋಮಾಳ ಅಕ್ರಮಿಸಿದ್ದೀರಿ ಎಂದಿದ್ದೀರಾ. ಅದು ಗೋಮಾಳ ಅಲ್ಲ ಗ್ರಾಮಠಾಣೆ. ಅಲ್ಲಿ ನಮ್ಮದೂ ಐದು ಗುಂಟೆ ಜಾಗವಿದೆ ಎಂದು ಸ್ಪಷ್ಟನೆ ನೀಡಿದರು.

ಶಾಸಕ ನಂಜೇಗೌಡ ಅವರೇ ಸುಖಾ ಸುಮ್ಮನೆ ನನ್ನ ಮೇಲೆ ಆರೋಪ ಮಾಡಬೇಡಿ. ಮಾಲೂರು ತಾಲ್ಲೂಕಿನಲ್ಲಿ ನನ್ನ ಅವಧಿಯಲ್ಲಿ ಏನಾದರೂ ಭ್ರಷ್ಟಾಚಾರ ನಡೆದಿದೆಯಾ? ತೋರಿಸಿ ಎಂದು ಸವಾಲು ಹಾಕಿದರು. ಇನ್ನೂ ತಾಲ್ಲೂಕಿನಲ್ಲಿ ಏಳು ವರ್ಷದಿಂದ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಗ್ರಾಮ ಪಂಚಾಯಿತಿಯಿಂದ ತಾಲ್ಲೂಕು ಕಚೇರಿವರೆಗೆ ಜನಸಾಮಾನ್ಯರ ಕೆಲಸ ಆಗುತ್ತಿಲ್ಲ. ಎಲ್ಲಕ್ಕೂ ಲಂಚ ನೀಡಬೇಕು. ನಿಮಗೆ ಧೈರ್ಯವಿದ್ದರೆ ಈ ಬಗ್ಗೆ ವಿವರಣೆ ನೀಡಿ' ಎಂದು ಸವಾಲು ಹಾಕಿದರು.

ಅಂತರಾಳದಿಂದ..
EDITORIAL

# ಅತಂತ್ರ ಸ್ಥಿತಿಯಲ್ಲಿ ಅತಿಥಿಗಳು ಹಿತರಕ್ಷಣೆ ಸರ್ಕಾರದ ಕರ್ತವ್ಯ



ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಬೋಧನೆ ಮಾಡುವವರಿಗೆ 'ವಿಶ್ವವಿದ್ಯಾಲಯ ಅನುದಾನ ಆಯೋಗ' (ಯುಜಿಸಿ) ರೂಪಿಸಿರುವ ನಿಯಮ, ರಾಜ್ಯದ ಸುಮಾರು 5,000 ಅತಿಥಿ ಉಪನ್ಯಾಸಕರ ಭವಿಷ್ಯವನ್ನು ಅತಂತ್ರಸ್ಥಿತಿಗೆ ಸಿಲುಕಿಸಿದೆ. ಸಹಾಯಕ ಪ್ರಾಧ್ಯಾಪಕರಾಗಿ ನೇಮಕ ಹೊಂದುವವರು ಸ್ನಾತಕೋತ್ತರ ಪದವಿಯೊಂದಿಗೆ, ರಾಷ್ಟ್ರೀಯ ಅರ್ಹತಾ ಪರೀಕ್ಷೆ (ಎನ್‌ಇಟಿ) ಇಲ್ಲವೇ ಕರ್ನಾಟಕ ರಾಜ್ಯ ಅರ್ಹತಾ ಪರೀಕ್ಷೆ (ಕೆ-ಸೆಟ್) ತೇರ್ಗಡೆಯಾಗಿರಬೇಕು, ಪಿಎಚ್.ಡಿ ಪಡೆದಿರಬೇಕು ಎನ್ನುವುದು ಯುಜಿಸಿ ಗೊತ್ತುಪಡಿಸಿರುವ ಮಾನದಂಡ. ಆದರೆ, ಹಲವು ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಿರುವವರಲ್ಲಿ ಬಹುತೇಕರು ಸ್ನಾತಕೋತ್ತರ ಪದವಿಯನ್ನಷ್ಟೇ ಹೊಂದಿದ್ದು, ಅವರೀಗ ಕೆಲಸ ಕಳೆದುಕೊಳ್ಳುವ ಆತಂಕದಲ್ಲಿದ್ದಾರೆ. ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಯುಜಿಸಿ ಸೂಚಿಸಿರುವ ಮಾನದಂಡಗಳನ್ನೇ ಅತಿಥಿ ಉಪನ್ಯಾಸಕರ ಆಯ್ಕೆಗೂ ಅನ್ವಯಿಸಬೇಕು ಎಂದು ಹೈಕೋರ್ಟ್ ನೀಡಿರುವ ಮಧ್ಯಂತರ ತೀರ್ಪು ಸಮಸ್ಯೆ ಕಗ್ಗಂಟಾಗಲು ಕಾರಣವಾಗಿದೆ. ಲಭ್ಯವಿರುವ ಅತಿಥಿ ಉಪನ್ಯಾಸಕ ಸ್ಥಾನಗಳ ಸಂಖ್ಯೆಗಿಂತಲೂ ಯುಜಿಸಿ ಅರ್ಹತೆ ಪಡೆದ ಅಭ್ಯರ್ಥಿಗಳ ಸಂಖ್ಯೆ ಹೆಚ್ಚಾಗಿದೆ. ಹಾಗಾಗಿ, ಅತಿಥಿ ಉಪನ್ಯಾಸಕರ ಹುದ್ದೆ ಪಡೆದುಕೊಳ್ಳಲು ತೀವ್ರ ಪೈಪೋಟಿಯೂ ಇದೆ. ಅನುಭವ ಮತ್ತು ಅರ್ಹತೆಯ ನಡುವಿನ ಕಾನೂನು ಹೋರಾಟದಲ್ಲಿ ವಿದ್ಯಾರ್ಥಿಗಳ ಹಿತಾಸಕ್ತಿಯನ್ನೂ ಗಮನಿಸಬೇಕಾಗಿದೆ.

> **ಗೌರವ ಸಂಭಾವನೆ ಪಡೆದು ಹಲವು ವರ್ಷಗಳಿಂದ ದುಡಿದಿರುವ ಅತಿಥಿ ಉಪನ್ಯಾಸಕರು ಬೀದಿಗೆ ಬೀಳದಂತೆ ನೋಡಿ ಕೊಳ್ಳಬೇಕಾದುದು ಸರ್ಕಾರದ ನೈತಿಕ ಹೊಣೆಗಾರಿಕೆ.**

ಹೈಕೋರ್ಟ್ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸುವ ಮೂಲಕ, ದೀರ್ಘ ಕಾಲದಿಂದ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವವರ ಹಿತಾಸಕ್ತಿ ರಕ್ಷಣೆಗೆ ಸರ್ಕಾರ ಮುಂದಾಗಿದೆ. 2024-25ನೇ ಸಾಲಿನಲ್ಲಿ ಯುಜಿಸಿ ನಿಗದಿ ಮಾಡಿರುವ ಅರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ಸೇವೆಯನ್ನು ಸರ್ಕಾರ ಮುಂದುವರಿಸಿತ್ತು. ಆದರೆ, ಈ ನಿರ್ಧಾರವನ್ನು ಪ್ರಶ್ನಿಸಿ ಹೊಸದಾಗಿ ಯುಜಿಸಿ ಅರ್ಹತೆ ಪಡೆದಿರುವ ಉದ್ಯೋಗಾಕಾಂಕ್ಷಿಗಳು ನ್ಯಾಯಾಲಯದ ಮೊರೆ ಹೋಗಿದ್ದಾರೆ. ಎರಡು ದಶಕಗಳಿಗೂ ಹೆಚ್ಚು ಅವಧಿಯಿಂದ ಕೆಲಸ ಮಾಡುತ್ತಿರುವ ಅತಿಥಿ ಉಪನ್ಯಾಸಕರನ್ನು ಮಾನವೀಯ ದೃಷ್ಟಿಯಿಂದ ಮುಂದುವರಿಸಲು ಅವಕಾಶ ನೀಡುವಂತೆ ಮನವಿ ಮಾಡಿಕೊಂಡಿರುವ ಸರ್ಕಾರ, 2025-26ನೇ ಸಾಲಿನ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಮುಂದೂಡಿದೆ. ಆದರೆ, ಕಾನೂನು ಹೋರಾಟದಿಂದ ನೇಮಕಾತಿ ಪ್ರಕ್ರಿಯೆ ನನೆಗುದಿಗೆ ಬಿದ್ದಿರುವುದು ಶೈಕ್ಷಣಿಕ ಚಟುವಟಿಕೆಗಳ ಮೇಲೆ ಪರಿಣಾಮ ಬೀರಿದೆ; ವಿದ್ಯಾರ್ಥಿಗಳ ಕಲಿಕೆಗೆ ಅಡಚಣೆ ಎದುರಾಗಿದೆ. ಅತಿಥಿ ಉಪನ್ಯಾಸಕರ ಹಿತಾಸಕ್ತಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಪರಿಹಾರ ಸೂತ್ರವೊಂದನ್ನು ಸರ್ಕಾರ ಆದಷ್ಟು ಬೇಗ ಕಂಡುಕೊಳ್ಳಬೇಕಾಗಿದೆ. ರಾಜ್ಯದ ಶೇ 50ಕ್ಕೂ ಹೆಚ್ಚು ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳು ಅತಿಥಿ ಉಪನ್ಯಾಸಕರಿಂದಲೇ ಕಾರ್ಯ ನಿರ್ವಹಿಸುತ್ತಿವೆ. ಗೌರವ ಸಂಭಾವನೆಯನ್ನಷ್ಟೇ ನೀಡಿ ಹತ್ತಾರು ವರ್ಷಗಳಿಂದ ದುಡಿಸಿಕೊಂಡಿರುವ ಈ ಉಪನ್ಯಾಸಕರು ಬೀದಿಪಾಲಾಗದಂತೆ ನೋಡಿಕೊಳ್ಳುವುದು ಸರ್ಕಾರದ ನೈತಿಕ ಹೊಣೆಗಾರಿಕೆಯೂ ಆಗಿದೆ. ಕರ್ನಾಟಕ ಮಾತ್ರವಲ್ಲದೆ, ಬಹುತೇಕ ರಾಜ್ಯಗಳಲ್ಲಿನ ಉನ್ನತ ಶಿಕ್ಷಣ ಕ್ಷೇತ್ರ ಅತಿಥಿ ಉಪನ್ಯಾಸಕರನ್ನೇ ನೆಚ್ಚಿಕೊಂಡಿದೆ. ಹತ್ತಾರು ವರ್ಷಗಳಿಂದ ಅತಿಥಿಗಳಾಗಿಯೇ ದುಡಿಯುತ್ತಿರುವ ಈ ಅನುಭವಿಗಳನ್ನು ಹೊಸ ನಿಯಮಗಳ ಚೌಕಟ್ಟಿಗೆ ಒಳಪಡಿಸುವುದರಿಂದ ಎದುರಾಗುವ ಸಮಸ್ಯೆಗಳ ಅರಿವು 'ಯುಜಿಸಿ'ಗೆ ಇದ್ದಂತಿಲ್ಲ. ವಸ್ತುಸ್ಥಿತಿಯ ಅರಿವಿಲ್ಲದೆ ರೂಪುಗೊಳ್ಳುವ ನಿಯಮಗಳಿಂದ ಎದುರಾಗಬಹುದಾದ ಸಮಸ್ಯೆಗಳಿಗೆ, ಅತಿಥಿ ಉಪನ್ಯಾಸಕರ ಇಂದಿನ ಅತಂತ್ರ ಸ್ಥಿತಿ ಉದಾಹರಣೆಯಂತಿದೆ. ಯುಜಿಸಿ ನಿಯಮಗಳು ಹಾಗೂ ಕೋರ್ಟ್‌ನ ನಿರ್ದೇಶನವನ್ನು ಮೀರಲಾಗದ ಹಾಗೂ ಅತಿಥಿ ಉಪನ್ಯಾಸಕರ ಹಿತಾಸಕ್ತಿಯನ್ನೂ ಕೈಬಿಡಲಾಗದ ಧರ್ಮಸಂಕಟ ಸರ್ಕಾರದ್ದಾಗಿದೆ. ಯುಜಿಸಿ ನಿಯಮ ಪೂರ್ವಾನ್ವಯ ಮಾಡದೆ, ಅನುಭವದ ಆಧಾರದ ಮೇಲೆ ನಮ್ಮನ್ನು ಮುಂದುವರಿಸಬೇಕು ಎನ್ನುವ ಅತಿಥಿ ಉಪನ್ಯಾಸಕರ ಕೋರಿಕೆಯನ್ನು ಮಾನವೀಯತೆಯ ದೃಷ್ಟಿಯಿಂದ ಪರಿಗಣಿಸಬೇಕಾದ ಅನಿವಾರ್ಯತೆಯನ್ನು ಸರ್ಕಾರ ಕೋರ್ಟ್‌ಗೆ ಮನವರಿಕೆ ಮಾಡಿಕೊಡಬೇಕಾಗಿದೆ. ಕಾನೂನು ತಜ್ಞರ ಸಲಹೆ ಪಡೆದು ತ್ವರಿತ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ತಿಳಿಸಿದ್ದಾರೆ. ಕಾನೂನು ಪ್ರಯತ್ನಗಳ ಜೊತೆಗೆ, ದೇಶದ ವಿವಿಧ ರಾಜ್ಯಗಳಲ್ಲಿನ ಅತಿಥಿ ಉಪನ್ಯಾಸಕರ ಸ್ಥಿತಿ-ಗತಿಯ ಬಗ್ಗೆ ಸರ್ಕಾರ ನಿರ್ದಿಷ್ಟ ಕಾಲಮಿತಿಯೊಳಗೆ ಅಧ್ಯಯನ ನಡೆಸುವುದು ಅಗತ್ಯ. ಕೆಲವು ರಾಜ್ಯಗಳಲ್ಲಿ ಅತಿಥಿ ಉಪನ್ಯಾಸಕರಿಗೆ, ವರ್ಷ ಪೂರ್ತಿ ಕರ್ತವ್ಯ ನಿರ್ವಹಣೆಯ ಅವಕಾಶ ಕಲ್ಪಿಸುವ ಸೇವಾಭದ್ರತೆ ಇದೆ ಎನ್ನಲಾಗಿದೆ. ಉನ್ನತ ಶಿಕ್ಷಣ ಕ್ಷೇತ್ರದಲ್ಲಿ 'ಅತಿಥಿ' ಬೋಧಕರ ಸಮಸ್ಯೆಗಳನ್ನು ರಾಜ್ಯ ಸರ್ಕಾರಗಳು ಹೇಗೆ ನಿರ್ವಹಿಸಿವೆ ಎನ್ನುವ ಅಧ್ಯಯನ, ಅತಿಥಿ ಉಪನ್ಯಾಸಕರ ವಾಸ್ತವಿಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಬಹುದು; ವಾಸ್ತವಿಕ ನೆಲೆಗಟ್ಟಿನಲ್ಲಿ ಹೊಸನೀತಿಯೊಂದನ್ನು ರೂಪಿಸುವಂತೆ ಯುಜಿಸಿ ಮೇಲೆ ಒತ್ತಡ ಹೇರಲಿಕ್ಕೆ ಅಗತ್ಯವಾದ ದತ್ತಾಂಶಗಳನ್ನು ದೊರಕಿಸಿಕೊಡಬಹುದು.

---

# ರಾಮಾಯಣ



## ತ್ರಿಶಿರನ ವಧೆ

• ಹಿಂದಿನ ಸಂಚಿಕೆಯಿಂದ

120 ನೆಯ ಅಧ್ಯಾಯ

ಆ ಮೇಲೆ ಸೇನಾಪತಿಯಾದ ತ್ರಿಶಿರನು ಶ್ರೀರಾಮನ ಮೇಲೆ ಯುದ್ಧಕ್ಕೆ ಹೋಗುತ್ತಿದ್ದ ಖರನನ್ನು ಕುರಿತು ರಾಮನೊಡನೆ ಯುದ್ಧಕ್ಕೆ ನಾನು ಹೋಗುತ್ತೇನೆ. ನನ್ನನ್ನು ಕಳುಹಿಸಿ ನೀನು ಬಳಲಿಕೆಯನ್ನು ಪರಿಹರಿಸಿಕೊ. ನನ್ನ ಸಾಮರ್ಥ್ಯದಿಂದ ರಣರಂಗದಲ್ಲಿ ಆತನು ಹತನಾಗುವನೆಂದು ತಿಳಿ. ಸಮಸ್ತ ರಾಕ್ಷಸರಿಗೂ ಮೃತ್ಯುವಾದ ರಾಮನನ್ನು ಕೊಂದು ಆತನಲ್ಲಿರುವ ಆಯುಧಗಳನ್ನು ಕಸಿದು ತರುತ್ತೇನೆ ಎಂದು ಪ್ರತಿಜ್ಞೆಯನ್ನು ಮಾಡಿ ಕುದುರೆಗಳಿಂದ ಮೇಲೈಸಿದ ರಥವನ್ನು ಹತ್ತಿ ತ್ರಿಕೂಟಪರ್ವತದ ಹಾಗೆ ಕಂಗೊಳಿಸಿದನು. ಅವನು ಶ್ರೀರಾಮನ ಮೇಲೆ ಪ್ರಳಯಕಾಲದ ಮೇಘವು ಮಳೆಗರೆಯುವಂತೆ ಶರವರ್ಷವನ್ನು ಕರೆದು ನೀರಿನಲ್ಲಿ ತೊಯ್ದ ಭೇರಿಯ ಧ್ವನಿಯಂತೆ ಗಂಭೀರಸ್ವರಗುಂದಿ ಬೊಬ್ಬಿಡುತ್ತಿದ್ದನು. ಶ್ರೀರಾಮನು ಬಿಲ್ಲನ್ನು ಸಜ್ಜು ಮಾಡಿಕೊಂಡು ತ್ರಿಶಿರನ ಮೇಲೆ ಅನೇಕ ಬಾಣಗಳನ್ನು ಕರೆದನು. ಈ ರೀತಿಯಲ್ಲಿ ಅತ್ಯಂತ ಬಲವಂತನಾದ ಶ್ರೀರಾಮನಿಗೂ ಇನ ಹಾರದ ತ್ರಿಶಿರನಿಗೂ ಅರಣ್ಯದಲ್ಲಿ ಆನೆ ಸಿಂಹಗಳಿಗೆ ಯುದ್ಧವಾಗುವಂತೆ ಮಹತ್ತಾದ ಯುದ್ಧವಾಯಿತು.

ಆಗ ತ್ರಿಶಿರನು ಮೂರು ಬಾಣಗಳನ್ನು ಶ್ರೀರಾಮನ ಹಣೆಯ ಮೇಲೆ ಪ್ರಯೋಗಿಸಲು ಅತ್ಯಂತ ಕೋಪಯುಕ್ತನಾದ ಶ್ರೀರಾಮನು ತ್ರಿಶಿರನನ್ನು ಕುರಿತು ಹೀಗೆಂದನು: ಎಲೈ ರಾಕ್ಷಸ, ನೀನು ಮಹಾಪರಾಕ್ರಮಿ. ನಿನಗೆ ಸಮಾನರಾದ ಬಲವಂತರಾರುಂಟು ನಿನ್ನ ಬಾಣಗಳು ನನ್ನ ಹಣೆಯಲ್ಲಿ ತಾಕಿ ನನ್ನನ್ನು ಗಾಯಪಡಿಸಿದವು. ಇನ್ನು ನೀನು ವನ್ನ ಬಿಲ್ಲಿನಿಂದ ಪ್ರಯೋಗಿಸಲ್ಪಡುವ ಬಾಣಗಳನ್ನು ಎದುರಿಸು ಎಂದು ನುಡಿದು ಅತ್ಯಂತ ಕೋಪಯುಕ್ತನಾಗಿ ಕೃಷ್ಣಸರ್ಪಗಳಂತೆ ಕ್ರೂರವಾದ ಹದಿನಾಲ್ಕು ಬಾಣಗಳನ್ನು ತ್ರಿಶಿರನ ಎದೆಯಲ್ಲಿ ಹೂಡಿದನು. ಮತ್ತು ಅತ್ಯಂತ ನುಣುವಾದ ನಾಲ್ಕು ಅಂಬುಗಳಿಂದ ಆತನ ರಥಕ್ಕೆ ಕಟ್ಟಿದ್ದ ನಾಲ್ಕು ಕುದುರೆಗಳನ್ನೂ ಕೆಡಹಿ ಎಂಟು ಬಾಣಗಳಿಂದ ರಥದಲ್ಲಿದ್ದ ಸಾರಥಿಯನ್ನು ಕೊಂದು ಒಂದು ಬಾಣದಿಂದ ರಥದಲ್ಲಿದ್ದ ಜಜಸಂಭವನ್ನು ಬೀಳಿಸಿದನು. ಆಗ ತತ್ತಳಿಸಿ ಕಂಗೆಟ್ಟು ರಥದಿಂದ ಬೀಳುತ್ತಿದ್ದ ತ್ರಿಶಿರನ ಮೂರು ಶಿರಸ್ಸುಗಳಿಗೂ ಮೂರು ಶರಗಳನ್ನು ಗುರಿಮಾಡಿ ಪ್ರಯೋಗಿಸಿದನು. ಆ ಅಂಬುಗಳಿಂದ ಮೂರು ಶಿರಸ್ತುಗಳು ಕತ್ತರಿಸಲ್ಪಟ್ಟು ತ್ರಿಶಿರನು ರಕ್ತವನ್ನು ಕಾರಿ ಭೂಮಿಯ ಮೇಲೆ ಬಿದ್ದನು ಈ ರೀತಿಯಲ್ಲಿ ಶ್ರೀರಾಮನ ಮೂರು ಅಂಬುಗಳಿಂದ ಮೂರು ಶಿರಸ್ಸುಗಳೂ ಕತ್ತರಿಸಲ್ಪಟ್ಟು ಬಿದ್ದ ತ್ರಿಶಿರವನ್ನು ಕಂಡು ರಾಕ್ಷಸರು ಕಂಗೆಟ್ಟು ಹುಲಿಗಂಜಿದ ಹುಲ್ಲೆಗಳಂತೆ ಓಡುತ್ತಿರುವುದನ್ನು ಕಂಡು ಖರನು ನಿಲ್ಲಿ ನಿಲ್ಲಿ- ಓಡಬೇಡಿ ಎಂದು ನಿಲ್ಲಿಸಿ ಸಂತವಿಟ್ಟು ಚಂದ್ರನನ್ನು ರಾಹುವು ಅಟ್ಟುವಂತೆ ಶ್ರೀರಾಮನ ಕಡೆಗೆ ಧಾವಿಸುತ್ತೆ ಬಂದನು.

ಮುಂದುವರಿಯುವುದು...

---

# ಕಾಳರಾತ್ರಿ ದೇವಿ ಆರಾಧನೆ ಪೂಜೆ ವಿಧಾನ ಮತ್ತು ಮಹತ್ವ



ಉದಯವಾಹಿನಿ ಚಿತ್ರ

ನವರಾತ್ರಿ ಮಹೋತ್ಸವ ಏಳನೆಯ ದಿನ

ವಿಶ್ವಾಸ್.ಡಿ.ಗೌಡ



ನವರಾತ್ರಿಯಲ್ಲಿ ದುರ್ಗಾ ದೇವಿಯ ಒಂಬತ್ತು ವಿಭಿನ್ನ ರೂಪಗಳನ್ನು ಪೂಜಿಸುವುದು ವಿಶೇಷ ಮಹತ್ವವನ್ನು ಹೊಂದಿದೆ. ಅದೇ ರೀತಿ ನವರಾತ್ರಿಯ ಏಳನೇ ದಿನದಂದು ಕಾಳರಾತ್ರಿ ದೇವಿಯನ್ನು ಪೂಜಿಸುವ ಪದ್ಧತಿಯಿದೆ. ಈ ದಿನ ಕಾಳರಾತ್ರಿ ದೇವಿಯನ್ನು ವಿಧಿ-ವಿಧಾನಗಳ ಮೂಲಕ ಪೂಜಿಸುವುದರಿಂದ ಭಕ್ತನು ಎಲ್ಲಾ ರೀತಿಯ ಭಯದಿಂದ ಮುಕ್ತನಾಗುತ್ತಾನೆ, ಎಲ್ಲಾ ಸಮಸ್ಯೆಗಳಿಂದ ಪರಿಹಾರ ಪಡೆಯುತ್ತಾನೆ ಎನ್ನುವ ನಂಬಿಕೆಯಿದೆ. ಈ ವರ್ಷ ಶಾರದೀಯ ಅಥವಾ ಶರನ್ನವರಾತ್ರಿಯ 7ನೇ ದಿನವನ್ನು ನಾಳೆ ಆಚರಿಸಲಾಗುವುದು. ಈ ದಿನದಂದು ಕಾಳರಾತ್ರಿ ದೇವಿಯನ್ನು ಪೂಜಿಸಲಾಗುತ್ತಿದ್ದು, ಈಕೆಯ ಬಗ್ಗೆ ಒಂದಿಷ್ಟು ತಿಳಿದುಕೊಳ್ಳೋಣ.

**ಕಾಳರಾತ್ರಿ ಸ್ವರೂಪ:** ದುರ್ಗಾ ದೇವಿಯ 7ನೇ ರೂಪವಾದ ಕಾಳರಾತ್ರಿಯು ಮೂರು ಭಯಾನಕ ಕಣ್ಣುಗಳನ್ನು, 4 ಕೈಗಳನ್ನು ಹೊಂದಿದ್ದಾಳೆ. ಈಕೆಯು ತನ್ನ ಮೇಲಿನ ಬಲಗೈ ವರದ ಮುದ್ರೆಯಲ್ಲಿದೆ ಮತ್ತು ಕೆಳಗಿನ ಬಲಗೈ ಅಭಯ ಮುದ್ರೆಯಲ್ಲಿದೆ. ಎಡಭಾಗದಲ್ಲಿರುವವರು ಒಂದು ಕೈಯಲ್ಲಿ ಕಬ್ಬಿಣದ ಮುಳ್ಳುಗಳಂತಿರುವ ಆಯುಧವನ್ನು ಮತ್ತು ಇನ್ನೊಂದು ಕೈಯಲ್ಲಿ ಖಡ್ಗವನ್ನು ಹಿಡಿದುಕೊಂಡು ಕತ್ತೆಯ ಮೇಲೆ ಸವಾರಿ ಮಾಡುತ್ತಾಳೆ. ಘೋರ ಕಪ್ಪು ಮೈಬಣ್ಣವನ್ನು ಹೊಂದಿರುವ ಈಕೆ, ಬಿಚ್ಚಿದ ದಟ್ಟ ತಲೆಕೂದಲು, ಕೊರಳಲ್ಲಿ ರುಂಡ ಮಾಲೆ, ಬಾಯಲ್ಲಿ ಉರಿಯುವ ಬೆಂಕಿಯನ್ನು ಹೊಂದಿದ್ದಾಳೆ.

ಪುರಾಣಗಳ ಪ್ರಕಾರ, ಕಾಳರಾತ್ರಿ ದೇವಿಯು ಶುಂಭ, ನಿಶುಂಭರನ್ನು ಸಂಹಾರ ಮಾಡಲು ಈ ರೂಪವನ್ನು ತೆಗೆದುಕೊಂಡಳು ಎಂದು ಹೇಳಲಾಗುತ್ತದೆ.

**ಕಾಳರಾತ್ರಿ ದೇವಿ ಪೂಜೆಯ ಪ್ರಯೋಜನ:** ಕಾಳರಾತ್ರಿ ದೇವಿಯನ್ನು ಪೂಜಿಸುವುದರಿಂದ ವ್ಯಕ್ತಿಯು ಸಕಲ ಸಿದ್ಧಿಗಳನ್ನು ಹೊಂದುತ್ತಾನೆ ಎನ್ನುವ ನಂಬಿಕೆಯಿದೆ. ಮಹಾಶಕ್ತಿಗಳನ್ನು (ತಂತ್ರ - ಮಂತ್ರಗಳನ್ನು) ಅಭ್ಯಾಸ ಮಾಡುವ ಜನರಲ್ಲಿ ಕಾಳರಾತ್ರಿ ದೇವಿಯು ಹೆಚ್ಚು ಪ್ರಚಲಿತದಲ್ಲಿದ್ದಾಳೆ. ತಾಯಿಯ ಮೇಲಿನ ಭಕ್ತಿಯು ದುಷ್ಟರನ್ನು ನಾಶಪಡಿಸುತ್ತದೆ ಮತ್ತು ಎಲ್ಲಾ ರೀತಿಯ ಗ್ರಹಗಳ ಅಡೆತಡೆಗಳನ್ನು ನಿವಾರಿಸುತ್ತದೆ.

**ಕಾಳರಾತ್ರಿ ದೇವಿ ಪೂಜೆ ವಿಧಾನ:** ನವರಾತ್ರಿಯ ಏಳನೇ ದಿನದಂದು, ಬೆಳಿಗ್ಗೆ ಬೇಗನೆ ಎದ್ದು ಸ್ನಾನದ ನಂತರ ಶುಭ್ರವಾದ ಬಟ್ಟೆಗಳನ್ನು ಧರಿಸಿ.

ಇದರ ನಂತರ, ಕಲಶವನ್ನು ಪೂಜಿಸುವ ಮೂಲಕ ಕಾಳರಾತ್ರಿ ಪೂಜೆಯನ್ನು ಪ್ರಾರಂಭಿಸಿ. ಮೊದಲು ಅಮ್ಮನಿಗೆ ಪಂಚಾಮೃತ ಸ್ನಾನ ಮಾಡಿಸಿ ಅಮ್ಮನ ಅಲಂಕಾರ ಮಾಡಿ. ಎಂದಿನಂತೆ ತಾಯಿಗೆ ಕೆಂಪು ದಾಸವಾಳದ ಹೂವು, ಲವಂಗ, ಏಲಕ್ಕಿ, ತೆಂಗಿನಕಾಯಿ, ಕುಂಕುಮ, ಸಿಂಧೂರ, ಕೆಂಪು ಬಳೆ, ವೀಳ್ಯದೆಲೆ, ಅಡಿಕೆ ಇತ್ಯಾದಿಗಳನ್ನು ಅರ್ಪಿಸಿ. ಈಗ ತಾಯಿಯ ಮಂತ್ರಗಳನ್ನು ಪಠಿಸುವ ಮೂಲಕ ಐದು ಅಂಶಗಳನ್ನು ಅಂದರೆ ಗೋಡಂಬಿ, ಬಾದಾಮಿ, ಹಣ್ಣುಗಳು ಮತ್ತು ಸಿಹಿತಿಂಡಿಗಳನ್ನು ತಾಯಿಗೆ ಅರ್ಪಿಸಿ. ನಂತರ ತಾಯಿಯ ಆರತಿ ಮಾಡಿ. ಈ ದಿನದಂದು ಅರ್ಹ ವ್ಯಕ್ತಿಗೆ ದಾನ ಮಾಡುವುದರಿಂದ ಎಲ್ಲಾ ಸಮಸ್ಯೆಗಳು ಪರಿಹಾರವಾಗುತ್ತವೆ ಮತ್ತು ಬಯಸಿದ ಫಲಿತಾಂಶಗಳನ್ನು ಪಡೆಯಲಾಗುತ್ತದೆ ಎನ್ನುವ ನಂಬಿಕೆಯಿದೆ.

**ಕಾಳರಾತ್ರಿ ದೇವಿಯ ಕಥೆ:** ದಂತಕಥೆಯ ಪ್ರಕಾರ, ರಾಕ್ಷಸರಾದ ಶುಂಭ-ನಿಶುಂಭ, ರಕ್ತಬೀಜಾಸುರರು ಮೂರು ಲೋಕಗಳಲ್ಲಿ ತಮ್ಮ ಭಯವನ್ನು ಸೃಷ್ಟಿಸಲು ಮುಂದಾದರು. ಇದರಿಂದ ಆತಂಕಗೊಂಡ ದೇವತೆಗಳೆಲ್ಲ ಶಿವನ ಮೊರೆ ಹೋದರು. ರಾಕ್ಷಸರನ್ನು ಸಂಹರಿಸಿ ತನ್ನ ಭಕ್ತರನ್ನು ರಕ್ಷಿಸುವಂತೆ ಶಿವನು ಪಾರ್ವತಿಯನ್ನು ಕೇಳಿದನು. ಶಿವನ ಸಲಹೆಯಂತೆ ಪಾರ್ವತಿಯು ದುರ್ಗೆಯ ರೂಪವನ್ನು ತೆಗೆದುಕೊಂಡು ಶುಂಭ-ನಿಶುಂಭರನ್ನು ಕೊಂದಳು. ಆದರೆ ದುರ್ಗಾ ದೇವಿಯು ರಕ್ತಬೀಜಾಸುರನನ್ನು ಕೊಂದ ತಕ್ಷಣ ಆತನ ದೇಹದಿಂದ ಹೊರಬಂದ ರಕ್ತದಿಂದ ಲಕ್ಷಗಟ್ಟಲೆ ರಕ್ತಬೀಜಾಸುರರು ಉತ್ಪತ್ತಿಯಾದರು. ಇದನ್ನು ನೋಡಿದ ದುರ್ಗಾ ಮಾತೆಯು ತನ್ನ ತೇಜಸ್ಸಿನಿಂದ ಕಾಳರಾತ್ರಿಯನ್ನು ರಚಿಸಿದಳು. ಇದಾದ ನಂತರ ದುರ್ಗಾ ದೇವಿಯು ರಕ್ತಬೀಜಾಸುರರನ್ನು ಕೊಂದಾಗ ಕಾಳರಾತ್ರಿಯು ಆತನ ದೇಹದಿಂದ ಹೊರಬರುತ್ತಿದ್ದ ರಕ್ತವನ್ನು ತನ್ನ ಬಾಯಿಯಲ್ಲಿ ತುಂಬಿಕೊಂಡು ರಕ್ತಬೀಜಾಸುರನನ್ನು ಸೀಳಿ ಕೊಂದಳು.

> **ಕಾಳರಾತ್ರಿ ಪೂಜೆ ಶುಭ ಫಲಗಳು**
> **ದುಃಖ, ನೋವು, ವಿನಾಶ ಮತ್ತು ಸಾವನ್ನು ಎಂದಿಗೂ ತಪ್ಪಿಸಲಾಗದು ಎಂದು ತಾಯಿ ನಮಗೆ ಕಲಿಸುತ್ತಾಳೆ. ಈ ಇಷ್ಟೂ ಅಂಶಗಳು ಜೀವನದ ಕಹಿ ಸತ್ಯಗಳು ಮತ್ತು ಅವುಗಳನ್ನು ನಿರಾಕರಿಸುವುದು ಅಸಾಧ್ಯ ಎಂಬುದನ್ನು ತಾಯಿ ಅರ್ಥ ಮಾಡಿಸುತ್ತಾಳೆ. ತಾಯಿ ಕಾಳರಾತ್ರಿಯ ಮಂತ್ರವನ್ನು ಪಠಿಸುವುದರಿಂದ ನಮ್ಮ ಮನಸ್ಸಿನಲ್ಲಿರುವ ಭಯವು ದೂರವಾಗಿ ಧೈರ್ಯ ತುಂಬಿಕೊಳ್ಳುತ್ತದೆ. ಕಾಳರಾತ್ರಿಯ ಪೂಜಾ ಮಂತ್ರಗಳು ಭಕ್ತರನ್ನು ಕಷ್ಟ ಕಾಲದಲ್ಲಿ ಕಾಪಾಡುತ್ತದೆ. ಮತ್ತು ಯಾವತ್ತೂ ಸೋಲದಂತೆ ಕಾಯುತ್ತದೆ. ಶನಿ ಅಥವಾ ನಿಮಗೆ ಯಾವುದೇ ಗ್ರಹ ಪೀಡೆಗಳಿದ್ದರೆ ತಾಯಿ ಕಾಳರಾತ್ರಿಯ ಪೂಜೆಯಿಂದ ನಿವಾರಣೆಯಾಗುತ್ತದೆ.**

---

# ಶೈಕ್ಷಣಿಕ ತರಗತಿಗಳ ಉದ್ಘಾಟನೆ ಮತ್ತು ಮಾರ್ಗದರ್ಶನ

## 126 ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು

• ಉದಯವಾಹಿನಿ, ಬೆಂಗಳೂರು

ನಗರದ ಐಟಿಪಿಎಲ್ ರಸ್ತೆಯಲ್ಲಿರುವ ಸಿಎಂಆರ್ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ 2025-26 ನೇ ಸಾಲಿನ ಶೈಕ್ಷಣಿಕ ತರಗತಿಗಳ ಉದ್ಘಾಟನೆ ಮತ್ತು ಮಾರ್ಗದರ್ಶನ ಕಾರ್ಯಕ್ರಮ ನಡೆಯಿತು. ಸಿಎಂಆರ್‌ಐಟಿ ಸಭಾಂಗಣದಲ್ಲಿ ಆಯೋಜಿಸಿದ್ದ 2025-26ನೇ ಸಾಲಿನ ಶೈಕ್ಷಣಿಕ ತರಗತಿಗಳ ಉದ್ಘಾಟನೆ ಮತ್ತು ಮಾರ್ಗದರ್ಶನ ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಭಾರತ ಸರ್ಕಾರದ ವಿದೇಶಾಂಗ ಸಚಿವಾಲಯದ ಮಾಜಿ ಕಾರ್ಯದರ್ಶಿ ಡಾ.ಎವಿಎಸ್ ರಮೇಶ್ ಚಂದ್ರ, ಐಎಫ್‌ಎಸ್ (ನಿವೃತ್ತ) ಮತ್ತು ಪ್ರೊಫಿಂಚ್ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ಉಪಾಧ್ಯಕ್ಷೆ ರಮ್ಯಾ ಹೆಮ್ಮಿಗೆ ವೆಂಕಟೇಶ್ ಉದ್ಘಾಟಿಸಿದರು.

ಕಾರ್ಯಕ್ರಮ ಕುರಿತು ಮಾತನಾಡಿದ ಭಾರತ ಸರ್ಕಾರದ ವಿದೇಶಾಂಗ ಸಚಿವಾಲಯದ ಮಾಜಿ ಕಾರ್ಯದರ್ಶಿ ಡಾ. ಎವಿಎಸ್ ರಮೇಶ್ ಚಂದ್ರ ಅವರು ವಿದ್ಯಾರ್ಥಿಗಳು ಆತ್ಮನಿರ್ಭರ್ ಭಾರತ್ ಉಪಕ್ರಮವನ್ನು ಸರಿಯಾದ ನಿಟ್ಟಿನಲ್ಲಿ ಬಳಸಿಕೊಂಡು ಉದ್ಯಮಿಗಳಾಗುವ ಮೂಲಕ ದೇಶದ ಆರ್ಥಿಕ ಸ್ವಾವಲಂಬನೆಯನ್ನು ಹೆಚ್ಚಿಸುವ ಸಂಪನ್ಮೂಲ ವ್ಯಕ್ತಿಗಳಾಗಿ ರೂಪುಗೊಳ್ಳುವಂತೆ ಕಿವಿ ಮಾತು ಹೇಳಿದರು. ಡೇಟಾಸೈನ್ಸ್, ಮಿಷನ್ ಲರ್ನಿಂಗ್ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಹೆಚ್ಚು ಹ್ಯಾಕಥಾನ್ ಗಳಲ್ಲಿ ಸ್ಪರ್ಧಿಸಿರುವ ವಿದ್ಯಾರ್ಥಿಗಳ ತಂತ್ರಜ್ಞಾನ ಮತ್ತು ವಿಜ್ಞಾನ ಅನ್ವೇಷಣೆಯ ಬಗ್ಗೆ ಹರ್ಷವ್ಯಕ್ತಪಡಿಸಿದರು. ಸಾಧನೆಗೆ ಶಿಸ್ತುಬದ್ಧ ಕಲಿಕೆ, ಸಮಯ ಪ್ರಜ್ಞೆ ಎರಡನ್ನು ವಿದ್ಯಾರ್ಥಿ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಾಧನೆ ಮಾಡಲು ಸಾಧ್ಯ. ಈ ನಿಟ್ಟಿನಲ್ಲಿ ಇಂದಿನ ವಿದ್ಯಾರ್ಥಿಗಳು ಕಲಿತು ದೇಶಕ್ಕೆ ಉತ್ತಮ ಸಂಪನ್ಮೂಲ ವ್ಯಕ್ತಿಗಳಾಗಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗೌರವ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಡಾ.ಕೆ.ಸಿ.ರಾಮಮೂರ್ತಿ ಐಪಿಎಸ್ (ನಿವೃತ್ತ), ಮಾಜಿ ರಾಜ್ಯಸಭಾ ಸದಸ್ಯರು, ಅಧ್ಯಕ್ಷರು ಸಿಎಂಆರ್ ವಿಶ್ವವಿದ್ಯಾಲಯ ಮತ್ತು ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಇವರು 2025-26ನೇ ಸಾಲಿನ ಎಂಜಿನಿಯರಿಂಗ್ ಪದವಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳನ್ನು ಸ್ವಾಗತಿಸಿ ಉಜ್ವಲ ಭವಿಷ್ಯಕ್ಕೆ ಶುಭಕೋರಿದರು. ನಂತರ ಮಾತನಾಡಿ ವಿದ್ಯಾರ್ಥಿಗಳನ್ನು ಎಲ್ಲಾ ಕ್ಷೇತ್ರಗಳಲ್ಲೂ ಸಮರ್ಥ ನಾಯಕರಾಗಿ ರೂಪಿಸಲು ನಾವು ಬದ್ಧರಾಗಿದ್ದೇವೆ. ನಿಮ್ಮ ತಂದೆ-ತಾಯಿ ಕಟ್ಟಿಕೊಂಡಿರುವ ದೊಡ್ಡ ದೊಡ್ಡ ಕನಸುಗಳನ್ನು ನನಸಾಗಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಶ್ರಮಿಸಬೇಕು. ಆ ಮೂಲಕ ದೇಶಕ್ಕೆ ಸತ್ಪ್ರಜೆಗಳಾಗಬೇಕು ಎಂದು ಹೇಳಿದರು.

**ಸಾಧನೆಗೆ ಶಿಸ್ತುಬದ್ಧ ಕಲಿಕೆ**



ಉದಯವಾಹಿನಿ ಚಿತ್ರ

> **ಶಿಕ್ಷಣ ಎಂಬುದು ಶಕ್ತಿಶಾಲಿ ಅಸ್ತ್ರ. ನಿರಂತರ ಕಲಿಕೆ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸುವ ಬಹಳ ದೊಡ್ಡ ಸಾಧನ ಹಾಗಾಗಿ ವಿದ್ಯಾರ್ಥಿಗಳು ಕ್ರಿಯಾತ್ಮಕ ಕಲಿಕೆ, ಸೃಜನಶೀಲ ಚಿಂತನೆ, ನಾವೀನ್ಯತೆಯ ಕಡೆಗೆ ಹೆಚ್ಚು ಒತ್ತು ನೀಡುವ ಮೂಲಕ ಮಹತ್ವದ ಗುರಿಯನ್ನು ಮುಟ್ಟಬೇಕು ಎಂದು ಹೇಳಿದರು. ಚಾಟ್ ಜಿಪಿಟಿಯಂತಹ ಅತಿಯಾದ ತಂತ್ರಜ್ಞಾನ ಬಳಕೆಗೆ ಅವಲಂಬಿತರಾಗದೇ ಸ್ನೇಹಿತರು, ಪೋಷಕರು ಮತ್ತು ಶಿಕ್ಷಕರೊಂದಿಗೆ ಹೆಚ್ಚು ಬೆರೆತು ಸಂವಾದದ ಮೌಲ್ಯವನ್ನು ಕಲಿಯುವಂತೆ ಕಿವಿಮಾತು.**
> -ಶ್ರೀಮತಿ ರಮ್ಯಾ ಹೆಮ್ಮಿಗೆ ವೆಂಕಟೇಶ್
> ಪ್ರೊಫಿಂಚ್‌ನ ಮಾನವ ಸಂಪನ್ಮೂಲ ವಿಭಾಗದ ಉಪಾಧ್ಯಕ್ಷೆ

ಕಾರ್ಯಕ್ರಮದಲ್ಲಿ ಅತ್ಯುತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ, ಶೈಕ್ಷಣಿಕ, ಉದ್ಯಮಶೀಲತೆ, ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ 126 ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಹಾಗೆಯೇ ಉದ್ಯಮಶೀಲರಾಗಿ ಹೊರಹೊಮ್ಮಿದ ಹಳೆಯ ವಿದ್ಯಾರ್ಥಿಗಳು ಮತ್ತು ಪ್ರಾಧ್ಯಾಪಕರ ಕೊಡುಗೆಗಳನ್ನು ಗುರುತಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ 1,400 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಪೋಷಕರು ಉಪಸ್ಥಿತರಿದ್ದು ಶೈಕ್ಷಣಿಕ ತರಗತಿಗಳ ಉದ್ಘಾಟನೆ ಕಾರ್ಯಕ್ರಮಕ್ಕೆ ಮೆರುಗು ತುಂಬಿದರು. ಕಾರ್ಯಕ್ರಮದಲ್ಲಿ 34ಕ್ಕೂ ಹೆಚ್ಚು ಶೈಕ್ಷಣಿಕ ಕಲಿಕೆಗೆ ಪೂರಕವಾದ ಚಟುವಟಿಕೆಗಳ ಕ್ಲಬ್ ಗಳ ಕಾರ್ಯಚಟುವಟಿಕೆಗಳನ್ನು ವಿದ್ಯಾರ್ಥಿಗಳಿಗೆ ಪರಿಚಯ ಮಾಡಿಕೊಡಲಾಯಿತು. ಕಾರ್ಯಕ್ರಮದಲ್ಲಿ ಸಿಎಂಆರ್ ಜ್ಞಾನಧಾರ ಟ್ರಸ್ಟ್ ಕಾರ್ಯದರ್ಶಿ ಡಾ.ಜಗನ್ನಾಥ ರೆಡ್ಡಿ, ಪ್ರಾಂಶುಪಾಲರಾದ ಡಾ.ಸಂಜಯ್ ಜೈನ್, ಉಪಪ್ರಾಂಶುಪಾಲ ಡಾ.ಬಿ.ನರಸಿಂಹ ಮೂರ್ತಿ, ಅಕಾಡೆಮಿ ಡೀನ್ ಗಳು, ವಿಭಾಗದ ಮುಖ್ಯಸ್ಥರು ಉಪಸ್ಥಿತರಿದ್ದರು.

---

# ಅಗರಬತ್ತಿ, ಧೂಪ ಮನೆಯಲ್ಲಿ ಹಚ್ಚೇರಾ? ಇದ್ರಿಂದ ಆರೋಗ್ಯಕ್ಕಾಗುವ ಹಾನಿ ಬಗ್ಗೆ ನಿಮಗೆ ಗೊತ್ತಾ?

ದೇವರಿಗೆ ಪೂಜೆ ಮಾಡುವಾಗ ಮತ್ತು ಮನೆ ಶುದ್ಧೀಕರಣದ ಸಮಯದಲ್ಲಿ ಧೂಪದ್ರವ್ಯ, ಧೂಪದ ಕಡ್ಡಿಗಳನ್ನು ಹಚ್ಚುವುದು ಭಾರತೀಯ ಸಂಪ್ರದಾಯಗಳಲ್ಲಿ ಸಾಮಾನ್ಯವಾಗಿದೆ. ಅವುಗಳ ಸುವಾಸನೆಯು ಸಕಾರಾತ್ಮಕ ವಾತಾವರಣವನ್ನು ಸೃಷ್ಟಿಸುತ್ತದೆ ಮತ್ತು ಮನಸ್ಸಿಗೆ ಶಾಂತಿಯನ್ನು ನೀಡುತ್ತದೆ. ಆದರೆ ನೀವು ಪವಿತ್ರವೆಂದು ಪರಿಗಣಿಸುವ ಹೊಗೆ ನಿಧಾನವಾಗಿ ನಿಮ್ಮ ಆರೋಗ್ಯಕ್ಕೆ ಹಾನಿ ಮಾಡುತ್ತದೆ ಎಂಬುವುದು ನಿಮಗೆ ಗೊತ್ತಾ?


**ಡಾಕ್ಟರ್ ಏನಂತಾರೆ?:** ಡಾ. ಸೇಥಿ ಅವರ ಪ್ರಕಾರ, ಈ ಉತ್ಪನ್ನಗಳಲ್ಲಿ ಬಳಸುವ ರಾಸಾಯನಿಕಗಳು, ಆರೊಮ್ಯಾಟಿಕ್ ಪದಾರ್ಥಗಳು ಸುಟ್ಟಾಗ ಹಾನಿಕಾರಕ ಅನಿಲಗಳನ್ನು ಬಿಡುಗಡೆ ಮಾಡುತ್ತವೆ. ಇವುಗಳಲ್ಲಿ ಕಾರ್ಬನ್ ಮಾನಾಕ್ಸೈಡ್, ಬೆಂಜೀನ್ ಮತ್ತು ಫಾರ್ಮಾಲ್ಡಿಹೈಡ್‌ನಂತಹ ಅಂಶಗಳು ಸೇರಿವೆ. ಆದ್ದರಿಂದ, ನಿರಂತರ ಒಡ್ಡಿಕೊಳ್ಳುವಿಕೆಯು ಶ್ವಾಸಕೋಶದ ಮೇಲೆ ಪರಿಣಾಮ ಬೀರುತ್ತದೆ.

**ಆರೋಗ್ಯದ ಮೇಲಾಗುವ ಪರಿಣಾಮಗಳು:** ಧೂಪದ್ರವ್ಯ, ಧೂಪದ್ರವ್ಯದ ಹೊಗೆಯನ್ನು ದೀರ್ಘಕಾಲದವರೆಗೆ ಉಸಿರಾಡುವುದರಿಂದ ಅನೇಕ ಗಂಭೀರ ಸಮಸ್ಯೆಗಳಿಗೆ ಕಾರಣವಾಗಬಹುದು. ಇದು ಉಸಿರಾಟದ ಸಮಸ್ಯೆಗಳಿಗೆ ಪ್ರಚೋದಕವಾಗಿ ಕಾರ್ಯನಿರ್ವಹಿಸುತ್ತದೆ. ಹೊಗೆಯಲ್ಲಿರುವ ರಾಸಾಯನಿಕಗಳು ಚರ್ಮ ಮತ್ತು ಕಣ್ಣುಗಳಿಗೆ ಹಾನಿ ಮಾಡಬಹುದು.

ಇದು ಹೃದಯದ ಒತ್ತಡವನ್ನು ಹೆಚ್ಚಿಸುತ್ತದೆ. ನಿರಂತರ ಒಡ್ಡಿಕೊಳ್ಳುವಿಕೆಯು ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸುತ್ತದೆ. ಧಾರ್ಮಿಕ ನಂಬಿಕೆ ಮತ್ತು ಆರೋಗ್ಯವನ್ನು ಸಮತೋಲನಗೊಳಿಸುವುದು

**ಧೂಪದ್ರವ್ಯದ ಕಡ್ಡಿಗಳ ಬಳಕೆಸುವಾಗ ತೆಗೆದುಕೊಳ್ಳಬೇಕಾದ ಎಚ್ಚರಿಕೆಗಳು**

- **ಮನೆ ಚೆನ್ನಾಗಿ ಗಾಳಿ ಇರುವಂತೆ ನೋಡಿಕೊಳ್ಳಬೇಕು.**
- **ಪ್ರತಿದಿನ ದೀರ್ಘಕಾಲದವರೆಗೆ ಧೂಪ ದ್ರವ್ಯದ ಕಡ್ಡಿಗಳನ್ನು ಸುಡಬೇಡಿ.**
- **ಮಕ್ಕಳು ಮತ್ತು ವೃದ್ಧರ ಕೋಣೆಗಳಲ್ಲಿ ಧೂಪದ್ರವ್ಯ ಬಳಸುವುದನ್ನು ತಪ್ಪಿಸಿ.**





---

**APK ಸ್ಕ್ಯಾಮ್ ಎಂದರೇನು? ಅದು ಹೇಗೆ ಕೆಲಸ ಮಾಡುತ್ತದೆ?**
**APK ಎಂದರೆ ಆಂಡ್ರಾಯ್ಡ್ ಮೊಬೈಲ್‌ಗಳಲ್ಲಿ ಆ್ಯಪ್‌ಗಳನ್ನು ಇನ್‌ಸ್ಟಾಲ್ ಮಾಡಲು ಬಳಸುವ ಫೈಲ್ ಫಾರ್ಮ್ಯಾಟ್. ವಂಚಕರು ಈ ಫಾರ್ಮ್ಯಾಟ್ ಅನ್ನು ದುರ್ಬಳಕೆ ಮಾಡಿಕೊಂಡು, ಅಧಿಕೃತ ಆ್ಯಪ್‌ನಂತೆ ಕಾಣುವ ನಕಲಿ ಫೈಲ್‌ಗಳನ್ನು ಸೃಷ್ಟಿಸುತ್ತಾರೆ.**

# ಕ್ಷಣಾರ್ಧದಲ್ಲಿ ಖಾತೆ ಖಾಲಿ

## ಎಚ್ಚರ! ನಕಲಿ 'APK' ಆ್ಯಪ್‌ಗಳಿಂದ ಹೊಸ ವಂಚನೆ

• ಅನಿಲ್ ಕುಮಾರ್ ಮ.ತೇಲಂಗಿ ಮುದ್ದೇಬಿಹಾಳ

ಇತ್ತೀಚೆಗೆ ಸೈಬರ್ ವಂಚಕರು ಜನರನ್ನು ಮೋಸಗೊಳಿಸಲು ಹೊಸ ಮಾರ್ಗವನ್ನು ಕಂಡುಕೊಂಡಿದ್ದಾರೆ ಅದುವೇ ಮಾಲ್‌ವೇರ್ ಅಡಕವಿರುವ ನಕಲಿ APK ಫೈಲ್‌ಗಳು. ಕೇವಲ ಒಂದು ಲಿಂಕ್ ಅನ್ನು ಕ್ಲಿಕ್ ಮಾಡಿ, ಆ್ಯಪ್ ಅನ್ನು ಇನ್‌ಸ್ಟಾಲ್ ಮಾಡುವುದರಿಂದ ನಿಮ್ಮ ಬ್ಯಾಂಕ್ ಖಾತೆ ಕ್ಷಣಾರ್ಧದಲ್ಲಿ ಖಾಲಿಯಾಗಬಹುದು.



ಉದಯವಾಹಿನಿ ಚಿತ್ರ

**ಈ ಮೋಸ ನಡೆಯುವ ರೀತಿ ಹೀಗಿದೆ:**

**ನಂಬಿಕೆ ಸೃಷ್ಟಿ:** ವಂಚಕರು ನಿಮ್ಮನ್ನು ಸಂಪರ್ಕಿಸಿ ಬ್ಯಾಂಕ್ ಅಧಿಕಾರಿಗಳು, ಸರ್ಕಾರಿ ಇಲಾಖೆ (ಉದಾ: RTO, ಆದಾಯ ತೆರಿಗೆ) ಅಥವಾ ಯಾವುದೋ ದೊಡ್ಡ ಕಂಪನಿಯ ಸಿಬ್ಬಂದಿ ಎಂದು ನಟಿಸುತ್ತಾರೆ.

**ತುರ್ತು ಸಂದೇಶ ರವಾನೆ:** ನಿಮ್ಮ ಕೆವೈಸಿ ಇಂದೇ ಅಪ್‌ಡೇಟ್ ಆಗದಿದ್ದರೆ ಖಾತೆ ಬ್ಲಾಕ್ ಆಗುತ್ತದೆ, ನಿಮ್ಮ ಟ್ರಾಫಿಕ್ ಫೈನ್ ಬಾಕಿಯಿದೆ, ಈ ಆ್ಯಪ್ ಮೂಲಕ ಪಾವತಿಸಿ ಎಂಬಂತಹ ತುರ್ತು ಮತ್ತು ಸುಳ್ಳು ಸಂದೇಶಗಳನ್ನು ಎಸ್‌ಎಂಎಸ್ ಅಥವಾ ವಾಟ್ಸ್‌ಆ್ಯಪ್ ಮೂಲಕ ಕಳುಹಿಸುತ್ತಾರೆ.

**ಮೋಸ ಹೋದರೆ ಏನು ಮಾಡಬೇಕು?**

- **ತಕ್ಷಣವೇ ನಿಮ್ಮ ಬ್ಯಾಂಕ್‌ಗೆ ಕರೆ ಮಾಡಿ ಖಾತೆಯನ್ನು ಬ್ಲಾಕ್ ಮಾಡಿ.**
- **ರಾಷ್ಟ್ರೀಯ ಸೈಬರ್ ಕ್ರೈಂ ಹೆಲ್ಪ್‌ಲೈನ್ ಸಂಖ್ಯೆ 1930 ಗೆ ಕರೆ ಮಾಡಿ ಅಥವಾ www.cybercrime.gov.in ಮೂಲಕ ತಕ್ಷಣವೇ ದೂರು ದಾಖಲಿಸಿ.**
- **ನಮ್ಮ ಜಾಗೃತಿಯೇ ನಮ್ಮ ಮೊದಲ ಸುರಕ್ಷೆ. ಯಾವುದೇ ಆತುರದ ನಿರ್ಧಾರಕ್ಕೆ ಬಲಿಯಾಗದೆ, ಡಿಜಿಟಲ್ ಲೋಕದಲ್ಲಿ ಎಚ್ಚರಿಕೆಯಿಂದ ಹೆಜ್ಜೆ ಇಡಿ.**

**ಲಿಂಕ್‌ಗೆ ಒತ್ತಾಯ:** ಈ ಸಂದೇಶದಲ್ಲಿ ಒಂದು ಲಿಂಕ್ ನೀಡಿ, ಆ್ಯಪ್ ಡೌನ್‌ಲೋಡ್ ಮಾಡಲು ಮತ್ತು ಇನ್‌ಸ್ಟಾಲ್ ಮಾಡಲು ಒತ್ತಾಯಿಸುತ್ತಾರೆ. ಈ ಲಿಂಕ್ ಡೌನ್‌ಲೋಡ್ ಆಗುವುದು ಒಂದು APK ಫೈಲ್.

**ಪರ್ಮಿಷನ್ ಪಾಶ:** ಒಮ್ಮೆ ನೀವು ಆ ಫೈಲ್ ಅನ್ನು ಇನ್‌ಸ್ಟಾಲ್ ಮಾಡಿದರೆ, ಅದು ನಿಮ್ಮ ಮೊಬೈಲ್‌ನಲ್ಲಿರುವ ಎಸ್‌ಎಂಎಸ್, ಕರೆ ಲಾಗ್, ಸಂಪರ್ಕಗಳು ಮತ್ತು ಮೈಕ್ರೋಫೋನ್ ಪ್ರವೇಶಕ್ಕೆ ಅನುಮತಿ ಕೇಳುತ್ತದೆ. ಹೆಚ್ಚಿನ ಜನರು ಇದನ್ನು ಗಮನಿಸದೆ ''Allow' ನೀಡುತ್ತಾರೆ.

**ನಿಯಂತ್ರಣ ಕಳವು:** ಅನುಮತಿ ಸಿಕ್ಕ ತಕ್ಷಣ, ಆ ನಕಲಿ ಆ್ಯಪ್ ನಿಮ್ಮ ಫೋನ್‌ನಲ್ಲಿರುವ ಗೌಪ್ಯ ಮಾಹಿತಿಯನ್ನು (ಬ್ಯಾಂಕ್ ವಿವರ, ಪಾಸ್‌ವರ್ಡ್‌ಗಳು) ವಂಚಕರಿಗೆ ರವಾನಿಸುತ್ತದೆ. ಕೆಲವೊಮ್ಮೆ ಅವರು ರಿಮೋಟ್ ಆಗಿ ನಿಮ್ಮ ಮೊಬೈಲ್ ಪರದೆಯನ್ನೂ ನಿಯಂತ್ರಿಸಿ, ನಿಮ್ಮ ಬ್ಯಾಂಕ್ ಖಾತೆಯಿಂದ ಹಣವನ್ನು ವರ್ಗಾಯಿಸಿ ಮೋಸ ಮಾಡುತ್ತಾರೆ. ನಿಮ್ಮ ಖಾತೆಗೆ ಬರುವ ಒಟಿಪಿ ಸಹ ಅವರಿಗೆ ಲಭ್ಯವಾಗುತ್ತದೆ. ಮೋಸ ಹೋಗದಿರಲು ಕೈಗೊಳ್ಳಬೇಕಾದ ಕ್ರಮಗಳು ಸಾರ್ವಜನಿಕರು ಈ ಕೆಳಗಿನ ಪ್ರಮುಖ ಅಂಶಗಳನ್ನು ನೆನಪಿನಲ್ಲಿಟ್ಟುಕೊಂಡು ಮೋಸದಿಂದ ಪಾರಾಗಬಹುದು.

**ಸುರಕ್ಷತಾ ಕ್ರಮಗಳು:** ಪ್ಲೇ ಸ್ಟೋರ್‌ನಿಂದ ಮಾತ್ರ ಡೌನ್‌ಲೋಡ್ ಆ್ಯಪ್‌ಗಳನ್ನು ಕಡ್ಡಾಯವಾಗಿ Google Play Store ಅಥವಾ Apple App Store ನಂತಹ ಅಧಿಕೃತ ಮೂಲಗಳಿಂದ ಮಾತ್ರ ಡೌನ್‌ಲೋಡ್ ಮಾಡಿ.

**ಲಿಂಕ್‌ಗಳನ್ನು ನಿರ್ಲಕ್ಷಿಸಿ;** SMS, WhatsApp, ಅಥವಾ ಇಮೇಲ್ ಮೂಲಕ ಬರುವ ಯಾವುದೇ ಸಂಶಯಾಸ್ಪದ, ತುರ್ತು ಲಿಂಕ್‌ಗಳನ್ನು ಎಂದಿಗೂ ಕ್ಲಿಕ್ ಮಾಡಬೇಡಿ ಅಥವಾ ಅದರಿಂದ ಬಂದ ಫೈಲ್‌ಗಳನ್ನು ಇನ್‌ಸ್ಟಾಲ್ ಮಾಡಬೇಡಿ.

**ಅಧಿಕೃತ ಸಂಸ್ಥೆಗಳ ಪರಿಶೀಲನೆ;** ನಿಮ್ಮ ಬ್ಯಾಂಕ್, RTO, ಅಥವಾ ಆದಾಯ ತೆರಿಗೆ ಇಲಾಖೆಯ ಹೆಸರಿನಲ್ಲಿ ಯಾರಾದರೂ ಕರೆ ಮಾಡಿ APK ಇನ್‌ಸ್ಟಾಲ್ ಮಾಡಲು ಕೇಳಿದರೆ, ತಕ್ಷಣ ಕರೆ ಕಟ್ ಮಾಡಿ ಮತ್ತು ಅವರ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಿ ವಿಷಯವನ್ನು ದೃಢೀಕರಿಸಿ.

**ಪರ್ಮಿಷನ್‌ಗಳನ್ನು ಪರಿಶೀಲಿಸಿ;** ಯಾವುದೇ ಆ್ಯಪ್ ಅನ್ನು ಇನ್‌ಸ್ಟಾಲ್ ಮಾಡುವ ಮೊದಲು ಅದು ಕೇಳುವ ಅನುಮತಿಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ಅದು ನಿಮ್ಮ ಗೌಪ್ಯ ಮಾಹಿತಿಯನ್ನು ಕೇಳಿದರೆ ತಕ್ಷಣ ಅದನ್ನು ತಿರಸ್ಕರಿಸಿ.

**ಅಜ್ಞಾತ ಮೂಲಗಳನ್ನು ನಿಷ್ಕ್ರಿಯಗೊಳಿಸಿ;** ನಿಮ್ಮ ಮೊಬೈಲ್ ಸೆಟ್ಟಿಂಗ್ಸ್‌ಗೆ ಹೋಗಿ ಅಜ್ಞಾತ ಮೂಲಗಳಿಂದ ಆ್ಯಪ್‌ಗಳನ್ನು ಇನ್‌ಸ್ಟಾಲ್ ಮಾಡಿ ಎಂಬ ಆಯ್ಕೆಯನ್ನು ನಿಷ್ಕ್ರಿಯಗೊಳಿಸಿ.

# ಶ್ರೀ ಮಾರಿಕಾಂಬಾ ಕ್ಷೇತ್ರಕ್ಕೆ ಶಿವಣ್ಣ ಭೇಟಿ

ನವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಶಿರಸಿಯ ಪ್ರಸಿದ್ಧ ಶಿರಸಿ ಮಾರಿಕಾಂಬಾ ದೇವಸ್ಥಾನಕ್ಕೆ ನಟ ಶಿವರಾಜ್ ಕುಮಾರ್ ದಂಪತಿ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಶಿರಸಿಯ ಪ್ರಸಿದ್ಧ ಶ್ರೀ ಮಾರಿಕಾಂಬಾ ದೇವಾಲಯಕ್ಕೆ ಆಗಮಿಸಿದ ಶಿವಣ್ಣ ದಂಪತಿ ತಮ್ಮ ಇಷ್ಟ ದೈವಕ್ಕೆ ಪೂಜೆ ಸಲ್ಲಿಸಿದರು. ಈ ಹಿಂದೆ ನಟ ಶಿವರಾಜ್ ಕುಮಾರ್ ಅನಾರೋಗ್ಯಕ್ಕೆ ಒಳಗಾಗಿದ್ದಾಗ ಸಹ ಶಿರಸಿ ಮಾರಿಕಾಂಬೆ ಸನ್ನಿಧಿಗೆ ಆಗಮಿಸಿ ಪೂಜೆ ಸಲ್ಲಿಸಿ ಹರಕೆ ಕಟ್ಟಿಕೊಂಡಿದ್ದರು. ಅಮೆರಿಕದಲ್ಲಿ ಶಸ್ತ್ರಚಿಕಿತ್ಸೆ ಬಳಿಕ ಗುಣಮುಖರಾಗಿರುವ ಶಿವರಾಜ್ ಕುಮಾರ್ ಶಿರಸಿಗೆ ಆಗಮಿಸಿದ್ದು, ಮಾರಿಕಾಂಬಾ ಸನ್ನಿಧಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು.





# ಪ್ರೀ-ರಿಲೀಸ್ ಇವೆಂಟ್‌ಗೆ ಜೂ. ಎನ್‌ಟಿಆರ್ ಸಾಥ್



ಸೆ.28 ರಂದು ಅದ್ದೂರಿ ಕಾರ್ಯಕ್ರಮ

ರಿಷಬ್ ಶೆಟ್ಟಿ ನಟಿಸಿ, ನಿರ್ದೇಶನ ಮಾಡಿರುವ ಕಾಂತಾರ ಚಾಪ್ಟರ್-1 ಸಿನಿಮಾ ಇದೇ ಅಕ್ಟೋಬರ್ 2 ರಂದು ವಿಶ್ವದಾದ್ಯಂತ ತೆರೆ ಕಾಣಲು ಸಿದ್ಧವಾಗಿದೆ. ಸದ್ಯ ಟ್ರೈಲರ್ ಮೂಲಕ ಗಮನ ಸೆಳೆದಿರುವ ಕಾಂತಾರ ಸಿನಿಮಾ ತಂಡ ಪ್ಯಾನ್ ಇಂಡಿಯಾ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದೆ. ಹೈದರಾಬಾದ್‌ನಲ್ಲಿ ಇವೆಂಟ್ ಇದೇ ಸೆ.28 ರಂದು ನಡೆಯಲಿದೆ. ಈ ಇವೆಂಟ್‌ಗೆ ಮುಖ್ಯ ಅತಿಥಿಯಾಗಿ ನಟ ಜೂ.ಎನ್‌ಟಿಆರ್ ಆಗಮಿಸಲಿದ್ದಾರೆ. ಜೂ.ಎನ್‌ಟಿಆರ್ ಹಾಗೂ ರಿಷಬ್ ಶೆಟ್ಟಿ ಅವರ ನಡುವೆ ಸಿನಿಮಾ ಇಂಡಸ್ಟ್ರಿ ಸ್ನೇಹ ಹೊರತುಪಡಿಸಿ ವೈಯಕ್ತಿಕವಾಗಿ ಉತ್ತಮವಾದ ಭಾಂದವ್ಯವಿದೆ. ಹೀಗಾಗಿ, ಕಾಂತಾರ ಸಿನಿಮಾದ ಪ್ರಮೋಷನ್‌ನಲ್ಲಿ ಜೂ.ಎನ್‌ಟಿಆರ್ ಭಾಗಿಯಾಗಲಿದ್ದಾರೆ. ಸೆ.28 ರಂದು ಹೈದರಾಬಾದ್‌ನಲ್ಲಿ ಅದ್ದೂರಿಯಾಗಿ ಕಾರ್ಯಕ್ರಮ ನಡೆಯಲಿದ್ದು, ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಸೇರಿದಂತೆ ಇಡೀ ಚಿತ್ರತಂಡ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಲಿದೆ. ಕಾಂತಾರ ಚಾಪ್ಟರ್-1 ತೆರೆಗೆ ಬರೋಕೆ ಇನ್ನಷ್ಟೇ ದಿನಗಳು ಬಾಕಿ ಇವೆ. ಈ ನಿಟ್ಟಿನಲ್ಲಿ ಚಿತ್ರತಂಡ ದೇಶದಾದ್ಯಂತ ಸಂಚರಿಸಿ ಪ್ರಚಾರವನ್ನ ಭರ್ಜರಿಯಾಗಿ ಮಾಡುತ್ತಿದೆ. ಇಂದಿನಿಂದ (ಸೆ.26) ಕರ್ನಾಟಕದಲ್ಲಿ ಅಡ್ವಾನ್ಸ್ ಟಿಕೆಟ್ ಬುಕ್ಕಿಂಗ್ ಓಪನ್ ಆಗಿದೆ. ಕಾಂತಾರ ಸಿನಿಮಾದ ಟ್ರೈಲರ್‌ಗೆ ಅದ್ಭುತವಾದ ರೆಸ್ಪಾನ್ಸ್ ಸಿಕ್ಕಿದೆ. ಸಿನಿಮಾವನ್ನ ಕಣ್ತುಂಬಿಕೊಳ್ಳಲು ಕಾಯ್ತಿರುವವರಿಗೆ ಕೆಲವೇ ದಿನಗಳಲ್ಲಿ ಕಾಂತಾರ ದರ್ಶನ ಸಿಗಲಿದೆ.

# ಸಂಜನಾಗೆ ಮತ್ತೆ ಮೋಸ ಮಾಡಿದ ಸಹ ಸ್ಪರ್ಧಿಗಳು

ಬಿಗ್‌ಬಾಸ್ ಮನೆಯಿಂದಲೇ ಹೊರಕ್ಕೆ

ಕನ್ನಡದ ನಟಿ ಸಂಜನಾ ಗಲ್ರಾನಿ ಬಿಗ್‌ಬಾಸ್ ತೆಲುಗು ಸೀಸನ್ 09ರ ಸ್ಪರ್ಧಿಯಾಗಿದ್ದು, ಕಳೆದ ಮೂರು ವಾರಗಳಲ್ಲಿ ಚೆನ್ನಾಗಿ ಆಡಿ ಮನೆಯ ಪ್ರಮುಖ ಸ್ಪರ್ಧಿ ಎನಿಸಿಕೊಂಡಿದ್ದಾರೆ. ಆದರೆ ಆರಂಭದಿಂದಲೂ ಮನೆಯ ಕೆಲವು ಸದಸ್ಯರು ಸಂಜನಾರನ್ನು ಟಾರ್ಗೆಟ್ ಮಾಡುತ್ತಲೇ ಇದ್ದಾರೆ. ನಟಿ ಸಂಜನಾ ಗಲ್ರಾನಿ ತೆಲುಗು ಬಿಗ್‌ಬಾಸ್ ಸೀಸನ್ 09ರಲ್ಲಿ ಸ್ಪರ್ಧಿಯಾಗಿ ಭಾಗಿ ಆಗಿದ್ದಾರೆ. ಶೋ ಪ್ರಾರಂಭವಾಗಿ ನಾಳೆಗೆ ಮೂರು ವಾರಗಳಾಗುತ್ತವೆ. ಸಂಜನಾ ಗಲ್ರಾನಿ ಆರಂಭದಿಂದಲೂ ಬಿಗ್‌ಬಾಸ್ ಮನೆಯಲ್ಲಿ ಇತರೆ ಸ್ಪರ್ಧಿಗಳಿಗಿಂತಲೂ ಭಿನ್ನವಾಗಿ ಗಮನ ಸೆಳೆಯುತ್ತಲೇ ಬಂದಿದ್ದಾರೆ. ಫಿಲ್ಟರ್ ಇಲ್ಲದೆ, ನೇರಾ-ನೇರ ಮಾತಿನ ಸಂಜನಾ ಗಲ್ರಾನಿ ಮನೆಯಲ್ಲಿ ಹಲವರ ವಿರೋಧವನ್ನೂ ಸಹ ಕಟ್ಟಿಕೊಂಡಿದ್ದಾರೆ. ಆದರೆ ಇದೇ ಕಾರಣಕ್ಕೆ ಈಗ ಮನೆಯ ಕೆಲ ಸದಸ್ಯರು ಸೇರಿಕೊಂಡು ಸಂಜನಾರನ್ನು ನೇರವಾಗಿ ಮನೆಯಿಂದಲೇ ಹೊರಗೆ ಹಾಕಿದ್ದಾರೆ. ಶುಕ್ರವಾರದ ಎಪಿಸೋಡ್‌ನಲ್ಲಿ ಕ್ಯಾಪ್ಟನ್ಸಿ ಟಾಸ್ಕ್ ನಡೆಯಿತು, ಇಮಾನ್ಯುಯೆಲ್ ಮನೆಯ ಮೂರನೇ ಕ್ಯಾಪ್ಟನ್ ಆದರು. ಕ್ಯಾಪ್ಟೆನ್ಸಿ ಟಾಸ್ಕ್ ಬಳಿಕ ಮನೆಗೆ ವೈಲ್ಡ್ ಕಾರ್ಡ್ ಎಂಟ್ರಿಯಾಗಿ ದಿವ್ಯಾ ನಿಖಿತ ಕಾಲಿಟ್ಟರು. ಮನೆಗೆ ಬಂದವರೇ ಕಾಮನರ್ಸ್ ಮೇಲೆ ಹರಿಹಾಯ್ದರು. ಅವರ ತಪ್ಪುಗಳನ್ನು ಎತ್ತಿ ತೋರಿಸಿದರು. ಆ ಬಳಿಕ ಎಲ್ಲರೂ ದಿನದ ಟಾಸ್ಕ್‌ಗಳನ್ನು ಮುಗಿಸಿ ಮಲಗಿರುವಾಗ ಬಿಗ್‌ಬಾಸ್ ಸೈರನ್ ಭಾರಿಸಿದರು. ನಿದ್ದೆಯಿಂದ ಎದ್ದ ಸ್ಪರ್ಧಿಗಳಿಗೆ ಮಿಡ್ ವೀಕ್ ಎಲಿಮಿನೇಷನ್ ಎಂಬ ಶಾಕ್ ನೀಡಿದರು. ಸಮಾನ್ಯವಾಗಿ ಸೀಸನ್‌ನ ಕೊನೆಯ ವಾರಗಳಲ್ಲಿ ಮಿಡ್ ವೀಕ್ ಎಲಿಮಿನೇಷನ್ ಮಾಡಲಾಗುತ್ತದೆ. ಆದರೆ ಈ ಬಾರಿ ಮೊದಲಲ್ಲೇ ಮಿಡ್ ವೀಕ್ ಎಲಿಮಿನೇಷನ್ ಮಾಡಲಾಗಿದೆ. ಸ್ಪರ್ಧಿಗಳಲ್ಲಿ ಯಾರಿಗೆ ರೆಡ್ ಸೀಡ್ಸ್ ಸಿಕ್ಕದೆಯೋ ಆ ಐದು ಮಂದಿ ಸೇರಿ ಒಬ್ಬರನ್ನು ಮನೆಯಿಂದ ಹೊರಗೆ ಕಳಿಸಬಹುದು ಎಂದು ಬಿಗ್‌ಬಾಸ್ ಹೇಳಿದರು. ಅದರಂತೆ ಐದು ಮಂದಿ ಒಕ್ಕೊರಲಿನಿಂದ ಸಂಜನಾರನ್ನು ಮನೆಯಿಂದ ಹೊರಗೆ ಕಳಿಸುವ ನಿರ್ಣಯ ತೆಗೆದುಕೊಂಡರು. ಇದು ಕೆಲವರಿಗೆ ಶಾಕ್ ನೀಡಿದರೆ ಇನ್ನು ಕೆಲವರಿಗೆ ಖುಷಿ ನೀಡಿತು.




# ಎಐ ಫೋಟೋ ವೈರಲ್ ಮಾಡಿದವ್ರಿಗೆ ಟಾಂಗ್

ಇತ್ತೀಚೆಗೆ ನಟಿ ಸಾಯಿಪಲ್ಲವಿ ಬಿಕಿನಿ ಧರಿಸಿರುವ ಫೋಟೋ ವೈರಲ್ ಆಗಿತ್ತು. ಆರಂಭದಲ್ಲಿ ಅಸಲಿಯಾ ನಕಲಿಯಾ ಎಂಬ ಹುಡುಕಾಟದಲ್ಲಿದ್ದ ಫ್ಯಾನ್ಸ್ ಗೆ ಇದು ಎಐ ಫೋಟೋ ಅನ್ನೋದು ಬಳಿಕ ತಿಳಿದುಬಂತು. ಇದೀಗ ಇದೇ ವೈರಲ್ ಫೋಟೋ ವಿಚಾರಕ್ಕೆ ಸಾಯಿಪಲ್ಲವಿ ಪರೋಕ್ಷವಾಗಿ ಪ್ರತಿಕ್ರಿಯೆ ಕೊಟ್ಟಿದ್ದಾರೆ. ಪ್ರವಾಸದ ಅಷ್ಟೂ ವೀಡಿಯೋ ಫೋಟೋಗಳನ್ನ ಇನ್ಸ್ಟಾದಲ್ಲಿ ಹಂಚಿಕೊಂಡಿದ್ದಾರೆ. ಜೊತೆಗೆ ಅವರು ಇಲ್ಲಿ ಕಾಣಿಸುವ ಫೋಟೋಗಳು ಎಐ ಫೋಟೋಗಳಲ್ಲ ಎಂದು ಹೇಳುವ ಮೂಲಕ ವೈರಲ್ ಮಾಡಿರೋ ಎಐ ಫೋಟೋ ದುರುಳರಿಗೆ ಟಾಂಗ್ ಕೊಟ್ಟಿದ್ದಾರೆ. ಸಾಯಿಪಲ್ಲವಿ ಇತ್ತೀಚೆಗೆ ತಂಗಿ ಪೂಜಾ ಹಾಗೂ ಕುಟುಂಬಸ್ಥರ ಜೊತೆ ಪ್ರವಾಸಕ್ಕೆ ತೆರಳಿದ್ರು. ಅಲ್ಲಿನ ಒಂದಷ್ಟು ಫೋಟೋಗಳನ್ನ ಪೂಜಾ ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಅಕ್ಕ ಸಾಯಿಪಲ್ಲವಿ ಜೊತೆ ಪೂಜಾ ಬೀಚ್‌ನಲ್ಲಿ ಸಮಯ ಕಳೆದಿರುವ ಫೋಟೋಗಳನ್ನ ಹಂಚಿಕೊಂಡಿದ್ದು ಅಕ್ಕ, ತಂಗಿ ಇಬ್ಬರೂ ಈಜುಡುಗೆ ಧರಿಸಿರುವ ಫೋಟೋವನ್ನೂ ಹಂಚಿಕೊಂಡಿದ್ದರು. ಆದರೆ ಈಜುಡುಗೆಗೂ ಬಿಕಿನಿಗೂ ವ್ಯತ್ಯಾಸ ಇರುತ್ತೆ. ಇದೇ ಫೋಟೋಗಳನ್ನ ಇಟ್ಟುಕೊಂಡು ಸಾಯಿಪಲ್ಲವಿ ಬಿಕಿನಿ ಧರಿಸಿ ನಿಂತಿರುವಂತೆ ಎಐ ಫೋಟೋಗಳನ್ನ ಜನರೇಟ್ ಮಾಡಿ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಮಾಡಲಾಗಿತ್ತು. ಸಾಯಿಪಲ್ಲವಿ ಇದುವರೆಗೂ ಹೀಗೆ ಯಾವತ್ತೂ ಕಾಣಿಸ್ಕೊಂಡಿಲ್ಲ. ಹೀಗಾಗಿ ಕೆಲವರ ಅಸಮಾಧಾನಕ್ಕೆ ಕಾರಣವಾಗಿದ್ದರು. ಜೊತೆಗೆ ಸಾಯಿಪಲ್ಲವಿ ರಾಮಾಯಣದಲ್ಲಿ ಸೀತೆ ಪಾತ್ರ ಮಾಡುತ್ತಿರುವ ಬಗ್ಗೆಯೂ ಅದೇ ಸೋಶಿಯಲ್ ಮೀಡಿಯಾದಲ್ಲಿ ಅಸಮಾಧಾನ ವ್ಯಕ್ತಪಡಿಸಿ ಟ್ರೋಲ್ ಮಾಡಲಾಗಿತ್ತು. ತಂತ್ರಜ್ಞಾನದ ದುರುಪಯೋಗಕ್ಕೆ ಬೇಸರಿಸಿಕೊಂಡ ಸಾಯಿಪಲ್ಲವಿ ಇದೀಗ ಏನನ್ನೂ ಹೇಳದೆ ಪ್ರವಾಸದ ನಿಜವಾದ ಚಿತ್ರಣ ಹೇಗಿತ್ತು ಅನ್ನೋದನ್ನ ಎಳೆ ಎಳೆಯಾಗಿ ದರ್ಶನ ಮಾಡಿಸಿದ್ದಾರೆ. ಇದ್ಯಾವ್ದೂ ಎಐ ಫೋಟೋಗಳಲ್ಲ ಅನ್ನೋದ್ರ ಮೂಲಕ ಸುಳ್ಳು ವದಂತಿ ಹಬ್ಬಿಸಿ ಸಾಯಿಪಲ್ಲವಿ ಬಗ್ಗೆ ಕೀಳರಿಮೆ ಮೂಡಿಸುವ ಪ್ರಯತ್ನದಲ್ಲಿದ್ದವರಿಗೆ ಟಾಂಗ್ ಕೊಟ್ಟಿದ್ದಾರೆ.

# ರಶ್ಮಿಕಾ ನಟನೆಯ ಹಿಂದಿ ಸಿನಿಮಾ ಟ್ರೈಲರ್ ಬಿಡುಗಡೆ

ನಟಿ ರಶ್ಮಿಕಾ ಮಂದಣ್ಣ ಈಗ ಬಾಲಿವುಡ್‌ನ ಬಲು ಬೇಡಿಕೆಯ ನಟಿ ಮತ್ತು ಇತ್ತೀಚೆಗಿನ ಬಲು ಯಶಸ್ವಿ ನಟಿ. ಇದೀಗ ರಶ್ಮಿಕಾ ಮಂದಣ್ಣ ನಟನೆಯ ಮತ್ತೊಂದು ಬಾಲಿವುಡ್ ಸಿನಿಮಾ ಬಿಡುಗಡೆಗೆ ರೆಡಿಯಾಗಿದೆ. ರಶ್ಮಿಕಾ ಮೊದಲ ಬಾರಿಗೆ ಭಿನ್ನವಾದ ಪಾತ್ರದಲ್ಲಿ ನಟಿಸಿದ್ದಾರೆ. ರಶ್ಮಿಕಾ ಮಂದಣ್ಣ ಈಗ ತೆಲುಗು, ತಮಿಳು ಹಾಗೂ ಬಾಲಿವುಡ್‌ನ ಬಲು ಬೇಡಿಕೆಯ ನಟಿ ಎನಿಸಿಕೊಂಡಿದ್ದಾರೆ. ಒಂದರ ಹಿಂದೆ ಒಂದರಂತೆ ಸತತವಾಗಿ ಮೂರು ಅಲ್ಟ್ರಾ ಬ್ಲಾಕ್ ಬಸ್ಟರ್ ಸಿನಿಮಾಗಳನ್ನು ರಶ್ಮಿಕಾ ಮಂದಣ್ಣ ನೀಡಿದ್ದಾರೆ. ಅವರು ನಟಿಸಿರುವ 'ಪುಷ್ಪ 2', 'ಅನಿಮಲ್' ಮತ್ತು 'ಛಾವಾ' ಸಿನಿಮಾಗಳು ಒಂದರ ಬಳಿಕ ಒಂದು ಬಿಡುಗಡೆ 1000 ಕೋಟಿಗೂ ಹೆಚ್ಚು ಹಣವನ್ನು ಗಳಿಕೆ ಮಾಡಿವೆ. ಅದರ ಬಳಿಕ ರಶ್ಮಿಕಾ ನಟಿಸಿದ್ದ 'ಕುಬೇರ' ಸಿನಿಮಾ ಸಹ ಬಾಕ್ಸ್ ಆಫೀಸ್‌ನಲ್ಲಿ ದೊಡ್ಡ ಹಿಟ್ ಆಯ್ತು. ರಶ್ಮಿಕಾ ಈಗ ಬಾಲಿವುಡ್‌ನ ಬಲು ಬೇಡಿಕೆಯ ನಟಿ ಎನಿಸಿಕೊಂಡಿದ್ದಾರೆ. ರಶ್ಮಿಕಾ ಮಂದಣ್ಣ ನಟನೆಯ ಮತ್ತೊಂದು ಹಿಂದಿ ಸಿನಿಮಾದ ಟ್ರೈಲರ್ ಕೂಡ ಇದೀಗ ಬಿಡುಗಡೆ ಆಗಿದ್ದು, ಸಿನಿಮಾದ ಬಿಡುಗಡೆ ದಿನಾಂಕ ಸಹ ಘೋಷಣೆ ಆಗಿದೆ. ರಶ್ಮಿಕಾ ಮಂದಣ್ಣ ಇದೇ ಮೊದಲ ಬಾರಿಗೆ ಹಾರರ್ ಸಿನಿಮಾ ಒಂದರಲ್ಲಿ ನಟಿಸಿದ್ದು, ಸಿನಿಮಾದ ಹೆಸರು 'ಥಮ'. ಆಯುಷ್ಮಾನ್ ಖುರಾನಾ ನಾಯಕನಾಗಿ ನಟಿಸಿರುವ ಈ ಸಿನಿಮಾನಲ್ಲಿ ರಶ್ಮಿಕಾ ಮಂದಣ್ಣ ನಾಯಕಿ ಮತ್ತು ಖ್ಯಾತ ನಟ ನವಾಜುದ್ದೀನ್ ಸಿದ್ಧಿಖಿ ವಿಲನ್ ಆಗಿ ನಟಿಸಿದ್ದಾರೆ. ಸಿನಿಮಾದ ಟ್ರೈಲರ್ ನಿನ್ನೆಯಷ್ಟೆ ಬಿಡುಗಡೆ ಆಗಿದೆ. ಸಿನಿಮಾ ಹಾರರ್ ಕಾಮಿಡಿ ಆಗಿದ್ದು ಇದರ ಜೊತೆಗೆ ಪ್ರೇಮಕತೆಯೂ ಇದೆ. ರಶ್ಮಿಕಾ ಮಂದಣ್ಣ ಸಾವಿರಾರು ವರ್ಷಗಳ ಹಿಂದೆ ನಿಧನ ಹೊಂದಿ ಈಗ ಪ್ರೇತವಾಗಿದ್ದಾರೆ, ಅದರಂತೆ ನವಾಜುದ್ದೀನ್ ಸಿದ್ಧಿಖಿ ಸಹ ಸಾವಿರಾರು ವರ್ಷಗಳ ಹಿಂದೆ ನಿಧನವಾಗಿದ್ದು ಎಲ್ಲೋ ಗುಹೆಯಲ್ಲಿ ಬಂಧಿಯಾಗಿರುತ್ತಾರೆ. ಆಯುಷ್ಮಾನ್ ಖುರಾನಾ ಇಂದಾಗಿ ಇಬ್ಬರಿಗೂ ಬಿಡುಗಡೆ ಸಿಗುತ್ತದೆ.



# ಆಟಗಾರರಿಗೆ ಫಿಟ್‌ನೆಸ್ ಸಮಸ್ಯೆ



ಕೆಲ ಬದಲಾವಣೆ ಮಾಡಿಕೊಳ್ಳುವುದು ಖಚಿತ

ಏಷ್ಯನ್ ರಾಷ್ಟ್ರಗಳ ಕ್ರಿಕೆಟ್ ಕದನವು ಮುಕ್ತಾಯದ ಹಂತಕ್ಕೆ ಬಂದು ನಿಂತಿದೆ. ಇಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಕಣಕ್ಕಿಳಿಯಲಿವೆ. ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ತನ್ನ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕೆಲ ಬದಲಾವಣೆ ಮಾಡಿಕೊಳ್ಳುವುದು ಖಚಿತ. ಭಾರತ ಮತ್ತು ಪಾಕಿಸ್ತಾನ್ ನಡುವಣ ಏಷ್ಯಾಕಪ್ ಫೈನಲ್ ಪಂದ್ಯವು ನಡೆಯಲಿದೆ.

ದುಬೈ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ರೂಪಿಸಬೇಕಾದ ಅನಿವಾರ್ಯತೆ ಇದೆ. ಏಕೆಂದರೆ ಶ್ರೀಲಂಕಾ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿದ ಇಬ್ಬರು ಆಟಗಾರರು ಫಿಟ್‌ನೆಸ್ ಸಮಸ್ಯೆಗೆ ಒಳಗಾಗಿದ್ದಾರೆ.

ಸೂಪರ್-4 ಹಂತದ ಕೊನೆಯ ಮ್ಯಾಚ್‌ನಲ್ಲಿ ಕಣಕ್ಕಿಳಿದಿದ್ದ ಟೀಮ್ ಇಂಡಿಯಾ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಸ್ನಾಯು ಸೆಳೆತಕ್ಕೆ ಒಳಗಾಗಿದ್ದಾರೆ. ಹೀಗಾಗಿ ಅವರು ಫೈನಲ್ ಪಂದ್ಯದಲ್ಲಿ ಕಣಕ್ಕಿಳಿಯುವುದು ಇನ್ನೂ ಸಹ ಖಚಿತವಾಗಿಲ್ಲ. ಇನ್ನು ಫೀಲ್ಡಿಂಗ್ ವೇಳೆ ತಿಲಕ್ ವರ್ಮಾ ಅವರ ಕಾಲಿಗೆ ಗಾಯವಾಗಿದೆ. ಹೀಗಾಗಿ ಅವರು ಅಂತಿಮ ಓವರ್‌ಗಳ ವೇಳೆ ಮೈದಾನ ತೊರೆದಿದ್ದರು. ಆ ನಂತರದ ಫೀಲ್ಡಿಂಗ್‌ನಲ್ಲಿ ಕಾಣಿಸಿಕೊಂಡಿರಲಿಲ್ಲ. ಹೀಗಾಗಿ ತಿಲಕ್ ವರ್ಮಾ ಕಣಕ್ಕಿಳಿಯುವುದು ಸಹ ಅನುಮಾನ ಎನ್ನಲಾಗುತ್ತಿದೆ. ಅಂದರೆ ಹಾರ್ದಿಕ್ ಪಾಂಡ್ಯ ಹಾಗೂ ತಿಲಕ್ ವರ್ಮಾ ಹೊರಗುಳಿದರೆ ಎರಡು ಬದಲಾವಣೆ ಕಂಡು ಬರುವುದು ಖಚಿತ. ಅಲ್ಲದೆ ಕಳೆದ ಪಂದ್ಯದಿಂದ ಹೊರಗುಳಿದಿದ್ದ ಜಸ್‌ಪ್ರೀತ್ ಬುಮ್ರಾ ಫೈನಲ್ ಮ್ಯಾಚ್ ಆಡಲಿದ್ದಾರೆ. ಹೀಗಾಗಿ ಹರ್ಷಿತ್ ರಾಣಾ ಪ್ಲೇಯಿಂಗ್ ಇಲೆವೆನ್‌ನಿಂದ ಹೊರಬೀಳಲಿದ್ದಾರೆ. ಅದರಂತೆ ಟೀಮ್ ಇಂಡಿಯಾ ಪರ ಆರಂಭಿಕರಾಗಿ ಅಭಿಷೇಕ್ ಶರ್ಮಾ ಹಾಗೂ ಶುಭ್‌ಮನ್ ಗಿಲ್ ಕಾಣಿಸಿಕೊಳ್ಳಲಿದ್ದಾರೆ. ಮೂರನೇ ಕ್ರಮಾಂಕದಲ್ಲಿ ಸೂರ್ಯಕುಮಾರ್ ಯಾದವ್ ಬ್ಯಾಟ್ ಬೀಸಲಿದ್ದಾರೆ.

ತಿಲಕ್ ವರ್ಮಾ ಹೊರಗುಳಿದರೆ ನಾಲ್ಕನೇ ಕ್ರಮಾಂಕದಲ್ಲಿ ರಿಂಕು ಸಿಂಗ್‌ಗೆ ಅವಕಾಶ ಸಿಗಬಹುದು. ಐದನೇ ಕ್ರಮಾಂಕದಲ್ಲಿ ವಿಕೆಟ್ ಕೀಪರ್ ಬ್ಯಾಟರ್ ಸಂಜು ಸ್ಯಾಮ್ಸನ್ ಕಣಕ್ಕಿಳಿಯಲಿದ್ದಾರೆ. ಇನ್ನು ಆರನೇ ಕ್ರಮಾಂಕದಲ್ಲಿ ಹಾರ್ದಿಕ್ ಪಾಂಡ್ಯ ಇದ್ದು, ಅವರು ಸಹ ಫೈನಲ್ ಮ್ಯಾಚ್‌ಗೆ ಅಲಭ್ಯರಾದರೆ ಶಿವಂ ದುಬೆ ಆಡುವ ಬಳಗದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಏಳನೇ ಕ್ರಮಾಂಕದಲ್ಲಿ ಅಕ್ಷರ್ ಪಟೇಲ್ ಕಾಣಿಸಿಕೊಂಡರೆ, ಬೌಲರ್‌ಗಳಾಗಿ ಜಸ್‌ಪ್ರೀತ್ ಬುಮ್ರಾ, ಅರ್ಷದೀಪ್ ಸಿಂಗ್, ಕುಲ್ದೀಪ್ ಯಾದವ್ ಹಾಗೂ ವರುಣ್ ಚಕ್ರವರ್ತಿ ಕಾಣಿಸಿಕೊಳ್ಳುವುದು ಬಹುತೇಕ ಖಚಿತ ಎನ್ನಬಹುದು.

# ಪಾಕ್ ವಿರುದ್ಧದ ಪಂದ್ಯಕ್ಕೂ ಮುನ್ನ ಭಾರತಕ್ಕೆ ಬಿಗ್ ಶಾಕ್

ಹಾರ್ದಿಕ್, ಅಭಿಷೇಕ್, ತಿಲಕ್ ಹೊರಕ್ಕೆ

ಶ್ರೀಲಂಕಾ ವಿರುದ್ಧದ ಏಷ್ಯಾಕಪ್ ಪಂದ್ಯದಲ್ಲಿ ಮೊದಲ ಓವರ್ ಬೌಲ್ ಮಾಡಿದ ನಂತರ ಹಾರ್ದಿಕ್ ಪಾಂಡ್ಯ ಮೈದಾನದಿಂದ ಹೊರನಡೆದರು. ಅಭಿಷೇಕ್ ಶರ್ಮಾ ಮತ್ತು ತಿಲಕ್ ವರ್ಮಾ ಕೂಡ ಸ್ವಲ್ಪ ಸಮಯದ ನಂತರ ಮೈದಾನದಿಂದ ಹೊರನಡೆಯಬೇಕಾಯಿತು.

ಸದ್ಯ ಪಾಕಿಸ್ತಾನ ವಿರುದ್ಧದ ಫೈನಲ್ಗು ಮುನ್ನ ಟೀಮ್ ಇಂಡಿಯಾಕ್ಕೆ ಟೆನ್ಶನ್ ಶುರುವಾಗಿದೆ. ಭಾರತಕ್ಕೆ, ಏಷ್ಯಾ ಕಪ್ 2025 ರಲ್ಲಿ ಶ್ರೀಲಂಕಾ ವಿರುದ್ಧದ ಪಂದ್ಯವು ಕೇವಲ ಅಭ್ಯಾಸ ಪಂದ್ಯವಾಗಿತ್ತು. ಫೈನಲ್‌ಗೆ ಮೊದಲು, ಟೀಮ್ ಇಂಡಿಯಾ ಜಸ್ಪ್ರೀತ್ ಬುಮ್ರಾ ಮತ್ತು ಶಿವಂ ದುಬೆಗೆ ವಿಶ್ರಾಂತಿ ನೀಡಿತು. ಬೆಂಚ್ ಕಾದಿದ್ದ ಆಟಗಾರರಾದ ಅರ್ಶ್‌ದೀಪ್ ಸಿಂಗ್ ಮತ್ತು ಹರ್ಷಿತ್ ರಾಣಾ ಅವರಿಗೆ ಆಡಲು ಅವಕಾಶ ನೀಡಲಾಯಿತು. ಇದರ ಹೊರತಾಗಿಯೂ, ಫೈನಲ್‌ಗೆ ಮುಂಚಿತವಾಗಿ ಈ ಪಂದ್ಯವು ಟೀಮ್ ಇಂಡಿಯಾಕ್ಕೆ ದೊಡ್ಡ ಹಿನ್ನಡೆಯನ್ನುಂಟು ಮಾಡಿದೆ. ಹಾರ್ದಿಕ್ ಪಾಂಡ್ಯ ಮೊದಲ ಓವರ್ ಬೌಲ್ ಮಾಡಿದ ನಂತರ ಸೆಳೆತದಿಂದಾಗಿ ಮೈದಾನವನ್ನು ತೊರೆದರು. ಅವರು ಬಳಿಕ ಮೈದಾನದಕ್ಕೆ ಹಿಂತಿರುಗಲಿಲ್ಲ.

ಅಭಿಷೇಕ್ ಶರ್ಮಾ ಮತ್ತು ತಿಲಕ್ ವರ್ಮಾ ಕೂಡ ಹೊರನಡೆದರು ಹಾರ್ದಿಕ್ ಪಾಂಡ್ಯ ಜೊತೆಗೆ, ಟೀಮ್ ಇಂಡಿಯಾದ ಯುವ ಬ್ಯಾಟ್ಸ್‌ಮನ್‌ಗಳಾದ ಅಭಿಷೇಕ್ ಶರ್ಮಾ ಮತ್ತು ತಿಲಕ್ ವರ್ಮಾ ಕೂಡ ಶ್ರೀಲಂಕಾ ವಿರುದ್ಧದ ಪಂದ್ಯದಲ್ಲಿ ತೊಂದರೆ ಅನುಭವಿಸಿದ್ದಾರೆ. 10 ನೇ ಓವರ್‌ನ ಎರಡನೇ ಎಸೆತದ ನಂತರ ಅಭಿಷೇಕ್ ನಿರ್ಗಮಿಸಿದರು. 18 ನೇ ಓವರ್‌ನಲ್ಲಿ ತಿಲಕ್ ವರ್ಮಾ ಕೂಡ ಗಾಯಗೊಂಡರು. ಅಕ್ಷರ್ ಪಟೇಲ್ ಎಸೆದ ಬೌಲಿಂಗ್‌ನಲ್ಲಿ ದಾಸುನ್ ಶನಕ ಮಿಡ್-ವಿಕೆಟ್‌ನಲ್ಲಿ ಸಿಕ್ಸರ್ ಬಾರಿಸಿದರು. ತಿಲಕ್ ವರ್ಮಾ ಚೆಂಡನ್ನು ತಡೆಯಲು ಎತ್ತರಕ್ಕೆ ಹಾರಿದರು. ಲ್ಯಾಂಡ್ ಆದ ನಂತರ, ತಿಲಕ್ ಅವರ ಕಾಲಿನಲ್ಲಿ ತೊಂದರೆ ಕಾಣಿಸಿಕೊಂಡಿತು ಮತ್ತು ಸರಿಯಾಗಿ ನಡೆಯಲು ಸಾಧ್ಯವಾಗಲಿಲ್ಲ. ಅವರು ಮೈದಾನವನ್ನು ತೊರೆದರು. ಹೀಗಾಗಿ ಶಿವಂ ದುಬೆ ಫೀಲ್ಡಿಂಗ್‌ಗೆ ಬಂದರು.

ಹಾರ್ದಿಕ್ ಮತ್ತು ಅಭಿಷೇಕ್ ಸೆಳೆತದಿಂದ ಬಳಲುತ್ತಿದ್ದರು, ಅದಕ್ಕಾಗಿಯೇ ಇಬ್ಬರೂ ಆಟಗಾರರು ಮೈದಾನವನ್ನು ತೊರೆದರು. ಬೌಲಿಂಗ್ ಕೋಚ್ ಮೋರ್ನೆ ಮೋರ್ಕೆಲ್ ಪಂದ್ಯದ ನಂತರದ ಪತ್ರಿಕಾಗೋಷ್ಠಿಯಲ್ಲಿ ಅಭಿಷೇಕ್ ಚೆನ್ನಾಗಿದ್ದಾರೆ ಎಂದು ಹೇಳಿದ್ದಾರೆ, ಆದರೆ ಹಾರ್ದಿಕ್ ಅವರನ್ನು ಪ್ರಸ್ತುತ ಮಾನಿಟರಿಂಗ್ ಮಾಡುತ್ತಿದ್ದೇವೆ. ದುಬೈನಲ್ಲಿ ಇದು ತುಂಬಾ ಬಿಸಿಲಿನ ವಾತಾವರಣವಾಗಿದ್ದು, ಅದಕ್ಕಾಗಿಯೇ ಆಟಗಾರರು ಸೆಳೆತವನ್ನು ಅನುಭವಿಸುತ್ತಿದ್ದಾರೆ. ಈ ಮಹತ್ವದ ಪಂದ್ಯಕ್ಕೆ ಈ ಮೂವರು ಆಟಗಾರರು ಫಿಟ್ ಆಗಿರುತ್ತಾರೆ ಎಂಬುದು ದೊಡ್ಡ ಪ್ರಶ್ನೆಯಾಗಿದೆ. ಅಭಿಷೇಕ್ ಟೂರ್ನಿಯ ಅತಿ ಹೆಚ್ಚು ರನ್ ಗಳಿಸಿದ ಆಟಗಾರ.



# ಭಾರತ ಏಷ್ಯಾಕಪ್ ಗೆದ್ದರೆ ಸಿಗುವ ಹಣವೆಷ್ಟು



ಸೋತ ಪಾಕಿಸ್ತಾನಕ್ಕೆ ಸಿಗುವುದೆಷ್ಟು

2025ರ ಏಷ್ಯಾಕಪ್ ಫೈನಲ್‌ನಲ್ಲಿ ಭಾರತ-ಪಾಕಿಸ್ತಾನ ಮೊದಲ ಬಾರಿಗೆ ಮುಖಾಮುಖಿಯಾಗಲಿವೆ. ವಿಜೇತ ತಂಡಕ್ಕೆ 2.6 ಕೋಟಿ ರೂ. ಮತ್ತು ರನ್ನರ್‌ಅಪ್‌ಗೆ 1.3 ಕೋಟಿ ರೂ. ಬಹುಮಾನ ನೀಡಲಾಗುತ್ತದೆ. 2023ಕ್ಕೆ ಹೋಲಿಸಿದರೆ ಈ ಬಾರಿ ಬಹುಮಾನದ ಮೊತ್ತ ಹೆಚ್ಚಾಗಿದೆ. ಸರಣಿ ಶ್ರೇಷ್ಠ ಪ್ರಶಸ್ತಿಗೂ 12.5 ಲಕ್ಷ ರೂ. ಸಿಗಲಿದೆ. ಈ ಐತಿಹಾಸಿಕ ಪಂದ್ಯದಲ್ಲಿ ಯಾರು ಗೆಲ್ಲುತ್ತಾರೆ ಎಂಬುದು ಕುತೂಹಲಕಾರಿಯಾಗಿದೆ. ಸೆಪ್ಟೆಂಬರ್ 9 ರಂದು ಅಬುಧಾಬಿಯಲ್ಲಿ ಪ್ರಾರಂಭವಾದ 2025 ರ ಏಷ್ಯಾಕಪ್ ಇದೀಗ ಅಂತಿಮ ಹಂತ ತಲುಪಿದೆ. ಪಂದ್ಯಾವಳಿಯ ಇತಿಹಾಸದಲ್ಲಿ ಮೊದಲ ಬಾರಿಗೆ ಭಾರತವು ಫೈನಲ್‌ನಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ. ಟೂರ್ನಿಯಲ್ಲಿ ಹಾಲಿ ಚಾಂಪಿಯನ್ ಆಗಿರುವ ಟೀಂ ಇಂಡಿಯಾ ತನ್ನ ಪ್ರಶಸ್ತಿ ಉಳಿಸಿಕೊಳ್ಳಲು ಹೋರಾಡಿದರೆ, ಇತ್ತ ಪಾಕಿಸ್ತಾನ ಹ್ಯಾಟ್ರಿಕ್ ಸೋಲಿನ ಮುಜುಗರದಿಂದ ಪಾರಾಗಲು ಪ್ರಯತ್ನಿಸಲಿದೆ. ಈ ಐತಿಹಾಸಿಕ ಪಂದ್ಯ ನಡೆಯುವುದಕ್ಕೂ ಮುನ್ನ ಈ ಟೂರ್ನಿಯ ವಿಜೇತ ಮತ್ತು ರನ್ನರ್-ಅಪ್ ತಂಡಗಳಿಗೆ ಸಿಗುವ ಬಹುಮಾನದ ಹಣ ಎಷ್ಟು ಎಂಬುದನ್ನು ನೋಡೋಣ.

**ಏಷ್ಯಾಕಪ್ ಬಹುಮಾನದ ಮೊತ್ತ ಎಷ್ಟು:** 2025 ರ ಏಷ್ಯಾಕಪ್‌ನಲ್ಲಿ ಒಟ್ಟು ಎಂಟು ತಂಡಗಳು ಭಾಗವಹಿಸಿದ್ದವು. ಆದರೆ ಫೈನಲ್ ಪಂದ್ಯಕ್ಕೆ ಭಾರತ ಮತ್ತು ಪಾಕಿಸ್ತಾನ ಮಾತ್ರ ಅರ್ಹತೆ ಪಡೆದಿವೆ. ಸೆಪ್ಟೆಂಬರ್ 28 ರಂದು ನಡೆಯುವ ಪಂದ್ಯದಲ್ಲಿ ಗೆಲ್ಲುವ ತಂಡಕ್ಕೆ ಟ್ರೋಫಿಯೊಂದಿಗೆ ಕೋಟಿ ರೂ. ಮೊತ್ತದ ಬಹುಮಾನವನ್ನು ನೀಡಲಾಗುತ್ತದೆ. ವರದಿಯ ಪ್ರಕಾರ, ವಿಜೇತ ತಂಡವು 2.6 ಕೋಟಿ ರೂಗಳನ್ನು ಬಹುಮಾನವಾಗಿ ಪಡೆದರೆ, ರನ್ನರ್ ಅಪ್ ತಂಡಕ್ಕೆ 1.3 ಕೋಟಿ ರೂ. ಬಹುಮಾನ ಸಿಗಲಿದೆ. ಕಳೆದ ಬಾರಿಗೆ ಹೋಲಿಸಿದರೆ, ಈ ಬಾರಿ ಏಷ್ಯಾಕಪ್ ಬಹುಮಾನದ ಮೊತ್ತದಲ್ಲಿ ಹೆಚ್ಚಳ ಮಾಡಲಾಗಿದೆ.

2023 ರಲ್ಲಿ ನಡೆದ ಏಷ್ಯಾಕಪ್‌ನ ಫೈನಲ್‌ನಲ್ಲಿ ರೋಹಿತ್ ಶರ್ಮಾ ನಾಯಕತ್ವದ ಭಾರತ ತಂಡವು ಶ್ರೀಲಂಕಾವನ್ನು ಸೋಲಿಸಿ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಆ ಆವೃತ್ತಿಯಲ್ಲಿ ಚಾಂಪಿಯನ್ ಭಾರತಕ್ಕೆ 1.25 ಕೋಟಿ ರೂಗಳನ್ನು ಬಹುಮಾನವಾಗಿ ನೀಡಲಾಗಿತ್ತು. ಹೀಗಾಗಿ ಈ ಬಾರಿ ಎಸಿಸಿ ಬಹುಮಾನದ ಹಣವನ್ನು ಹೆಚ್ಚಿಸಿದ್ದು, ವಿಜೇತ ತಂಡಕ್ಕೆ 2.6 ಕೋಟಿ ರೂ. ಬಹುಮಾನ ಸಿಗಲಿದೆ. ಇದು ಮಾತ್ರವಲ್ಲದೆ 2025 ರ ಏಷ್ಯಾಕಪ್‌ನಲ್ಲಿ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ಗೆಲ್ಲುವ ಆಟಗಾರನಿಗೂ ಭಾರಿ ಮೊತ್ತದ ಬಹುಮಾನ ಸಿಗಲಿದ್ದು, ಈ ಪ್ರಶಸ್ತಿ ಗೆಲ್ಲುವ ಆಟಗಾರನಿಗೆ 12.5 ಲಕ್ಷ ರೂ. ಬಹುಮಾನ ಸಿಗಲಿದೆ. 2025 ರ ಏಷ್ಯಾಕಪ್‌ನ ಅಂತಿಮ ಪಂದ್ಯ ಐತಿಹಾಸಿಕವಾಗಲಿದೆ.

# ಭಾರತದ ಅಹಂಕಾರವನ್ನ ಮುಗಿಸಿಬಿಡಿ



ಪಾಕ್ ಪಡೆಗೆ ಅಖ್ತರ್ ಖಡಕ್ ಸಂದೇಶ

ಭಾರತ ಮತ್ತು ಪಾಕಿಸ್ತಾನ್ ನಡುವಣ ಮತ್ತೊಂದು ಪಂದ್ಯಕ್ಕೆ ವೇದಿಕೆ ಸಿದ್ಧವಾಗಿದೆ. ಈ ಬಾರಿ ವೇದಿಕೆ ರೂಪುಗೊಂಡಿರುವುದು ಏಷ್ಯಾಕಪ್ ಫೈನಲ್‌ನಲ್ಲಿ. ಅಂದರೆ ಇದೇ ಮೊದಲ ಬಾರಿಗೆ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಏಷ್ಯಾಕಪ್ ಫೈನಲ್‌ನಲ್ಲಿ ಮುಖಾಮುಖಿಯಾಗುತ್ತಿದೆ. ಭಾರತ ಮತ್ತು ಪಾಕಿಸ್ತಾನ್ ನಡುವಣ ಫೈನಲ್ ಪಂದ್ಯಕ್ಕೆ ಕೌಂಟ್ ಡೌನ್ ಶುರುವಾಗಿದೆ. ಸೆ.28 ನಡೆಯಲಿರುವ ಏಷ್ಯಾಕಪ್‌ನ ಅಂತಿಮ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿಗಳು ಮುಖಾಮುಖಿಯಾಗಲಿದ್ದಾರೆ. ಈ ಪಂದ್ಯದಲ್ಲಿ ಭಾರತ ತಂಡವನ್ನು ಬಗ್ಗು ಬಡಿದು, ಅವರ ಅಹಂಕಾರವನ್ನು ಮುಗಿಸಬೇಕೆಂದು ಪಾಕಿಸ್ತಾನ್ ವೇಗಿ ಶೊಯೆಬ್ ಅಖ್ತರ್ ತಮ್ಮ ತಂಡಕ್ಕೆ ಖಡಕ್ ಸಂದೇಶ ರವಾನಿಸಿದ್ದಾರೆ. ಚಾನೆಲ್ ಚರ್ಚೆಯೊಂದರಲ್ಲಿ ಮಾತನಾಡಿದ ಶೊಯೆಬ್ ಅಖ್ತರ್, ಭಾನುವಾರ ಪಾಕಿಸ್ತಾನ್ ತಂಡ ಭಾರತದ ಅಹಂಕಾರವನ್ನು ಮುಗಿಸಬೇಕು. ಪಾಕಿಸ್ತಾನ್ ಕೂಡ ಅದೇ ಮನೋಭಾವದಿಂದ ಕಣಕ್ಕಿಳಿಯುವುದನ್ನು ಎದುರು ನೋಡುತ್ತೇನೆ. ನಿಮ್ಮೊಡನೆ ಆಡಿದ್ರೆ, ನೀವು ಏನು ಮಾಡಬಲ್ಲಿರಿ ಎಂಬುದನ್ನು ಭಾರತಕ್ಕೆ ತೋರಿಸಿ ಎಂದು ಶೊಯೆಬ್ ಅಖ್ತರ್ ಪಾಕಿಸ್ತಾನ್ ತಂಡವನ್ನು ಹುರಿದುಂಬಿಸಿದ್ದಾರೆ. ಶೊಯೆಬ್ ಅಖ್ತರ್ ಹೀಗೆ ಹೇಳಲು ಮುಖ್ಯ ಕಾರಣ ಇತ್ತೀಚೆಗೆ ಟೀಮ್ ಇಂಡಿಯಾ ನಾಯಕ ಸೂರ್ಯಕುಮಾರ್ ಯಾದವ್ ನೀಡಿದ ಹೇಳಿಕೆ. ಪಾಕಿಸ್ತಾನ್ ವಿರುದ್ಧದ ಸೂಪರ್-4 ಪಂದ್ಯದಲ್ಲಿ ಗೆದ್ದ ಬಳಿಕ ಟೀಮ್ ಇಂಡಿಯಾ ನಾಯಕ ಸೂರ್ಯಕುಮಾರ್ ಯಾದವ್ ಪಾಕ್ ತಂಡವನ್ನು ಇನ್ಮುಂದೆ ನಮ್ಮ ಪ್ರಬಲ ಪ್ರತಿಸ್ಪರ್ಧಿ ಎಂದು ಬಿಂಬಿಸಬೇಡಿ ಎಂದು ಮಾಧ್ಯಮದವರಿಗೆ ಮನವಿ ಮಾಡಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966